ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್ Editor : Sundar

ಏಕ ಕಾಲಕ್ಕೆ ಬಳ್ಳಾರಿ, ಕೊಪ್ಪಳ, ಯಾದಗಿರಿ, ರಾಯಚೂರು, ಕಲಬುರ್ಗಿ, ಬೀದರ, ವಿಜಯನಗರ ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 256 RNI Number : KNKAN/25/A2770 29-09-2026 Tuesday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ:256 ರಾಯಚೂರು 29-09-2026 ಮಂಗಳವಾರ ಪುಟ 04 ಬೆಲೆ ರೂ.2/- ಮೊ:8660146563

ಮೈಸೂರು ದಸರಾ ಉದ್ಘಾಟನೆಗೆ ಗವಿಸಿದ್ದೇಶ್ವರ ಶ್ರೀಗಳಿಗೆ ಅಧಿಕೃತ ಆಹ್ವಾನ

ಕೊಪ್ಪಳ,ಸೆ.28–

ವಿಶ್ವವಿಖ್ಯಾತ ಮೈಸೂರು ದಸರಾ ಮಹೋತ್ಸವದ ಉದ್ಘಾಟಕರಾಗಿ ಆಯ್ಕೆಯಾಗಿರುವ ಕೊಪ್ಪಳದ ಶ್ರೀ ಗವಿಮಠದ ಅಭಿನವ ಗವಿಸಿದ್ದೇಶ್ವರ ಮಹಾಸ್ವಾಮೀಜಿಯವರಿಗೆ ಇಂದು ಅಧಿಕೃತವಾಗಿ ಆಹ್ವಾನ ನೀಡಲಾಯಿತು. ಕನ್ನಡ ಮತ್ತು ಸಂಸ್ಕೃತಿ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಸಚಿವ ಶಿವರಾಜ್ ಎಸ್. ತಂಗಡಗಿ ಅವರು ಫಲಪುಷ್ಪ ನೀಡಿ ಶ್ರೀಗಳನ್ನು ಮೈಸೂರು ದಸರಾ ಮಹೋತ್ಸವದ ಉದ್ಘಾಟನೆಗೆ ಆಹ್ವಾನಿಸಿದರು.

ನಾಡಹಬ್ಬ ಮೈಸೂರು ದಸರಾ ಮಹೋತ್ಸವಕ್ಕೆ ಈ ಬಾರಿ ಕೊಪ್ಪಳದ ಗವಿಮಠದ ಶ್ರೀಗಳು ಚಾಲನೆ ನೀಡಲಿರುವುದು ಜಿಲ್ಲೆಯ ಭಕ್ತರು ಹಾಗೂ ಸಾರ್ವಜನಿಕರಲ್ಲಿ



ಸಂತಸ ತಂದಿದೆ. ಈ ಮೂಲಕ ಕೊಪ್ಪಳದ ಧಾರ್ಮಿಕ ಹಾಗೂ ಸಾಮಾಜಿಕ ಕ್ಷೇತ್ರಕ್ಕೆ ರಾಜ್ಯಮಟ್ಟದಲ್ಲಿ ಮತ್ತೊಂದು ಗೌರವ ದೊರೆತಂತಾಗಿದೆ.

ಮೈಸೂರು ದಸರಾ ಉದ್ಘಾಟಕರಾಗಿ ಗವಿಸಿದ್ದೇಶ್ವರ ಶ್ರೀಗಳನ್ನು ಆಯ್ಕೆ ಮಾಡಿರುವುದಾಗಿ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ವಿಧಾನಮಂಡಲದ ಸದನದಲ್ಲಿ ಘೋಷಿಸಿದ್ದರು. ಈ ಘೋಷಣೆಯ ಬೆನ್ನಲ್ಲೇ ಶ್ರೀಗಳ ದಸರಾ ಉದ್ಘಾಟನೆಯ ಕುರಿತು ರಾಜ್ಯಾದ್ಯಂತ ಚರ್ಚೆ ನಡೆದಿತ್ತು. ಇದೀಗ ಅಧಿಕೃತ ಆಹ್ವಾನ ನೀಡಿರುವುದರಿಂದ ದಸರಾ ಕಾರ್ಯಕ್ರಮದಲ್ಲಿ ಶ್ರೀಗಳ ಭಾಗವಹಿಸುವಿಕೆಗೆ ಸಂಬಂಧಿಸಿದ ಪ್ರಕ್ರಿಯೆ ಮತ್ತೊಂದು ಹಂತ ತಲುಪಿದೆ.

ಗವಿಮಠವು ಧಾರ್ಮಿಕ ಚಟುವಟಿಕೆಗಳ ಜೊತೆಗೆ ಶಿಕ್ಷಣ, ಆರೋಗ್ಯ, ದಾಸೋಹ ಸೇರಿದಂತೆ ವಿವಿಧ ಸಾಮಾಜಿಕ ಸೇವಾ ಕಾರ್ಯಗಳ ಮೂಲಕ ಗುರುತಿಸಿಕೊಂಡಿದೆ. ಮೈಸೂರು ದಸರಾ ಮಹೋತ್ಸವದ ಉದ್ಘಾಟನೆಗೆ ಶ್ರೀಗಳಿಗೆ ದೊರೆತಿರುವ ಆಹ್ವಾನವು ಕೊಪ್ಪಳ ಜಿಲ್ಲೆಯ ಜನರಲ್ಲಿ ವಿಶೇಷ ಆಸಕ್ತಿ ಮೂಡಿಸಿದ್ದು, ಶ್ರೀಗಳು ದಸರಾ ವೇದಿಕೆಯಲ್ಲಿ ನೀಡಲಿರುವ ಸಂದೇಶದ ಕುರಿತು ಭಕ್ತರು ಕಾತರದಿಂದ ಕಾಯುತ್ತಿದ್ದಾರೆ.

ಈ ಸಂದರ್ಭದಲ್ಲಿ ಸಂಸದ ರಾಜಶೇಖರ್ ಹಿಟ್ನಾಳ್, ಶಾಸಕ ಕೆ. ರಾಘವೇಂದ್ರ ಹಿಟ್ನಾಳ್, ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ್ ನಾಗಪ್ಪ, ವಿಧಾನ ಪರಿಷತ್ ಸದಸ್ಯ ಬಸನಗೌಡ ಬಾದರ್ಲಿ, ಜಿಲ್ಲಾಧಿಕಾರಿ ಸುರೇಶ್ ಇಟ್ನಾಳ್,

3ನೇ ಪುಟ.....

ಮುಷ್ಕರ ವಾಪಸ್ : ಎಂದಿನಂತೆ ಕಾರ್ಯನಿರ್ವಹಿಸಲಿವೆ ಬ್ಯಾಂಕ್‌ಗಳು

ನವದೆಹಲಿ, ಸೆ. 28

ವಾರದಲ್ಲಿ ಐದು ದಿನಗಳ ಕೆಲಸ ಸೇರಿದಂತೆ ವಿವಿಧ ಬೇಡಿಕೆಗಳ ಕುರಿತು ಇಂಡಿಯನ್ ಬ್ಯಾಂಕ್ಸ್ ಅಸೋಸಿಯೇಷನ್ (ಐಬಿಎ) ನೀಡಿದ ಭರವಸೆಯ ಮೇರೆಗೆ ಬ್ಯಾಂಕ್ ಸಂಘಟನೆಗಳು ತಮ್ಮ ಮೂರು ದಿನಗಳ ರಾಷ್ಟ್ರವ್ಯಾಪಿ ಮುಷ್ಕರವನ್ನು ಹಿಂಪಡೆದಿವೆ. ಹೀಗಾಗಿ, ಇಂದಿನಿಂದ ಬ್ಯಾಂಕಿಂಗ್ ಕಾರ್ಯಾಚರಣೆಗಳು ಎಂದಿನಂತೆ ಮುಂದುವರಿಯಲಿವೆ.

ಸೆ. 28ರಿಂದ 30ರವರೆಗೆ ನಡೆಯಬೇಕಿದ್ದ ಈ ಮುಷ್ಕರಕ್ಕೆ ಯುನೈಟೆಡ್ ಫೋರಂ ಆಫ್ ಬ್ಯಾಂಕ್ ಯೂನಿಯನ್ಸ್ ಕರೆ ನೀಡಿತ್ತು.ಎಲ್ಲಾ ಶನಿವಾರಗಳನ್ನೂ ರಜಾದಿನಗಳೆಂದು ಘೋಷಿಸುವುದು ಸೇರಿದಂತೆ ತಮ್ಮ ಬೇಡಿಕೆಗಳನ್ನು ಪರಿಶೀಲಿಸುವುದಾಗಿ ಐಬಿಎ



ಭರವಸೆ ನೀಡಿದ ಹಿನ್ನೆಲೆಯಲ್ಲಿ ಬ್ಯಾಂಕ್ ಸಂಘಟನೆಗಳು ತಡರಾತ್ರಿ ಮುಷ್ಕರವನ್ನು ಹಿಂಪಡೆದವು.

ಉಳಿದ ಶನಿವಾರಗಳನ್ನು ರಜಾದಿನಗಳೆಂದು ಘೋಷಿಸುವ ಕುರಿತು ಚರ್ಚಿಸಲು ಉನ್ನತ ಮಟ್ಟದ ಸಮಿತಿಯನ್ನು ತಕ್ಷಣವೇ ರಚಿಸಲಾಗುವುದು. ಈ ಸಮಿತಿಯು ಎಲ್ಲ ಸಂಭಾವ್ಯ ಪರ್ಯಾಯಗಳನ್ನು ಪರಿಶೀಲಿಸಿ, ಎಲ್ಲ ಪಾಲುದಾರರೊಂದಿಗೆ ಚರ್ಚಿಸಿ, ಮುಖ್ಯವಾಗಿ ಗ್ರಾಹಕರಿಗೆ ಸ್ವೀಕಾರಾರ್ಹವಾದ ಪರಿಹಾರ ರೂಪಿಸಲಿದೆ ಎಂದು ತಡರಾತ್ರಿ ನೀಡಿದ ಹೇಳಿಕೆಯಲ್ಲಿ ತಿಳಿಸಲಾಗಿದೆ.

ಪ್ರಸ್ತುತ ಬ್ಯಾಂಕ್‌ಗಳು ಭಾನುವಾರ ಹಾಗೂ ಪ್ರತಿ ತಿಂಗಳ ಎರಡನೇ ಮತ್ತು ನಾಲ್ಕನೇ ಶನಿವಾರದಂದು ಮುಚ್ಚಿರುತ್ತವೆ.ಎ ಸ್ಕೇಲ್ ಮತ್ತು ಅದಕ್ಕಿಂತ ಮೇಲಿನ ಶ್ರೇಣಿಯ ಅಧಿಕಾರಿಗಳಿಗೆ ಅನ್ವಯಿಸುವ ಪಿಎಲ್‌ಐ ಯೋಜನೆಗೆ ಸಂಬಂಧಿಸಿದಂತೆ ಸಂಘಟನೆಗಳು ಹಾಗೂ ಸಂಘಗಳ ಅಭಿಪ್ರಾಯಗಳನ್ನು ಪರಿಗಣಿಸಿ ಸರ್ಕಾರಕ್ಕೆ ಬದಲಾವಣೆಗಳನ್ನು ಪ್ರಸ್ತಾಪಿಸಲು ಸಂಬಂಧಪಟ್ಟವರೊಂದಿಗೆ ಚರ್ಚೆ ನಡೆಸಲಾಗುವುದು ಎಂದು ತಿಳಿಸಲಾಗಿದೆ.

ಮಾರ್ಚ್ 8, 2024ರ ಸಭೆಯ ನಡವಳಿಕೆಗಳಲ್ಲಿ ಪಟ್ಟಿ ಮಾಡಲಾಗಿರುವ ಉಳಿದ ವಿಷಯಗಳ ತ್ವರಿತ ಇತ್ಯರ್ಥಕ್ಕಾಗಿ ಸಂಬಂಧಪಟ್ಟ ಪಕ್ಷಗಳ ನಡುವೆ ಚರ್ಚೆ ನಡೆಸಲಾಗುವುದು ಎಂದು ಹೇಳಲಾಗಿದೆ. ಮೂರು ದಿನಗಳ ಮುಷ್ಕರದ ಹಿನ್ನೆಲೆಯಲ್ಲಿ ಗ್ರಾಹಕರಿಗೆ ಉಂಟಾಗುವ ಅನಾನುಕೂಲತೆಯನ್ನು ಕಡಿಮೆ ಮಾಡುವ ಉದ್ದೇಶದಿಂದ

3ನೇ ಪುಟ.....

ಅನಿರ್ದಿಷ್ಟಾವಧಿ ಧರಣಿ ಸತ್ಯಾಗ್ರಹ 7ನೇ ದಿನಕ್ಕೆ: ಅಧಿಕಾರಿಗಳ ಭೇಟಿ ಇಲ್ಲದೆ ಹೋರಾಟ ಮುಂದುವರಿಕೆ

ಹಟ್ಟಿ ಚಿನ್ನದ ಗಣಿ:

ದಲಿತ ಸಂರಕ್ಷ ಸಮಿತಿಯ ಜಿಲ್ಲಾ ಹಾಗೂ ಲಿಂಗಸುಗೂರು ತಾಲ್ಲೂಕು ಸಂಘಟನೆಗಳ ವತಿಯಿಂದ ವಿವಿಧ ಬೇಡಿಕೆಗಳ



ಈಡೇರಿಕೆಗೆ ಆಗ್ರಹಿಸಿ ಸೆಪ್ಟೆಂಬರ್ 22ರಂದು ಮಂಗಳವಾರ ಆರಂಭಗೊಂಡಿರುವ ಅನಿರ್ದಿಷ್ಟಾವಧಿ ಧರಣಿ ಸತ್ಯಾಗ್ರಹವು ಸೆಪ್ಟೆಂಬರ್ 28ರಂದು ಸೋಮವಾರ ಏಳನೇ ದಿನಕ್ಕೆ ಕಾಲಿಟ್ಟಿದೆ.

ರಾಷ್ಟ್ರೀಯ ಹೆದ್ದಾರಿ ಎನ್‌ಎಚ್–748ಎ ಭಾರತ್‌ಮಾಲಾ ಯೋಜನೆಯ ಚಿಕ್ಕಹೆಸರೂರು ಪ್ರದೇಶದಲ್ಲಿ ಧರಣಿ ಸತ್ಯಾಗ್ರಹ ಮುಂದುವರಿದಿದ್ದು, ಭೂಮಿ ಕಳೆದುಕೊಂಡು ಸಂಕಷ್ಟಕ್ಕೆ ಒಳಗಾಗಿರುವ ಬಡ ದಲಿತರು ಹಾಗೂ ದಲಿತ ಸಂರಕ್ಷ ಸಮಿತಿಯ ಹೋರಾಟಗಾರರು ಧರಣಿಯಲ್ಲಿ ಭಾಗವಹಿಸಿದ್ದಾರೆ.

ಧರಣಿ ಆರಂಭವಾಗಿ ಏಳು ದಿನಗಳು ಕಳೆದರೂ ಸಂಬಂಧಪಟ್ಟ ಅಧಿಕಾರಿಗಳ ಪೈಕಿ ಯಾರೊಬ್ಬರೂ ಧರಣಿ ಸ್ಥಳಕ್ಕೆ ಭೇಟಿ ನೀಡಿ ಹೋರಾಟಗಾರರ ಸಮಸ್ಯೆಗಳನ್ನು ಆಲಿಸಿಲ್ಲ ಎಂದು ಸಂಘಟನೆಯ ಮುಖಂಡರು ತಿಳಿಸಿದ್ದಾರೆ. ತಮ್ಮ ಬೇಡಿಕೆಗಳನ್ನು ಸಂಬಂಧಪಟ್ಟ ಅಧಿಕಾರಿಗಳು ಗಂಭೀರವಾಗಿ ಪರಿಗಣಿಸಿ, ಧರಣಿ ಸ್ಥಳಕ್ಕೆ ಭೇಟಿ ನೀಡಿ ಸಮಸ್ಯೆಗಳಿಗೆ ಸೂಕ್ತ ಪರಿಹಾರ ಒದಗಿಸುವಂತೆ ಅವರು

3ನೇ ಪುಟ.....

ಜ್ಞಾನೇಶ್ ಕುಮಾರ್ ರಾಜೀನಾಮೆ, ಬಂಧನಕ್ಕೆ ಆಗ್ರಹಿಸಿ ಧರಣಿ

ರಾಯಚೂರು, ಸೆ.28: ಮುಖ್ಯ ಚುನಾವಣಾ ಆಯುಕ್ತ (ಸಿಇಸಿ) ಜ್ಞಾನೇಶ್ ಕುಮಾರ್ ಅವರ ರಾಜೀನಾಮೆ ಹಾಗೂ ಬಂಧನಕ್ಕೆ ಆಗ್ರಹಿಸಿ ರಾಯಚೂರು ಜಿಲ್ಲಾ ಕಾಂಗ್ರೆಸ್ ಸಮಿತಿ ವತಿಯಿಂದ ಸೋಮವಾರ ನಗರದ ಡಾ.ಬಿ.ಆರ್.ಅಂಬೇಡ್ಕರ್ ವೃತ್ತದಲ್ಲಿ ಬೃಹತ್ ಪ್ರತಿಭಟನಾ ಧರಣಿ ನಡೆಯಿತು.

ನೂತನ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಕೆ.ಶಾಂತಪ್ಪ ಅಧ್ಯಕ್ಷತೆಯಲ್ಲಿ ನಡೆದ ಧರಣಿಯಲ್ಲಿ ಕಾಂಗ್ರೆಸ್ ಮುಖಂಡರು ಹಾಗೂ ಕಾರ್ಯಕರ್ತರು ಕೇಂದ್ರ ಸರಕಾರ, ಬಿಜೆಪಿ ಮತ್ತು ಚುನಾವಣಾ ಆಯೋಗದ ವಿರುದ್ಧ ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಪ್ರತಿಭಟನೆಯ ಬಳಿಕ ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ ಹಾಗೂ ಜ್ಞಾನೇಶ್ ಕುಮಾರ್ ಅವರ ಪ್ರತಿಕೃತಿಗಳನ್ನು ದಹಿಸಿದರು.

ಎಸ್‌ಐಆರ್ (ವಿಶೇಷ ತೀವ್ರ ಪರಿಷ್ಕರಣೆ) ಪ್ರಕ್ರಿಯೆಯ ಹೆಸರಿನಲ್ಲಿ ಅರ್ಹ ಮತದಾರರ ಹೆಸರುಗಳನ್ನು ಮತದಾರರ ಪಟ್ಟಿಯಿಂದ ತೆಗೆದುಹಾಕಲಾಗುತ್ತಿದೆ ಎಂಬ ಆರೋಪವನ್ನು ಕಾಂಗ್ರೆಸ್ ಮುಖಂಡರು ಮಾಡಿದರು. ಚುನಾವಣಾ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ಕಾಪಾಡಬೇಕು, ಮತದಾರರ ಹಕ್ಕುಗಳನ್ನು ರಕ್ಷಿಸಬೇಕು ಹಾಗೂ ಎಸ್‌ಐಆರ್ ಕುರಿತು ಸಮಗ್ರ ಪರಿಶೀಲನೆ ನಡೆಸಬೇಕು ಎಂದು ಆಗ್ರಹಿಸಿದರು.

ವಿಧಾನ ಪರಿಷತ್ ಸದಸ್ಯ ಎನ್.ಎಸ್. ಬೋಸರಾಜು ಮಾತನಾಡಿ, ಮತದಾರರ ಪಟ್ಟಿಗೆ ಸಂಬಂಧಿಸಿದಂತೆ ಜನರಲ್ಲಿ



ಮೂಡಿರುವ ಅನುಮಾನಗಳಿಗೆ ಚುನಾವಣಾ ಆಯೋಗ ಸ್ಪಷ್ಟನೆ ನೀಡಬೇಕು. ಎಸ್‌ಐಆರ್ ಪ್ರಕ್ರಿಯೆಯ ಕುರಿತು ಸಮಗ್ರ ಪರಿಶೀಲನೆ ನಡೆಸಿ, ಮತದಾರರ ಹಕ್ಕುಗಳಿಗೆ ಧಕ್ಕೆಯಾಗದಂತೆ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಕೆಪಿಸಿಸಿ ಕಾರ್ಯಾಧ್ಯಕ್ಷ ಎ. ವಸಂತಕುಮಾರ್ ಮಾತನಾಡಿ, ಎಸ್‌ಐಆರ್ ಪ್ರಕ್ರಿಯೆ ಪ್ರಾಮಾಣಿಕವಾಗಿ ನಡೆಯುತ್ತಿಲ್ಲ ಎಂದು ಆರೋಪಿಸಿದರು. ಅರ್ಹ ಮತದಾರರು, ದಲಿತರು ಹಾಗೂ ಅಲ್ಪಸಂಖ್ಯಾತ ಸಮುದಾಯಗಳ ಮತದಾರರ ಹೆಸರುಗಳನ್ನು ಪಟ್ಟಿಯಿಂದ ತೆಗೆದುಹಾಕಲಾಗುತ್ತಿದೆ ಎಂಬ ಆರೋಪಿಸಿದರು

ಪ್ರಧಾನಿ ನರೇಂದ್ರ ಮೋದಿ ಹಾಗೂ ಆರೆಸ್ಸೆಸ್ ಚುನಾವಣಾ ಆಯೋಗವನ್ನು ದುರ್ಬಳಕೆ ಮಾಡಿಕೊಳ್ಳುತ್ತಿದೆ ಎಂದು ಆರೋಪಿಸಿದ ಅವರು, ವಿರೋಧ ಪಕ್ಷಗಳನ್ನು ವ್ಯವಸ್ಥಿತವಾಗಿ ಕಟ್ಟಿ ಹಾಕುವ ಪ್ರಯತ್ನ ನಡೆಯುತ್ತಿದೆ ಎಂದು ದೂರಿದರು.

ವಿನೂತನ ಪ್ರತಿಭಟನೆ

ಪ್ರತಿಭಟನೆಯ ವೇಳೆ ಕಾಂಗ್ರೆಸ್ ಕಾರ್ಯಕರ್ತರೊಬ್ಬರು ಜ್ಞಾನೇಶ್ ಕುಮಾರ್ ಅವರ ಮುಖವಾಡ ಧರಿಸಿ, ಕೈಗೆ ಕೋಳ ಹಾಕಿಕೊಂಡು ಆಕ್ರೋಶ ವ್ಯಕ್ತಪಡಿಸಿದರು. ನಂತರ ಮೋದಿ, ಅಮಿತ್ ಶಾ ಹಾಗೂ ಜ್ಞಾನೇಶ್ ಕುಮಾರ್ ಅವರ ಪ್ರತಿಕೃತಿಗಳನ್ನು ನಿರ್ಮಿಸಿ ಸಾರ್ವಜನಿಕವಾಗಿ ದಹಿಸಲಾಯಿತು. ಈ ವೇಳೆ ಕಾರ್ಯಕರ್ತರು ಘೋಷಣೆಗಳನ್ನು ಕೂಗಿ ಪ್ರತಿಭಟನೆ ತೀವ್ರಗೊಳಿಸಿದರು.

ರೈತರ ಮುಖಂಡ, ಅಧಿಕಾರಿಗಳೊಂದಿಗೆ ಜಿಲ್ಲಾಧಿಕಾರಿಗಳ ಸಭೆ

ಅ.4ರಂದು ಬರ ಅಧ್ಯಯನಕ್ಕಾಗಿ ಜಿಲ್ಲೆಗೆ ಕೇಂದ್ರ ತಂಡ ಭೇಟಿ: ಪೂವಿತಾ ಎಸ್

ರಾಯಚೂರು ಸೆಪ್ಟಂಬರ್ 28

ಅಕ್ಟೋಬರ್ ಮೊದಲ ವಾರದಲ್ಲಿ ಬರ ಅಧ್ಯಯನಕ್ಕಾಗಿ ಕೇಂದ್ರ ತಂಡ ರಾಜ್ಯಕ್ಕೆ ಆಗಮಿಸಲಿದ್ದು, ಮೊದಲನೇಯ ಹಂತದಲ್ಲಿ ಬರ ಪೀಡಿತ ಎಂದು ಘೋಷಣೆಯಾದ ರಾಯಚೂರು ಜಿಲ್ಲೆಯ ತಾಲೂಕುಗಳಿಗೆ ಅಕ್ಟೋಬರ್ 4ರಂದು ಭೇಟಿ ನೀಡುವ ಸಾಧ್ಯತೆ ಎಂದು ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್. ಅವರು ಸಂಬಧಿಸಿದ ಇಲಾಖೆಯ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.



ಸೆಪ್ಟಂಬರ್ 28ರ ಸೋಮವಾರದಂದು ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ರೈತ ಮುಖಂಡರ ಹಾಗೂ ಅಧಿಕಾರಿಗಳೊಂದಿಗೆ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜೋಳ ಖರಿದಿ ಕೇಂದ್ರದ ಬಾಕಿ ಇರುವ ಬಿಲ್‌ಗಳನ್ನು ಒಂದು ವಾರದೊಳಗೆ ಬಾಕಿ ಇರುವ ರೈತರ ಜೋಳ ಖರೀದಿಯ ಮೊತ್ತವನ್ನು ಪಾವತಿಸಲಾಗುವುದು. ಕಂದಾಯ ಇಲಾಖೆ, ಪೋಲಿಸ್ ಇಲಾಖೆ ಹಾಗೂ ಪಂಚಾಯತ್ ರಾಜ್ ಇಲಾಖೆ ಈ ಎಲ್ಲಾ ಇಲಾಖೆಗಳೊಂದಿಗೆ ಸಮನ್ವಯ ಸಾಧಿಸಿ ಕೊನೆಯ ಭಾಗದ ರೈತರಿಗೆ ನೀರು ತಲುಪವ ನಿಟ್ಟಿನಲ್ಲಿ ಕಾರ್ಯನಿರ್ವಹಿಸಬೇಕು. ವಿಭಾಗವಾರು ತುಂಗಭದ್ರಾ, ಎಡದಂಡೆ ಕಾಲುವೆಯ ಹೂಳು ತೆಗೆಯಲು ಎಷ್ಟಮೆಂಟ್ ಸಲ್ಲಿಸಬೇಕು. ಜಿಲ್ಲೆಯ ಎಲ್ಲಾ ರೈತರು ಸಂಕಷ್ಟದಲ್ಲಿದ್ದಾರೆ ಈ ಸಮಯದಲ್ಲಿ ಮೇಲ್ಭಾಗ ಹಾಗೂ ಕೆಳಭಾಗದ ರೈತರು ಒಗ್ಗಟ್ಟಿನೊಂದಿಗೆ ಸಹಕರಿಸಬೇಕು ಎಂದರು.

ನಾರಾಯಣಪೂರ ಬಲದಂಡೆ ಕಾಲುವೆಯ ಸಮಸ್ಯಗಳನ್ನು ಮುಖ್ಯ ಇಂಜಿನಿಯರ್ ಕೆಬಿಜೆಎನ್‌ಎಲ್ ಭೀಮರಾಯನಗುಡಿ ಹಾಗೂ ನಾರಾಯಣಪೂರ ಜಲಾಶಯ ಇವರಗಳೊಂದಿಗೆ ಸಭೆ ಮಾಡಿ ಬಗೆಹರಿಸಲು ಕ್ರಮ ಕೈಗೊಳ್ಳಲಾಗುವುದು. ಅಲ್ಲದೆ ಪಶು ವೈದ್ಯಕೀಯ ಇಲಾಖೆಯಲ್ಲಿರುವ ವೈದ್ಯರ ಹುದ್ದೆ ಖಾಲಿ ಇರುವ ಕುರಿತು ಹಾಗೂ ಇತರೆ ಸಮಸ್ಯೆಗಳ ಕುರಿತು ಸರಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗುವುದು ಎಂದರು.

ಮುಗಾರು ಮಳೆಯ ಅಭಾವದಿಂದ ಜಿಲ್ಲೆಯಲ್ಲಿ ಬರಗಾಲ ಉಂಟಾಗಿದ್ದು, ರೈತರಿಗೆ, ಕೃಷಿ ಕೂಲಿಕಾರರಿಗೆ ತೊಂದರೆಯಾಗದಂತೆ ನೋಡಿಕೊಳ್ಳಬೇಕು. ರಾಯಚೂರು ಜಿಲ್ಲೆಯಲ್ಲಿ ಅಲ್ಪಸ್ವಲ್ಪ ಮಳೆಗೆ ರೈತರು ಬಿತ್ತಿದ ತೊಗರಿ, ಹತ್ತಿ, ಸಜ್ಜೆ, ಸೂರ್ಯಕಾಂತಿ ಬೆಳೆಗಳು ನಷ್ಟವಾಗಿದ್ದು, ನಷ್ಟವಾದ ರೈತರು ಕಡ್ಡಾಯವಾಗಿ ಬೆಳೆ ಸರ್ವೆ ಮಾಡಿಸಲು ಸಂಬಧಿಸಿದ ಅಧಿಕಾರಿಗಳಿಂದ ಸೂಕ್ತ ಕ್ರಮವಹಿಸಬೇಕು. ಅಲ್ಲದೆ ರೈತರಿಗಾದ ಬೆಳೆನಷ್ಟ ಪರಿಹಾರವನ್ನು ವೈಜ್ಞಾನಿಕವಾಗಿ ತುಲನೆ ಮಾಡಿ ಪರಿಹಾರ

3ನೇ ಪುಟ.....

ಕಾರ್ಮಿಕ ಸಂಹಿತೆ ಹಿಂಪಡೆಯಲು ಆಗ್ರಹಿಸಿ ಸಿಐಟಿಯು ಪ್ರತಿಭಟನೆ



ಲಿಂಗಸುಗೂರು:

ನಾಲ್ಕು ಕಾರ್ಮಿಕ ಸಂಹಿತೆಗಳನ್ನು ಹಿಂಪಡೆಯಬೇಕು, ಕನಿಷ್ಠ ವೇತನ ಜಾರಿಗೊಳಿಸಬೇಕು ಹಾಗೂ ಗುತ್ತಿಗೆ ಮತ್ತು ವಿವಿಧ ಸ್ಕೀಮ್ ನೌಕರರನ್ನು ಖಾಯಂಗೊಳಿಸಬೇಕು ಎಂದು ಆಗ್ರಹಿಸಿ ಸಿಐಟಿಯು ನೇತೃತ್ವದಲ್ಲಿ ಕಾರ್ಮಿಕರು ಶಾಸಕರ ಕಚೇರಿ ಎದುರು ಪ್ರತಿಭಟನೆ ನಡೆಸಿದರು.

ಪ್ರತಿಭಟನೆಯಲ್ಲಿ ಮಾತನಾಡಿದ ಮುಖಂಡರು, ಕೇಂದ್ರ ಸರ್ಕಾರ ಜಾರಿಗೊಳಿಸಿರುವ ನಾಲ್ಕು ಕಾರ್ಮಿಕ ಸಂಹಿತೆಗಳು ಕಾರ್ಮಿಕರ ಹಕ್ಕುಗಳಿಗೆ ಧಕ್ಕೆ ತರುವಂತಿವೆ ಎಂದು ಆರೋಪಿಸಿದರು. ಅವುಗಳನ್ನು ಕೂಡಲೇ ಹಿಂಪಡೆಯಬೇಕು ಹಾಗೂ ಕಾರ್ಮಿಕರಿಗೆ ಸಮರ್ಪಕ ಕನಿಷ್ಠ ವೇತನ ಜಾರಿಗೊಳಿಸಬೇಕು ಎಂದು ಒತ್ತಾಯಿಸಿದರು.

ಗುತ್ತಿಗೆ ಪದ್ಧತಿಯನ್ನು ರದ್ದುಪಡಿಸಿ ಗುತ್ತಿಗೆ ಕಾರ್ಮಿಕರನ್ನು ಖಾಯಂಗೊಳಿಸಬೇಕು. ಅಂಗನವಾಡಿ, ಆಶಾ, ಅಕ್ಷರ ದಾಸೋಹ (ಬಿಸಿಯೂಟ) ಸೇರಿದಂತೆ ವಿವಿಧ ಸ್ಕೀಮ್‌ಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರನ್ನು ಖಾಯಂ ನೌಕರರೆಂದು ಪರಿಗಣಿಸಿ, ಅವರಿಗೆ ಸೂಕ್ತ ವೇತನ, ಸಾಮಾಜಿಕ ಭದ್ರತೆ ಹಾಗೂ ಇತರ ಸೌಲಭ್ಯಗಳನ್ನು ಕಲ್ಪಿಸಬೇಕು ಎಂದು ಆಗ್ರಹಿಸಿದರು.

ಕಾರ್ಮಿಕರ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಸರ್ಕಾರದ ಗಮನ ಸೆಳೆಯಲು ಶಾಸಕರಿಗೆ ಮನವಿ ಸಲ್ಲಿಸಲಾಯಿತು.

ಪ್ರತಿಭಟನೆಯಲ್ಲಿ ಸಿಐಟಿಯು ತಾಲೂಕು ಸಂಚಾಲಕ ಮುಹಮ್ಮದ್ ಹನೀಫ್, ನಿಂಗಪ್ಪ ನಿಲೋಗಲ್, ಫಕ್ರುದ್ದೀನ್ ಮುಲ್ಲಾ, ಮಲ್ಲನಗೌಡ, ವೆಂಕಟೇಶ ಸೇರಿದಂತೆ ಹಲವಾರು ಕಾರ್ಯಕರ್ತರು ಭಾಗವಹಿಸಿದ್ದರು.

ದುಶ್ಚಟಮುಕ್ತ ಸಮಾಜ ನಿರ್ಮಾಣಕ್ಕೆ ಮಧ್ಯವರ್ಜನ ಶಿಬಿರಗಳು ಪೂರಕ

ದೇವದುರ್ಗ, ಸೆ.27

ಇತ್ತೀಚಿನ ದಿನಗಳಲ್ಲಿ ಮದ್ಯಪಾನ ಸೇರಿದಂತೆ ವಿವಿಧ ದುಶ್ಚಟಗಳಿಗೆ ಒಳಗಾಗುತ್ತಿರುವವರ ಸಂಖ್ಯೆ ಹೆಚ್ಚುತ್ತಿರುವ ಸಂದರ್ಭದಲ್ಲಿ, ವ್ಯಸನಮುಕ್ತ ಸಮಾಜ ನಿರ್ಮಾಣಕ್ಕೆ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಹಾಗೂ ಅಖಿಲ ಕರ್ನಾಟಕ ಜನಜಾಗೃತಿ ವೇದಿಕೆ ನಡೆಸುತ್ತಿರುವ ಮಧ್ಯವರ್ಜನ ಶಿಬಿರಗಳು ಮಹತ್ವದ ಪಾತ್ರ ವಹಿಸುತ್ತಿವೆ ಎಂದು ಶಾಸಕಿ ಕರೆಮ್ಮ ಜಿ. ನಾಯಕ್ ಹೇಳಿದರು.

ದೇವದುರ್ಗ ತಾಲೂಕಿನಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಹಾಗೂ ಅಖಿಲ ಕರ್ನಾಟಕ ಜನಜಾಗೃತಿ ವೇದಿಕೆಯ ಸಹಯೋಗದಲ್ಲಿ ಆಯೋಜಿಸಲಾಗಿದ್ದ 2120ನೇ ಮಧ್ಯವರ್ಜನ ಶಿಬಿರದ ಸಮಾರೋಪ ಸಮಾರಂಭವನ್ನು



ಉದ್ಘಾಟಿಸಿ ಅವರು ಮಾತನಾಡಿದರು.

ಮದ್ಯವ್ಯಸನದಿಂದ ವ್ಯಕ್ತಿಯ ಆರೋಗ್ಯದ ಮೇಲೆ ಮಾತ್ರವಲ್ಲದೆ, ಕುಟುಂಬದ ಆರ್ಥಿಕ ಸ್ಥಿತಿ, ಸಾಮಾಜಿಕ ಗೌರವ ಹಾಗೂ ಮಕ್ಕಳ ಭವಿಷ್ಯದ ಮೇಲೂ ದುಷ್ಪರಿಣಾಮ ಬೀರುತ್ತದೆ. ಇಂತಹ ಸಂದರ್ಭದಲ್ಲಿ ಏಳು ದಿನಗಳ ಕಾಲ ನಡೆಯುವ ಮದ್ಯವರ್ಜನ ಶಿಬಿರಗಳಲ್ಲಿ ವ್ಯಸನದಿಂದ ಉಂಟಾಗುವ ನಷ್ಟಗಳು ಮತ್ತು ಅನಾಹುತಗಳ ಕುರಿತು ಶಿಬಿರಾರ್ಥಿಗಳಿಗೆ ಹಾಗೂ ಅವರ ದಂಪತಿಗಳಿಗೆ ಅರಿವು ಮೂಡಿಸಿ, ಉತ್ತಮ ಜೀವನ ನಡೆಸಲು ಪ್ರೇರಣೆ ನೀಡುತ್ತಿರುವುದು ಶ್ಲಾಘನೀಯ ಎಂದು ಹೇಳಿದರು.

ಪೂಜ್ಯ ಡಾ. ಡಿ. ವೀರೇಂದ್ರ ಹೆಗ್ಗಡೆಯವರ ಮಾರ್ಗದರ್ಶನದಲ್ಲಿ ನಡೆಯುತ್ತಿರುವ ಇಂತಹ ಜನಜಾಗೃತಿ ಕಾರ್ಯಕ್ರಮಗಳಿಂದ ದುಶ್ಚಟಗಳಿಗೆ ಒಳಗಾದ ಕುಟುಂಬಗಳಲ್ಲಿ ಉತ್ತಮ ಬದಲಾವಣೆ ಸಾಧ್ಯವಾಗುತ್ತದೆ. ಕುಟುಂಬದಲ್ಲಿ ನೆಮ್ಮದಿ ಮತ್ತು ಉತ್ತಮ ವಾತಾವರಣ ನಿರ್ಮಾಣವಾಗುವುದರ ಜೊತೆಗೆ ಬಡ ಕುಟುಂಬಗಳ ಆರ್ಥಿಕ ಹಾಗೂ ಸಾಮಾಜಿಕ ಅಭಿವೃದ್ಧಿಗೂ ಇದು ಸಹಕಾರಿಯಾಗಲಿದೆ ಎಂದು ಅವರು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವ್ಯವಸ್ಥಾಪನ ಸಮಿತಿಯ ಅಧ್ಯಕ್ಷ ಹನುಮಂತ್ರಾಯ ಚಿಂತ

3ನೇ ಪುಟ.....

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ನಿರ್ದೇಶಕಿ ಭೇಟಿ ಪರಿಶೀಲನೆ

ತಾಯಿ ಮಕ್ಕಳ ಆರೈಕೆ, ಗುಣಮಟ್ಟದ ಸೇವೆಗೆ ಸದಾ ನಿಗಾವಹಿಸಿ: ಡಾ.ರಜನಿ

ರಾಯಚೂರು ಸೆಪ್ಟಂಬರ್ 28

ಸಾರ್ವಜನಿಕರಿಗೆ ಗುಣಮಟ್ಟದ ಆರೋಗ್ಯ ಸೇವೆಗಳನ್ನು ನೀಡುವಲ್ಲಿ ಯಾವುದೇ ರಾಜಿಯಾಗದಂತೆ ಕರ್ತವ್ಯ ನಿರ್ವಹಿಸಬೇಕೆಂದು ಬೆಂಗಳೂರಿನ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ನಿರ್ದೇಶಕಿ ಡಾ.ರಜನಿ ಎಮ್. ಅವರು ಹೇಳಿದರು.

ಸೆಪ್ಟಂಬರ್ 27ರ ರವಿವಾರದಂದು ರಾಯಚೂರು ನಗರದ ತಾಯಿ ಮಕ್ಕಳ ಆಸ್ಪತ್ರೆಗೆ ಭೇಟಿ ನೀಡಿ, ಪರಿಶೀಲನೆ ನಡಿಸಿ ಅವರು ಮಾತನಾಡಿದರು.



ರಾಯಚೂರಿನ ತಾಯಿ ಮಕ್ಕಳ ಆಸ್ಪತ್ರೆ, ಹಾಗೂ ಜಿಲ್ಲಾ ಔಷಧಿ ಉಗ್ರಾಣಕ್ಕೆ ಭೇಟಿ ನೀಡಿ, ಆಸ್ಪತ್ರೆಯ ಹೆರಿಗೆ ಕೊಠಡಿ, ಹೆರಿಗೆ ವಾರ್ಡ್, ಔಷಧಿ ವಿಭಾಗ, ಪ್ರಯೋಗಾಲಯ ಸೇರಿದಂತೆ ವಿವಿಧ ವಿಭಾಗಗಳನ್ನು ಪರಿಶೀಲಿಸಿ ಆಸ್ಪತ್ರೆಗೆ ಆಗಮಿಸಿದ ಸಾರ್ವಜನಿಕರು, ತಾಯಂದಿರನ್ನು ಮಾತನಾಡಿಸಿ ಆಸ್ಪತ್ರೆಯಲ್ಲಿ ಒದಗಿಸುವ ಸೇವೆಗಳ ಬಗ್ಗೆ ಚರ್ಚಿಸಿದರು.

ತಾಯಿ ಮಗುವಿನ ಆರೈಕೆಗೆ ಹೆಚ್ಚಿನ ಒತ್ತು ನೀಡುವಂತೆ ಹಾಗೂ ಆಸ್ಪತ್ರೆಗೆ ಆಗಮಿಸುವ ಪ್ರತಿಯೊಬ್ಬರೊಂದಿಗೂ ಸೌಜನ್ಯಯುತವಾಗಿ ನಡೆದುಕೊಂಡು ಚಿಕಿತ್ಸೆ ನೀಡಲು ಹಾಗೂ ಆಸ್ಪತ್ರೆಯ ಹೊರ ಮತ್ತು ಒಳ ಆವರಣವನ್ನು ಸದಾ ಶುಚಿತ್ವದಿಂದ ಕಾಪಾಡುವಂತೆ ಸೂಚಿಸಿದರು.

ಇದೆ ವೇಳೆ ಜಿಲ್ಲಾ ಆರೋಗ್ಯ ತರಬೇತಿ ಕೇಂದ್ರದ ಸ್ಕಿಲ್‌ಲ್ಯಾಬ್‌ಗೆ ಭೇಟಿ ನೀಡಿ ಹೆರಿಗೆಯ ನಿರ್ವಹಣೆಯ ತಾಂತ್ರಿಕ ಕೌಶಲ್ಯದ ಕುರಿತು ಚರ್ಚಿಸಿದರು.

ಇದಕ್ಕೂ ಮುಂಚೆ ಗುಂಜಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ, ಪರಿಶೀಲನೆ ಮಾಡಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ನಂದಿತಾ ಎಮ್.ಎನ್., ಜಿಲ್ಲಾ ತರಬೇತಿ ಕೇಂದ್ರದ ಪ್ರಾಂಶುಪಾಲರಾದ ಡಾ.ಸುರೇಂದ್ರ ಬಾಬು,

3ನೇ ಪುಟ.....

ವಿದ್ಯಾರ್ಥಿಗಳ ಸಂಘ ಶೈಕ್ಷಣಿಕ ಬೆಳವಣಿಗೆಗೆ ಚೈತನ್ಯ ನೀಡಲಿ

ಕಲಬುರಗಿ,ಸೆ.28-

ರಸಾಯನಶಾಸ್ತ್ರ ವಿಭಾಗದ ಹಳೆಯ ವಿದ್ಯಾರ್ಥಿಗಳ ಸಂಘವು ವಿಭಾಗದ ಶೈಕ್ಷಣಿಕ ಬೆಳವಣಿಗೆಗೆ ಹೊಸ ಚೈತನ್ಯ ತುಂಬಬೇಕು. ವಿಜ್ಞಾನ ಕ್ಷೇತ್ರದಲ್ಲಿ ಸೃಷ್ಟಿಯಾಗುತ್ತಿರುವ ಹೊಸ ಅವಕಾಶಗಳಿಗೆ ತಕ್ಕಂತೆ ವಿದ್ಯಾರ್ಥಿಗಳ ಜ್ಞಾನಮಟ್ಟವನ್ನು ಅರಿತು ಶಿಕ್ಷಕರು ಸೂಕ್ತ ಮಾರ್ಗದರ್ಶನ ನೀಡಬೇಕು ಎಂದು ಗುಲ್ಬರ್ಗಾ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಶಶಿಕಾಂತ್ ಎಸ್. ಉಡಿಕೇರಿ ಹೇಳಿದರು.



ಗುಲ್ಬರ್ಗಾ ವಿಶ್ವವಿದ್ಯಾಲಯದ ಮಹಾತ್ಮ ಗಾಂಧಿ ಸಭಾಂಗಣದಲ್ಲಿ ಆಯೋಜಿಸಿದ್ದ ರಸಾಯನಶಾಸ್ತ್ರ ವಿಭಾಗದ ಹಳೆಯ ವಿದ್ಯಾರ್ಥಿಗಳ ಸಂಘದ ಉದ್ಘಾಟನಾ ಸಮಾರಂಭದಲ್ಲಿ ಅವರು ಮಾತನಾಡಿದರು.

ದೈನಂದಿನ ಜೀವನದಲ್ಲಿ ಬಳಸುವ ಆಹಾರ, ಆರೋಗ್ಯ, ಕೃಷಿ, ಪರಿಸರ, ಔಷಧ, ಉದ್ಯಮ ಹಾಗೂ ತಂತ್ರಜ್ಞಾನ ಸೇರಿದಂತೆ ಮಾನವನ ಜೀವನದ ಪ್ರತಿಯೊಂದು ಕ್ಷೇತ್ರದಲ್ಲೂ ರಸಾಯನಶಾಸ್ತ್ರ ಮಹತ್ವದ ಪಾತ್ರ ವಹಿಸುತ್ತಿದೆ ಎಂದು ಅವರು ಹೇಳಿದರು. ಜಾಗತಿಕ ವಿಜ್ಞಾನ ಕ್ಷೇತ್ರದಲ್ಲಿ ಆಗುತ್ತಿರುವ ಹೊಸ ಆವಿಷ್ಕಾರಗಳು ಮತ್ತು ಬೆಳವಣಿಗೆಗಳನ್ನು ಅರಿತುಕೊಂಡು ಪ್ರಾಯೋಗಿಕ ಬೋಧನೆಗೆ ಹೆಚ್ಚಿನ ಒತ್ತು ನೀಡಬೇಕು. ತಂತ್ರಜ್ಞಾನ ಬೆಳೆದಂತೆ ಜಗತ್ತು ವೇಗವಾಗಿ ಬದಲಾಗುತ್ತಿದ್ದು, ಮಾನವನ ಬುದ್ಧಿಮತ್ತೆಯ ಫಲವಾಗಿ ಕೃತಕ ಬುದ್ಧಿಮತ್ತೆ (ಎಐ)ಯಂತಹ ಹೊಸ ತಂತ್ರಜ್ಞಾನಗಳು ರೂಪುಗೊಂಡಿವೆ. ಆದರೆ ಇಂತಹ ಆಧುನಿಕ ವಿಜ್ಞಾನಗಳ ಬೆಳವಣಿಗೆಗೆ ಮೂಲ ವಿಜ್ಞಾನವೇ ಭದ್ರ ಬುನಾದಿ ಎಂಬುದನ್ನು ಮರೆಯಬಾರದು ಎಂದು ತಿಳಿಸಿದರು.

ಹೈದರಾಬಾದ್‌ನ ಭಾರತೀಯ ತಂತ್ರಜ್ಞಾನ ಸಂಸ್ಥೆ (ಐಐಟಿ)ಯ ಪ್ರೊ. ಫೈಜ್ ಅಹ್ಮದ್ ಖಾನ್ ಮುಖ್ಯ ಅತಿಥಿಯಾಗಿ ಮಾತನಾಡಿ, ರಸಾಯನಶಾಸ್ತ್ರ ವಿಭಾಗವು ವಿದ್ಯಾರ್ಥಿಗಳ ಶೈಕ್ಷಣಿಕ ಜೀವನ ರೂಪಿಸುವಲ್ಲಿ ಮಹತ್ವದ ಪಾತ್ರ ವಹಿಸಿದೆ. ತಜ್ಞ ಪ್ರಾಧ್ಯಾಪಕರ ಪ್ರೋತ್ಸಾಹ ಮತ್ತು ಮಾರ್ಗದರ್ಶನದಿಂದ ಅನೇಕ ವಿದ್ಯಾರ್ಥಿಗಳು ರಾಷ್ಟ್ರ ಹಾಗೂ ಅಂತರರಾಷ್ಟ್ರೀಯ ಮಟ್ಟದ ಪ್ರತಿಷ್ಠಿತ ಉದ್ಯಮಗಳು ಮತ್ತು ಕಂಪನಿಗಳಲ್ಲಿ ಕಾರ್ಯನಿರ್ವಹಿಸುತ್ತಿದ್ದಾರೆ ಎಂದರು.

ಹೈದರಾಬಾದ್‌ನ ಸಿಎಸ್‌ಐಆರ್‌ಐಐಸಿಟಿಯ ನಿವೃತ್ತ ವಿಜ್ಞಾನಿ ಡಾ. ಎಚ್.ಎಂ. ಸಂಪತ್ ಕುಮಾರ್ ಮಾತನಾ ಡಿ, ಜಾಗತಿಕ ಯುಗದಲ್ಲಿ ಗುರುವಿನ ಮಾರ್ಗದರ್ಶನವಿಲ್ಲದೆ ವ್ಯಕ್ತಿ ಮತ್ತು ಸಮಾಜದ ಸುಸ್ಥಿರ ಬೆಳವಣಿಗೆ ಸಾಧ್ಯವಿಲ್ಲ. ಶಿಕ್ಷಕರು ಜ್ಞಾನದ ಸಂಪತ್ತಾಗಿದ್ದು, ಅವರ ಸಲಹೆ ಮತ್ತು ಮಾರ್ಗದರ್ಶನ ವಿದ್ಯಾರ್ಥಿಗಳ ಬದುಕಿಗೆ ದಿಕ್ಕು ತೋರಿಸುತ್ತದೆ ಎಂದು ಹೇಳಿದರು. ಹೈದರಾಬಾದ್‌ನ ಡಾ. ರೆಡ್ಡಿ ಲ್ಯಾಬೋರೇಟರೀಸ್ ಲಿಮಿಟೆಡ್‌ನ ಮುಖ್ಯಸ್ಥ ಡಾ. ಎ. ಮಲ್ಲೇಶ್ವರ ರೆಡ್ಡಿ ಮಾತನಾಡಿ, ರಸಾಯನಶಾಸ್ತ್ರ ವಿಭಾಗದ ಉನ್ನತಿಯಲ್ಲಿ ಹಿರಿಯ ಪ್ರಾಧ್ಯಾಪಕರ ಪರಿಶ್ರಮ ಮಹತ್ವದ್ದಾ ಗಿದೆ. ವಿಭಾಗದ ವಿದ್ಯಾರ್ಥಿಗಳು ಆಡಳಿತ, ಸಂಶೋಧನೆ, ಉದ್ಯಮ ಹಾಗೂ ಪ್ರಯೋಗಾ ಲಯ ಕ್ಷೇತ್ರಗಳಲ್ಲಿ ಗುರುತಿಸಿಕೊಂಡಿರುವುದರ ಹಿಂದೆ ಶಿಕ್ಷಕರ ಪ್ರೋತ್ಸಾಹ ಮತ್ತು ಮಾರ್ಗದರ್ಶನವಿದೆ ಎಂದರು.

ಇದೇ ಸಂದರ್ಭದಲ್ಲಿ ಹಳೆಯ ವಿದ್ಯಾರ್ಥಿ ಶರಣಬಸವ ಅವರು ವಿದ್ಯಾರ್ಥಿಗಳ ಪ್ರಯೋಗಾಲಯ ಕಲಿಕೆಗೆ ನೆರವಾಗುವ ಪೋಲರಿಮೀಟರ್ ಸಾಧನವನ್ನು ನೀಡುವುದಾಗಿ ವಿಭಾಗದ ಮುಖ್ಯಸ್ಥ ಪ್ರೊ. ಕೆ. ಸಿದ್ದಪ್ಪ ಅವರಿಗೆ ಪ್ರಮಾಣಪತ್ರ ಹಸ್ತಾಂತರಿಸಿದರು. ವಿಶ್ರಾಂತ ಪ್ರಾಧ್ಯಾಪಕ ಪ್ರೊ. ಜೆ.ಎಸ್. ಬಿರಾದಾರ ಪ್ರಾಸ್ತಾವಿಕವಾಗಿ ಮಾತನಾಡಿ, ಹಳೆಯ ವಿದ್ಯಾರ್ಥಿಗಳ ಸಂಘದ ಉದ್ದೇಶ, ಧ್ಯೇಯ ಹಾಗೂ ಕಾರ್ಯಚಟು ವಟಿಕೆಗಳ ಕುರಿತು ವಿವರಿಸಿದರು. ಕಾರ್ಯಕ್ರ ಮದಲ್ಲಿ ಗುಲ್ಬರ್ಗಾ ವಿಶ್ವವಿದ್ಯಾಲಯದ ಕುಲಸಚಿವ ಪ್ರೊ. ರಮೇಶ್ ಲಂಡನಕರ್ ವಿತ್ತಾಧಿಕಾರಿ ಜಯಾಂ ಬಿಕ ಹಾಗೂ ರಸಾಯನಶಾಸ್ತ್ರ ವಿಭಾಗದ ಮುಖ್ಯಸ್ಥ ಪ್ರೊ. ಕೆ. ಸಿದ್ದಪ್ಪ ಉಪಸ್ಥಿತರಿದ್ದರು. ವಿಜ್ಞಾನ ವಿಭಾಗಗಳ ಪ್ರಾಧ್ಯಾಪಕರು, ರಸಾಯನಶಾಸ್ತ್ರ ವಿಭಾಗದ ಹಳೆಯ ವಿದ್ಯಾರ್ಥಿಗಳ ಸಂಘದ ಅಧ್ಯಕ್ಷರು, ಕಾರ್ಯದರ್ಶಿ ಹಾಗೂ ಪದಾಧಿಕಾರಿಗಳು, ಸಂಶೋಧನಾ ಮತ್ತು ಸ್ನಾತಕೋತ್ತರ ವಿದ್ಯಾರ್ಥಿಗಳು, ಅತಿಥಿ ಉಪನ್ಯಾಸಕರು ಹಾಗೂ ಬೋಧಕೇತರ ಸಿಬ್ಬಂದಿ ಭಾಗವಹಿಸಿದ್ದರು.

ಪ್ರೊ. ಆನಂದ ಆರ್. ಸೌಂದಾನೆ ಅತಿಥಿಗಳನ್ನು ಸ್ವಾಗತಿಸಿದರು. ಡಾ. ಸೋಮಶೇಖರ್ ಹಾಗೂ ಡಾ. ಸ್ವಾತಿ ಬಿ. ಗಣ್ಯರನ್ನು ಪರಿಚಯಿಸಿದರು. ಪ್ರೊ. ಅರುಣ್ ಕುಮಾರ್ ಲಗಶೆಟ್ಟಿ ಕಾರ್ಯಕ್ರಮ ನಿರೂಪಿಸಿದರು.

ಈಶಾನ್ಯ ಶಿಕ್ಷಕರ ಕ್ಷೇತ್ರ ಚುನಾವಣೆ: ಬೀದರ್‌ನಲ್ಲಿ ಬಿಜೆಪಿ ಪೂರ್ವಭಾವಿ ಸಭೆ



ಬೀದರ್,ಸೆ.28-

ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣೆಯ ಹಿನ್ನೆಲೆಯಲ್ಲಿ ಭಾರತೀಯ ಜನತಾ ಪಕ್ಷದ ಜಿಲ್ಲಾ ಕಾರ್ಯಾಲಯದಲ್ಲಿ ರವಿವಾರ ಪೂರ್ವಭಾವಿ ಸಭೆ ನಡೆಯಿತು.

ಸಭೆಯಲ್ಲಿ ಮುಂಬರುವ ಚುನಾವಣೆಗೆ ಸಂಬಂಧಿಸಿದಂತೆ ಪಕ್ಷದ ಸಂಘಟನೆಯನ್ನು ಮತ್ತಷ್ಟು ಬಲಪಡಿಸುವುದು, ಚುನಾವಣಾ ಕಾರ್ಯತಂತ್ರ ರೂಪಿಸುವುದು ಹಾಗೂ ಚುನಾವಣಾ ಸಂಬಂಧಿತ ಕಾರ್ಯಕ್ರಮಗಳನ್ನು ಪರಿಣಾಮಕಾರಿಯಾಗಿ ಹಮ್ಮಿಕೊಳ್ಳುವ ಕುರಿತು ಚರ್ಚೆ ನಡೆಸಲಾಯಿತು.

ಚುನಾವಣೆಯಲ್ಲಿ ಪಕ್ಷದ ಅಭ್ಯರ್ಥಿಯ ಪರವಾಗಿ ಸಂಘಟಿತವಾಗಿ ಕಾರ್ಯನಿರ್ವಹಿಸಿ, ಚುನಾವಣಾ ಪ್ರಚಾರ ಮತ್ತು ಸಂಘಟನಾ ಚಟುವಟಿಕೆಗಳನ್ನು ಯಶಸ್ವಿಯಾಗಿ ನಡೆಸುವ ಕುರಿತು ಸಭೆಯಲ್ಲಿ ಸಂಕಲ್ಪ ಕೈಗೊಳ್ಳಲಾಯಿತು.

ಈಶಾನ್ಯ ಶಿಕ್ಷಕರ ಕ್ಷೇತ್ರದ ಚುನಾವಣಾ ಪ್ರಚಾರದ ನಿಮಿತ್ತ ಬೀದರ್ ಜಿಲ್ಲೆಗೆ ಆಗಮಿಸಿದ್ದ ಪಕ್ಷದ ನಾಯಕರು ಹಾಗೂ ಕಾರ್ಯಕರ್ತರು ಬಿಜೆಪಿ ಜಿಲ್ಲಾ ಕಾರ್ಯಾಲಯದಲ್ಲಿ ಸೇರಿ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಮನ್ ಕೀ ಬಾತ್ ಕಾರ್ಯಕ್ರಮವನ್ನು ಆಲಿಸಿದರು.

ಕಾರ್ಯಕ್ರಮದಲ್ಲಿ ದೇಶದ ಅಭಿವೃದ್ಧಿ, ಜನಸೇವೆ ಹಾಗೂ ರಾಷ್ಟ್ರ ನಿರ್ಮಾಣಕ್ಕೆ ಸಂಬಂಧಿಸಿದ ವಿಷಯಗಳ ಕುರಿತು ಪ್ರಧಾನ ಮಂತ್ರಿಯವರ ಭಾಷಣವನ್ನು ಕಾರ್ಯಕರ್ತರು ಆಲಿಸಿದರು.

ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯ ಎನ್. ರವಿಕುಮಾರ್ ಬಿಜೆಪಿ ಜಿಲ್ಲಾಧ್ಯಕ್ಷ ಸೋಮನಾಥ್ ಪಾಟೀಲ್, ಮಾಜಿ ಸಭಾಪತಿ ರಘುನಾಥರಾವ್ ಮಲ್ಕಾಪುರೆ, ಶಾಸಕರಾದ ಶೈಲೇಂದ್ರ ಬೆಲ್ದಾಳೆ ಹಾಗೂ ಡಾ. ಸಿದ್ದು ಪಾಟೀಲ್ ಸೇರಿದಂತೆ ಪಕ್ಷದ ಮುಖಂಡರು, ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

ಕೃಷಿ ಹೊಂಡಕ್ಕೆ ಬಿದ್ದಿದ್ದ ಎರಡು ನಾಯಿಗಳ ರಕ್ಷಣೆ



ಅಫಜಲಪುರ,ಸೆ.28-

ತಾಲೂಕಿನ ಮಾಶಾಳ ಗ್ರಾಮದ ಶ್ರೀ ಶಿವಯ್ಯ ಬಸಯ್ಯ ದಿಕ್ಕ ಸಂಗಿ ಅವರ ಸರ್ವೆ ನಂ. 17/5ರ ಹೊಲದ ಲ್ಲಿರುವ 100‌100 ಅಡಿ ವಿಸ್ತೀರ್ಣದ ಕೃಷಿ ಹೊಂಡಕ್ಕೆ ಬಿದ್ದಿದ್ದ ಎರಡು ನಾಯಿಗಳನ್ನು ಅಗ್ನಿಶಾಮಕ ಸಿಬ್ಬಂದಿ ಯಶಸ್ವಿಯಾಗಿ ರಕ್ಷಿಸಿದ್ದಾರೆ.

ಎರಡು ನಾಯಿಗಳು ಕಾದಾಡುತ್ತಾ ಕೃಷಿ ಹೊಂಡಕ್ಕೆ ಬಿದ್ದಿರುವ ಮಾಹಿತಿ ದೊರಕುತ್ತಿದ್ದಂತೆಯೇ ಅಫಜಲಪುರ ಅಗ್ನಿಶಾಮಕ ಠಾಣೆಯ ಸಿಬ್ಬಂದಿ ಸ್ಥಳಕ್ಕೆ ಧಾವಿಸಿ ರಕ್ಷಣಾ ಕಾರ್ಯಾಚರಣೆ ಕೈಗೊಂಡರು.

ಸಹಾಯಕ ಅಗ್ನಿಶಾಮಕ ಠಾಣಾಧಿಕಾರಿ ಅಶೋಕ್ ಜಮಾದಾರ್ ಅವರ ನೇತೃತ್ವದಲ್ಲಿ ಪ್ರಮುಖ ಅಗ್ನಿಶಾಮಕ ಪ್ರಕಾಶ ಮೇತ್ರಿ, ಅಗ್ನಿಶಾಮಕ ಚಾಲಕ ಶಿವಾನಂದ ಕುಂಬಾರ್, ಚಾಲಕ-ತಂತ್ರಜ್ಞ ಅಜರುದ್ದೀನ್ ಹಾಗೂ ಅಗ್ನಿಶಾಮಕ ಸಿಬ್ಬಂದಿಗಳಾದ ಸದಾನಂದ ಸೊಪ್ಪಿ, ಮಹಾಂತೇಶ್ ಜಮಾದಾರ್ ಶರಣ, ಪ್ರಮೋದ ಎನ್.ಸಿ. ಮತ್ತು ಅಕ್ಷಯ್ ಕುಮಾರ್ ಕಾರ್ಯಾಚರಣೆಯಲ್ಲಿ ಪಾಲ್ಗೊಂಡರು. ಸುರಕ್ಷತಾ ಕ್ರಮಗಳನ್ನು ಅನುಸರಿಸಿ ಸಿಬ್ಬಂದಿ ಕೃಷಿ ಹೊಂಡಕ್ಕೆ ಇಳಿದು ಎರಡು ನಾಯಿಗಳನ್ನು ಸುರಕ್ಷಿತವಾಗಿ ಮೇಲಕ್ಕೆತ್ತಿ ಅವುಗಳ ಪ್ರಾಣ ರಕ್ಷಿಸಿದರು.

ಅಗ್ನಿಶಾಮಕ ಸಿಬ್ಬಂದಿಯ ತ್ವರಿತ ಸ್ಪಂದನೆ ಹಾಗೂ ಕಾರ್ಯಕ್ಷಮತೆಯನ್ನು ಸ್ಥಳೀಯರು ಮೆಚ್ಚುಗೆ ವ್ಯಕ್ತಪಡಿಸಿದರು.

ರೋಗನಿರ್ಣಯದಲ್ಲಿ ರೇಡಿಯಾಲಜಿ ತಂತ್ರಜ್ಞಾನದ ಮಹತ್ವ ಹೆಚ್ಚುತ್ತಿದೆ: ಡಾ.ಸುಧೀರ್ ಕಾಳೆ

ಕಲಬುರಗಿ,ಸೆ.28-

ವೈದ್ಯಕೀಯ ಕ್ಷೇತ್ರದಲ್ಲಿ ತಂತ್ರಜ್ಞಾನವು ದಿನದಿಂದ ದಿನಕ್ಕೆ ಹೊಸ ಆಯಾ ಮಗಳನ್ನು ಪಡೆದುಕೊಳ್ಳುತ್ತಿದ್ದು, ರೋಗಗಳ ನಿಖರ ಹಾಗೂ ತ್ವರಿತ ರೋಗನಿರ್ಣಯದಲ್ಲಿ ರೇಡಿಯಾಲಜಿ ವಿಭಾಗದ ಮಹತ್ವ ಹೆಚ್ಚುತ್ತಿದೆ ಎಂದು ಕರ್ನಾಟಕ ರಾಜ್ಯ ಇಂಡಿಯನ್ ರೇಡಿಯೋಲಾಜಿಕಲ್ ಆ್ಯಂಡ್ ಇಮೇಜಿಂಗ್ ಅಸೋಸಿಯೇಷನ್ ಅಧ್ಯಕ್ಷ ಡಾ. ಸುಧೀರ್ ಕಾಳೆ ಹೇಳಿದರು. ನಗರದ ಹೈದ್ರಾಬಾದ್ ಕರ್ನಾ ಟಕ ಶಿಕ್ಷಣ ಸಂಸ್ಥೆಯ ಬಸವೇಶ್ವರ ಬೋಧನಾ ಹಾಗೂ ಸಾರ್ವಜನಿಕ ಆಸ್ಪತ್ರೆಯಲ್ಲಿ ಐಆರ್‌ಐಎ ಕರ್ನಾ ಟಕ ರಾಜ್ಯ ಅಧ್ಯಾಯ ಹಾಗೂ ಮಹಾದೇವಪ್ಪ ರಾಂಪೂರೆ ವೈದ್ಯ ಕೀಯ ಮಹಾವಿದ್ಯಾಲಯದ ರೇಡಿ ಯಾಲಜಿ ವಿಭಾಗದ ಸಂಯುಕ್ತಾಶ್ರ ಯದಲ್ಲಿ ಆಯೋಜಿಸಿದ್ದ ವಿಶೇಷ ಶೈಕ್ಷಣಿಕ ಕಾರ್ಯಕ್ರಮದಲ್ಲಿ ಅವರು ಮುಖ್ಯ ಉಪನ್ಯಾಸ ನೀಡಿದರು.



ರೇಡಿಯಾಲಜಿ ಕ್ಷೇತ್ರದಲ್ಲಿ ಬಳಕೆಯಾಗುತ್ತಿರುವ ಅತ್ಯಾಧುನಿಕ ಅಲ್ಟ್ರಾಸೌಂಡ್, ಸೋನೋಗ್ರಫಿ, ಡಾಪ್ಲರ್ ಹಾಗೂ ವಿವಿಧ ಇಮೇಜಿಂಗ್ ತಂತ್ರಜ್ಞಾನಗಳ ಕುರಿತು ವಿವರಿಸಿದ ಅವರು, ಆಧುನಿಕ ತಂತ್ರಜ್ಞಾನಗಳು ಕೇವಲ ಸೈದ್ಧಾಂತಿಕ ಜ್ಞಾನಕ್ಕೆ ಸೀಮಿತವಾಗದೆ, ರೋಗಿಯ ಪರೀಕ್ಷೆಯಿಂದ ಆರಂಭಿಸಿ ನಿಖರ ಚಿತ್ರಣ ಪಡೆಯುವುದು, ವೈಜ್ಞಾನಿಕವಾಗಿ ವಿಶ್ಲೇಷಿಸುವುದು ಹಾಗೂ ಅಂತಿಮ ರೋಗನಿರ್ಣಯಕ್ಕೆ ನೆರವಾಗುವವರೆಗೆ ಪ್ರಮುಖ ಪಾತ್ರ ವಹಿಸುತ್ತಿವೆ ಎಂದರು.

ರೋಗನಿರ್ಣಯದ ನಿಖರತೆ ಹಾಗೂ ವೇಗ ಹೆಚ್ಚಿಸುವಲ್ಲಿ ಆಧುನಿಕ ರೇಡಿಯಾಲಜಿ ತಂತ್ರಜ್ಞಾನಗಳು ಅತ್ಯಂತ ಮಹತ್ವದ್ದಾಗಿವೆ. ವೈದ್ಯರು ಹೊಸ ತಂತ್ರಜ್ಞಾನಗಳು ಹಾಗೂ ಚಿಕಿತ್ಸಾ ವಿಧಾನಗಳ ಕುರಿತು ನಿರಂತರವಾಗಿ ತಮ್ಮ ಜ್ಞಾನವನ್ನು ನವೀಕರಿಸಿಕೊಳ್ಳುವುದು ಇಂದಿನ ಅಗತ್ಯವಾಗಿದೆ. ಈ ನಿಟ್ಟನಲ್ಲಿ ಪ್ರಾಯೋಗಿಕ ಹಾಗೂ ಶೈಕ್ಷಣಿಕ ಕಾರ್ಯಕ್ರಮಗಳು ವೈದ್ಯರು ಮತ್ತು ವೈದ್ಯಕೀಯ ವಿದ್ಯಾರ್ಥಿಗಳಿಗೆ ಹೆಚ್ಚಿನ ಪ್ರಯೋಜನ ನೀಡುತ್ತವೆ ಎಂದು ಹೇಳಿದರು.

ಇದೇ ವೇಳೆ ಐಆರ್‌ಐಎ ಕರ್ನಾಟಕ ರಾಜ್ಯ ಅಧ್ಯಾಯದ ವಿವಿಧ ಶೈಕ್ಷಣಿಕ ಹಾಗೂ ವೃತ್ತಿಪರ ಚಟುವಟಿಕೆಗಳ ಕುರಿತು ಮಾಹಿತಿ ನೀಡಿದ ಅವರು, ರಾಜ್ಯ ಅಧ್ಯಾಯವು ರೇಡಿಯಾಲಜಿಸ್ಟ್‌ಗಳ ಅಧಿಕೃತ ನೋಂದಾಯಿತ ಸಂಘಟನೆಯಾಗಿದ್ದು, ಸದಸ್ಯರಿಗಾಗಿ ನಿರಂತರವಾಗಿ ಶೈಕ್ಷಣಿಕ ಕಾರ್ಯಕ್ರಮಗಳು, ವೈದ್ಯಕೀಯ ಸಮ್ಮೇಳನಗಳು ಹಾಗೂ ವಿವಿಧ ವೃತ್ತಿಪರ ಚಟುವಟಿಕೆಗಳನ್ನು ಆಯೋಜಿಸುತ್ತಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಮಹಾದೇವಪ್ಪ ರಾಂಪೂರೆ ವೈದ್ಯಕೀಯ ಮಹಾವಿದ್ಯಾಲಯದ ಸಂಚಾಲಕ ಹಾಗೂ ಆಡಳಿತ ಮಂಡಳಿ ಸದಸ್ಯ ಡಾ. ಶರಣಬಸಪ್ಪ ಹರವಾಳ ಮಾತನಾಡಿದರು. ಮಹಾವಿದ್ಯಾಲಯದ ಡೀನ್ ಡಾ. ಶರಣಗೌಡ ಪಾಟೀಲ ಅಧ್ಯಕ್ಷತೆ ವಹಿಸಿದ್ದರು.

ಐಆರ್‌ಐಎ ರಾಜ್ಯ ಕಾರ್ಯದರ್ಶಿ ಡಾ. ವಿಜಯ ಸಾರಥಿ, ರೇಡಿಯಾಲಜಿ ವಿಭಾಗದ ಮುಖ್ಯಸ್ಥ ಡಾ.ಶಿವಾನಂದ ಮೋಳಕುಂದಿ ಹಾಗೂ ಕೆಎಂಸಿ ವೀಕ್ಷಕ ಡಾ. ರಾಯಕೋಡ್ ಪಾಟೀಲ ವೇದಿಕೆಯಲ್ಲಿದ್ದರು. ಡಾ. ಶೃತಿ ಪಾಟೀಲ ಸ್ವಾಗತಿಸಿದರು. ಡಾ. ಸಂಜನಾ ದೇವರಮನಿ ಕಾರ್ಯಕ್ರಮ ನಿರೂಪಿಸಿದರು.

ಜಿಲ್ಲೆಯ ನಾಲ್ಕು ಆರ್‌ಟಿಒ ಕಚೇರಿಗಳಿಗೆ ಖಾಯಂ ಅಧಿಕಾರಿಗಳ ನೇಮಕಕ್ಕೆ ಕರವೇ ಆಗ್ರಹ

ಬೀದರ್,ಸೆ.28-

ಜಿಲ್ಲೆಯ ಪ್ರಾದೇಶಿಕ ಸಾರಿಗೆ ಕಚೇರಿ (ಆರ್‌ಟಿಒ), ಭಾಲ್ಕಿ ಮತ್ತು ಬಸವಕಲ್ಯಾಣ ಸಹಾಯಕ ಪ್ರಾದೇಶಿಕ ಸಾರಿಗೆ ಕಚೇರಿಗಳು ಹಾಗೂ ಹುಮನಾಬಾದ್ ಸಹಾಯಕ ತನಿಖಾ ಠಾಣೆಯಲ್ಲಿ ಖಾಯಂ ಅಧಿಕಾರಿಗಳ ನೇಮಕ ಮಾಡಬೇಕು ಎಂದು ಕರ್ನಾಟಕ ರಕ್ಷಣಾ ವೇದಿಕೆ (ಪ್ರವೀಣ್ ಶೆಟ್ಟಿ ಬಣ) ಆಗ್ರಹಿಸಿದೆ.



ಜಿಲ್ಲಾಧಿಕಾರಿಗಳ ಮೂಲಕ ಸಾರಿಗೆ ಆಯುಕ್ತರಿಗೆ ಸಲ್ಲಿಸಿದ ಮನವಿಯಲ್ಲಿ, ನಾಲ್ಕೂ ಕಚೇರಿಗಳ ಪ್ರಭಾರವನ್ನು ಒಬ್ಬರೇ ಹಿರಿಯ ಮೋಟಾರು ವಾಹನ ನಿರೀಕ್ಷಕ ಮಹಮ್ಮದ್ ಜಾಫರ್ ಸಾದಿಕ್ ಅವರಿಗೆ ವಹಿಸಿರುವುದರಿಂದ ಆಡಳಿತ ವ್ಯವಸ್ಥೆ ಮಂದಗತಿಯಲ್ಲಿ ಸಾಗುತ್ತಿದೆ ಎಂದು ಆರೋಪಿಸಲಾಗಿದೆ.

ಅಧಿಕಾರಿಗಳ ಕೊರತೆಯಿಂದ ಚಾಲನಾ ಪರವಾನಗಿ ನವೀಕರಣ, ಹೊಸ ಲೈಸೆನ್ಸ್, ಆರ್‌ಸಿ ವರ್ಗಾವಣೆ, ಹೈಪೋಥಿಕೇಶನ್, ಆಟೋ ರಿಕ್ಷಾ ಪರ್ಮಿಟ್ ಹಾಗೂ ವಾಹನಗಳ ನವೀಕರಣ ಸೇರಿದಂತೆ ಹಲವು ಸೇವೆಗಳು ಸಕಾಲಕ್ಕೆ ದೊರೆಯದೆ ಸಾರ್ವಜನಿಕರು ತೊಂದರೆ ಅನುಭವಿಸುತ್ತಿದ್ದಾರೆ ಎಂದು ಮನವಿಯಲ್ಲಿ ತಿಳಿಸಲಾಗಿದೆ.

ಬೀದರ್ ಔರಾದ್, ಕಮಲನಗರ ಹಾಗೂ ಬೀದರ್ ದಕ್ಷಿಣ ತಾಲೂಕುಗಳ ವ್ಯಾಪ್ತಿಗೆ ಸೇವೆ ನೀಡುವ ಈ ಕಚೇರಿಗಳಿಗೆ ಮುಂದಿನ 15 ದಿನಗಳೊಳಗೆ ಖಾಯಂ ಪ್ರಾದೇಶಿಕ ಸಾರಿಗೆ ಅಧಿಕಾರಿಗಳನ್ನು ನೇಮಿಸಬೇಕು. ಇಲ್ಲವಾದಲ್ಲಿ ಹೋರಾಟ ನಡೆಸಲಾಗುವುದು ಎಂದು ಕರ್ನಾಟಕ ರಕ್ಷಣಾ ವೇದಿಕೆ ಎಚ್ಚರಿಕೆ ನೀಡಿದೆ.

ಈ ಸಂದರ್ಭದಲ್ಲಿ ಕರವೇ ಜಿಲ್ಲಾಧ್ಯಕ್ಷ ಪೀಟರ್ ಚಟಗುಪ್ಪಾ, ಜಿಲ್ಲಾ ಸಂಚಾಲಕ ಬಸವರಾಜ್ ನಂದಗಾಂವ್, ಸಹ ಕಾರ್ಯದರ್ಶಿ ಮೋಜೆಸ್ ಅಣದೂರಕರ್, ಅಶೋಕ್ ಕಡ್ಯಾಳ್, ಮೈಕಲ್ ಕಡ್ಯಾಳ್, ವಿದ್ಯಾರ್ಥಿ ಘಟಕದ ಜಿಲ್ಲಾಧ್ಯಕ್ಷ ನಾಗೇಶ್ ರಾಯಣ್ಣೂರ್ ತಾಲೂಕಾಧ್ಯಕ್ಷ ನಿಲೇಶ್ ರಾಠೋಡ್, ನಗರ ಪ್ರಧಾನ ಕಾರ್ಯದರ್ಶಿ ಗಿರೀಶ್ ಓಂಕಾರ್ ಮುಖಂಡರಾದ ಸಂಜು ಚಿಮಕೋಡ್, ಸಚಿನ್ ಕುದ್ರೆ, ರಾಜಗೊಂಡ್ ಅಣದೂರಕರ್ ಜೋಯ್ ಮೈಲೂರ್ ಅಭಿಷೇಕ್, ಸಾಗರ್ ಕಡ್ಯಾಳ್ ಹಾಗೂ ರಾಹುಲ್ ಜಾಧವ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಸಿದ್ದರಾಮಯ್ಯ ಮೂರ್ತಿ ತೆರವು ಖಂಡಿಸಿ ಸೆ.29ರಂದು ಬೃಹತ್ ಪ್ರತಿಭಟನೆ

ಕಲಬುರಗಿ,ಸೆ.28-

ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಮೂರ್ತಿ ತೆರವುಗೊಳಿಸಿರುವುದನ್ನು ಖಂಡಿಸಿ ಕರ್ನಾಟಕ ಪ್ರದೇಶ ಕುರುಬರ ಸಂಘದ ವತಿಯಿಂದ ಸೆಪ್ಟೆಂಬರ್ 29ರಂದು ನಗರದಲ್ಲಿ ಬೃಹತ್ ಪ್ರತಿಭಟನಾ ರ್ಯಾಲಿ ಹಮ್ಮಿಕೊಳ್ಳಲಾಗಿದೆ ಎಂದು ಸಂಘದ ಜಿಲ್ಲಾಧ್ಯಕ್ಷ ಭಗವಂತರಾಯ್ ಪಾಟೀಲ್ ತಿಳಿಸಿದ್ದಾರೆ.



ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸೆ.28ರಂದು ಆಯೋಜಿಸಲಾಗಿದ್ದ ಕಲಬುರಗಿ ಚಲೋ ಪ್ರತಿಭಟನೆಯನ್ನು ಕಾರಣಾಂತರಗಳಿಂದ ಸೆ.29ಕ್ಕೆ ಮುಂದೂಡಲಾಗಿದೆ. ನಗರದ ಸೂಪರ್ ಮಾರ್ಕೆಟ್ ಪ್ರದೇಶದಲ್ಲಿರುವ ಸಂಗೊಳ್ಳಿ ರಾಯಣ್ಣ ಪ್ರತಿಮೆಯಿಂದ ಜಿಲ್ಲಾಧಿಕಾರಿ ಕಚೇರಿವರೆಗೆ ಪ್ರತಿಭಟನಾ ರ್ಯಾಲಿ ನಡೆಯಲಿದೆ ಎಂದು ತಿಳಿಸಿದರು.

ಸಿದ್ದರಾಮಯ್ಯ ಅವರ ಮೂರ್ತಿ ಪ್ರತಿಷ್ಠಾಪನೆಗೆ ಅನುಮತಿ ಕೋರಿ ಮಹಾನಗರ ಪಾಲಿಕೆಗೆ ಹಲವು ಬಾರಿ ಮನವಿ ಸಲ್ಲಿಸಿದ್ದರೂ ಅನುಮತಿ ನೀಡಿಲ್ಲ. ಮೂರ್ತಿ ಸ್ಥಾಪಿಸಲಾಗಿದ್ದ ಸ್ಥಳದಲ್ಲಿ ಸಿದ್ದರಾಮಯ್ಯ ಸರ್ಕಲ್ ಎಂಬ ಬ್ಯಾನರ್ ಅಳವಡಿಸಲಾಗಿತ್ತು. ಆದರೆ ಇತ್ತೀಚೆಗೆ ಪಾಲಿಕೆ ಅಧಿಕಾರಿಗಳು ಬ್ಯಾನರ್ ಹಾಗೂ ಮೂರ್ತಿಯನ್ನು ತೆರವುಗೊಳಿಸಿರುವುದು ಖಂಡನೀಯ. ಈ ಕ್ರಮಕ್ಕೆ ಕಾರಣರಾದ ಅಧಿಕಾರಿಗಳ ವಿರುದ್ಧ ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಸಂಘದ ರಾಜ್ಯ ಮುಖಂಡ ಬಿ.ಟಿ. ಜಗದೀಶ್ ಮಾತನಾಡಿ, ರಾಜ್ಯದ ವಿವಿಧೆಡೆ ಅನುಮತಿ ಪಡೆಯದೇ ಪ್ರತಿಮೆಗಳನ್ನು ಸ್ಥಾಪಿಸಿರುವ ಉದಾಹರಣೆಗಳಿವೆ. ಆದರೆ ಕಲಬುರಗಿಯಲ್ಲಿ ಅನುಮತಿ ಪಡೆದು ಮೂರ್ತಿ ಸ್ಥಾಪಿಸಲು ಅವಕಾಶ ನೀಡುತ್ತಿಲ್ಲ ಎಂದು ಆರೋಪಿಸಿದರು.


ಹೈಕೋರ್ಟ್ ರಸ್ತೆಯಲ್ಲಿ ಸ್ಥಾಪಿಸಿದ್ದ ಸಿದ್ದರಾಮಯ್ಯ ಅವರ ಮೂರ್ತಿಯನ್ನು ಅವಮಾನಕರ ರೀತಿಯಲ್ಲಿ ತೆರವುಗೊಳಿಸಲಾಗಿದೆ ಎಂದು ಆರೋಪಿಸಿದ ಅವರು, ಅದೇ ಸ್ಥಳದಲ್ಲಿ ಮೂರ್ತಿಯನ್ನು ಪುನಃ ಪ್ರತಿಷ್ಠಾಪಿಸಬೇಕು. ಇಲ್ಲವಾದಲ್ಲಿ ಪ್ರತಿಭಟನೆಯನ್ನು ರಾಜ್ಯಾದ್ಯಂತ ವಿಸ್ತರಿಸಲಾಗುವುದು ಎಂದು ಎಚ್ಚರಿಕೆ ನೀಡಿದರು.

ಸುದ್ದಿಗೋಷ್ಠಿಯಲ್ಲಿ ಗಣಪತಿ, ಮಲ್ಲಣ್ಣ ಕುರುಡಗಿ, ರಾಯಗೊಂಡ, ನಾಗೇಶ್ ಮುಚ್ಚಕೇಡ, ಅಮೋಘಸಿದ್ಧ ಸೇರಿದಂತೆ ಸಂಘದ ಮುಖಂಡರು ಉಪಸ್ಥಿತರಿದ್ದರು.

ಚಾಂದೋರಿ ಗ್ರಾಪಂನಲ್ಲಿ ಅವ್ಯವಹಾರ ಆರೋಪ : ತನಿಖೆಗೆ ಸಚಿವ ಈಶ್ವರ್ ಖಂಡ್ರೆ ಸೂಚನೆ

ಬೀದರ್,ಸೆ.28-

ಕಮಲನಗರ ತಾಲೂಕಿನ ಚಾಂದೋರಿ ಗ್ರಾಮ ಪಂಚಾಯತಿಯಲ್ಲಿ ಕಳೆದ ಜೂನ್ ತಿಂಗಳಲ್ಲಿ ಒಬ್ಬನೇ ವ್ಯಕ್ತಿಯ ಖಾತೆಗೆ 20 ಲಕ್ಷ ರೂ. ಗೂ ಅಧಿಕ ಹಣ ಜಮೆಯಾಗಿರುವ ಕುರಿತು ವರದಿಗಳು ಪ್ರಕಟವಾಗಿರುವ ಹಿನ್ನೆಲೆಯಲ್ಲಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ್ ಖಂಡ್ರೆ ತನಿಖೆಗೆ



ಆದೇಶಿಸಿದ್ದಾರೆ.

ಈ ಸಂಬಂಧ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗೆ ಲಿಖಿತ ನಿರ್ದೇಶನ ನೀಡಿರುವ ಸಚಿವರು, ಇದೇ ರೀತಿಯ ಆರೋಪ ಕೋರೆಕಲ್ ಗ್ರಾಮ ಪಂಚಾಯತಿಯಲ್ಲಿ ಕೂಡ ಕೇಳಿಬಂದಿದ್ದು, ಅಲ್ಲಿ ಒಬ್ಬನೇ ವ್ಯಕ್ತಿಯ ಖಾತೆಗೆ 6 ಲಕ್ಷ ರೂ. ಗೂ ಅಧಿಕ ಹಣ ವರ್ಗಾವಣೆಯಾಗಿದೆ ಎಂಬ ದೂರು ಇದೆ ಎಂದು ತಿಳಿಸಿದ್ದಾರೆ.

ಉಪ ಕಾರ್ಯದರ್ಶಿ ದರ್ಜೆಯ ಅಧಿಕಾರಿಯ ನೇತೃತ್ವದಲ್ಲಿ ತನಿಖಾ ತಂಡ ರಚಿಸಿ ಎರಡೂ ಗ್ರಾಮ ಪಂಚಾಯತಿಗಳಲ್ಲಿ ನಡೆದಿರುವ ಹಣ ವರ್ಗಾವಣೆಯ ಕುರಿತು ಸಮಗ್ರ ಪರಿಶೀಲನೆ ನಡೆಸಬೇಕು. ತನಿಖೆ ಪೂರ್ಣಗೊಳಿಸಿ ಏಳು ದಿನಗಳೊಳಗೆ ವರದಿ ಸಲ್ಲಿಸುವಂತೆ ಸೂಚನೆ ನೀಡಿದ್ದಾರೆ.

ಜಿಲ್ಲೆಯ ಎಲ್ಲ ಗ್ರಾಮ ಪಂಚಾಯತಿಗಳಲ್ಲಿ, ವಿಶೇಷವಾಗಿ ಚಾಂದೋರಿ ಮತ್ತು ಕೋರೆಕಲ್ ಗ್ರಾಮ ಪಂಚಾಯತಿಗಳಲ್ಲಿ ಒಬ್ಬನೇ ವ್ಯಕ್ತಿಯ ಖಾತೆಗೆ ಹಣ ಜಮೆ ಮಾಡುವ ರೀತಿಯ ಯಾವುದೇ ಅವ್ಯವಹಾರ ನಡೆದಿದೆಯೇ ಎಂಬುದನ್ನು ಪರಿಶೀಲಿಸಬೇಕು. ವಾಸ್ತವಾಂಶಗಳೊಂದಿಗೆ ತಪ್ಪಿತಸ್ಥ ಅಧಿಕಾರಿಗಳು ಹಾಗೂ ಸಿಬ್ಬಂದಿ ವಿರುದ್ಧ ಕೈಗೊಳ್ಳಬೇಕಾದ ಶಿಸ್ತು ಕ್ರಮದ ಶಿಫಾರಸು ಸೇರಿಸಿ ವರದಿ ಸಲ್ಲಿಸುವಂತೆ ಸಚಿವ ಈಶ್ವರ್ ಖಂಡ್ರೆ ನಿರ್ದೇಶನ ನೀಡಿದ್ದಾರೆ.

ಹೆಚ್‌ಆರ್‌ಎಂಎಸ್ ಪೋರ್ಟಲ್‌ಗೆ ಆಧಾರ್ ಲಿಂಕ್ ಮಾಡಿಸಿ : ಚಂದ್ರಶೇಖರ್

ಭಾಲ್ಕಿ:

ತಾಲೂಕಿನಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಎಲ್ಲಾ ಸರ್ಕಾರಿ ನೌಕರರು ತಮ್ಮ ಕುಟುಂಬದ ಎಲ್ಲ ಸದಸ್ಯರ ಆಧಾರ್ ಸಂಖ್ಯೆಯನ್ನು ಕಡ್ಡಾಯವಾಗಿ ಹೆಚ್‌ಆರ್‌ಎಂಎಸ್ () ಪೋರ್ಟಲ್‌ನಲ್ಲಿ ಲಿಂಕ್ ಮಾಡಬೇಕು ಎಂದು ತಾಲೂಕು ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಚಂದ್ರಶೇಖರ್ ಬನ್ನಾಳೆ ತಿಳಿಸಿದ್ದಾರೆ.



ಪ್ರಕಟಣೆ ಮೂಲಕ ಮಾಹಿತಿ ನೀಡಿದ ಅವರು, ಸರ್ಕಾರಿ ನೌಕರರು ಹಾಗೂ ಅವರ ಅವಲಂಬಿತ ಕುಟುಂಬ ಸದಸ್ಯರಿಗೆ ಉಚಿತ ನಗದುರಹಿತ

ವೈದ್ಯಕೀಯ ಚಿಕಿತ್ಸೆ ಒದಗಿಸುವ ಉದ್ದೇಶದಿಂದ ರಾಜ್ಯ ಸರ್ಕಾರ ಆರೋಗ್ಯ ಸಂಜೀವಿನಿ () ಯೋಜನೆಯನ್ನು ಜಾರಿಗೆ ತಂದಿದೆ ಎಂದು ಹೇಳಿದರು.

ಒಂದನೇಯ ಪುಟದಿಂದ

ಮೈಸೂರು ದಸರಾ ಉದ್ಘಾಟನೆಗೆ ಗವಿಸಿದ್ದೇಶ್ವರ ಶ್ರೀಗಳಿಗೆ ಅಧಿಕೃತ ಆಹ್ವಾನ

ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಪ್ರಸನ್ನ ಗಡಾದ್, ಗ್ಯಾರಂಟಿ ಯೋಜನೆ ಅಧ್ಯಕ್ಷ ಶ್ರೀನಿವಾಸ ರೆಡ್ಡಿ ಉಪಸ್ಥಿತರಿದ್ದರು.

ರೈತರ ಮುಖಂಡ, ಅಧಿಕಾರಿಗಳೊಂದಿಗೆ ಜಿಲ್ಲಾಧಿಕಾರಿಗಳ ಸಭೆ

ಅ.4ರಂದು ಬರ ಅಧ್ಯಯನಕ್ಕಾಗಿ ಜಿಲ್ಲೆಗೆ ಕೇಂದ್ರ ತಂಡ ಭೇಟಿ: ಪೂವಿತಾ ಎಸ್

ವಿತರಿಸಲು ಸೂಕ್ತಕ್ರಮವಹಿಸಬೇಕೆಂದು ಜಿಲ್ಲಾಧಿಕಾರಿಗಳು ಸಂಬಧಿಸಿದ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಜಿಲ್ಲೆಯಲ್ಲಿ ಬರಗಾಲ ಹಿನ್ನಲೆಯಲ್ಲಿ ಕುಡಿಯುವ ನೀರು, ಜಾನುವಾರುಗಳಿಗೆ ಮೇವು ಪೂರೈಕೆಯಲ್ಲಿ ವ್ಯತ್ಯಯವಾಗದಂತೆ ಸಂಬಧಿಸಿದ ಇಲಾಖೆಯ ಅಧಿಕಾರಿಗಳು ನೋಡಿಕೊಳ್ಳಬೇಕು. ಭೂಮಿ ದಾಖಲೆ ಹೊಂದಿದ ಎಲ್ಲಾ ರೈತರಿಗೆ ಬರಪರಿಹಾರ ವಿತರಿಸಲು ಸೂಕ್ತ ಮುಂಜಾಗ್ರತೆ ವಹಿಸಬೇಕೆಂದು ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್. ಅವರು ಸಂಬಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ರಾಯೊಚೂರು ತಾಲೂಕಿಗೆ ದಿನವೊಂದಕ್ಕೆ 9 ರಿಂದ 10 ಗಂಟೆಗಳ ಕಾಲ ವಿದ್ಯುತ್ ಒದಗಿಸಬೇಕು. ಹಾಗೂ ಉಳಿದ ತಾಲೂಕುಗಳಿಗೆ 7 ಗಂಟೆಗಳ ಕಾಲ ವಿದ್ಯುತ್ ನೀಡಬೇಕು. ಅಲ್ಲದೆ ಜಿಲ್ಲೆಯ ಎಲ್ಲಾ ರೈತರು ಬೆಳೆ ಸಮೀಕ್ಷೆ ಮಾಡಿಸಲು ಸಂಬಧಿಸಿದ ಅಧಿಕಾರಿಗಳು ಸೂಕ್ತ ಕ್ರಮ ವಹಿಸಬೇಕೆಂದು ಜಿಲ್ಲಾಧಿಕಾರಿಗಳು ಸಂಬಧಿಸಿದ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು.

ರೈತ ಮುಖಂಡರಿದ ಮನವಿ: ಬರಗಾಲದವೆಂದು ಘೋಷಣೆ ಮಾಡಿದ ಪ್ರದೇಶದಲ್ಲಿ ರೈತರ ಬೆಳೆನಷ್ಠ ಪರಿಹಾರ ಕೂಡಲೆ ರೈತರ ಖಾತೆಗೆ ಜಮಾ ಮಾಡಬೇಕು. ಮತ್ತು ಧನಕರುಗಳಿಗೆ ಮೇವು ನೀರಿನ ವೈವಸ್ಥೆ ಮಾಡನಬೇಕು. ತುಂಗಭದ್ರ ಎಡದಂಡೆ ನಾಲೆ ಮತ್ತು ನಾರಾಯಣಪುರ ಬಲದಂಡೆ ನಾಲೆಯ ಉಪಖಾಲುವೆಗಳ ಸಿಲ್ಟ್, ಜಂಗಲ್, ತೆಗೆದು ಕೊನೆ ಭಾಗದ ರೈತರಿಗೆ ಸಮರ್ಪಕ ನೀರು ಕೊಡಬೇಕು. ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗದಂತೆ ನೋಡಿಕೊಳ್ಳಬೇಕು. ರೈತರ ಪಂಪ್‌ಸೆಟ್‌ಗಳಿಗೆ ಸಮರ್ಪಕ ವಿದ್ಯುತ್ ಪೂರೈಸಬೇಕು. ಜೋಳ ಖರೀದಿ ಕೇಂದ್ರದಲ್ಲಿ ಜೋಳ ಕೊಟ್ಟಂತ ರೈತರಿಗೆ ಕೂಡಲೆ ಹಣ ಬಿಡುಗಡೆ ಮಾಡಬೇಕು. ನಾರಾಯಣಪುರ ಬಲದಂಡೆ ನಾಲೆಯ ವಾರಾಬಂದಿ ಪದ್ದತಿಯನ್ನು 07 ದಿನ ಬಂದ್ ಮಾಡಿ, 14 ದಿನ ಚಾಲು ಪದ್ದತಿಯಂತೆ ನೀರು ಹರಿಸಬೇಕು ಎಂದು ಜಿಲ್ಲಾಧಿಕಾರಿಗಳಿಗೆ ರೈತರ ಮುಖಂಡರಿದ ಮನವಿ ಸಲ್ಲಿಸಲಾಯಿತು.

ಇದೇ ಸಂದರ್ಭದಲ್ಲಿ ಲಿಂಗಸುಗೂರು ಸಹಾಯಕ ಆಯುಕ್ತ ನಾಗೇಂದ್ರ ಬಾಬು ಕುಮ್ಮಾರ, ರಾಯಚೂರು ಸಹಾಯಕ ಆಯುಕ್ತ ಡಾ.ಹಂಪಣ್ಣ ಸಜ್ಜನ್, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಜಿ.ಹರೀಶ್, ಆಹಾರ ಇಲಾಖೆಯ ಉಪ ನಿರ್ದೇಶಕ ನಜೀರ್ ಅಹ್ಮದ್ ಕನವಳ್ಳಿ, ಕೃಷಿ ಇಲಾಖೆಯ ಜಂಟಿ ನಿರ್ದೇಶಕ ಪ್ರಕಾಶ್ ಚವ್ಹಾಣ್, ಪಶು ಇಲಾಖೆಯ ಉಪ ನಿರ್ದೇಶಕ ಪೋಮ್ ಸಿಂಗ್, ಕೆ.ಬಿ.ಜೆ.ಎಲ್. ವಿಭಾಗ ಇಇ ಈಶ್ವರ, ರಾಯಚೂರು ತಹಶೀಲ್ದಾರ್ ಸುರೇಶ ವರ್ಮಾ ಸೇರಿದಂತೆ ರೈತ ಮುಖಂಡರಾದ ಕರ್ನಾಟಕ ರಾಜ್ಯ ರೈತ ಸಂಘದ ಜಿಲ್ಲಾಧ್ಯಕ್ಷರಾದ ಪ್ರಭಾಕರ ಪಾಟೀಲ್ ಇಂಗಳದಾಳ, ರಾಜ್ಯ ಗೌರವಾಧ್ಯಕ್ಷ ಚಾಮರಸ ಮಾಲಿ ಪಾಟೀಲ್, ದೊಡ್ಡ ಬಸನಗೌಡ ಬಲ್ಲಟಗಿ, ಸೂಗುರಯ್ಯ ಆರ್.ಎಸ್. ಮಠ, ವೆಂಕಪ್ಪ ಕಾರಬಾರಿ, ಬಸವರಾಜ ಮಾಲಿ ಪಾಟೀಲ್, ಮಲ್ಲಣ ದಿನ್ನಿ, ಹಾಜಿ ಮಸ್ತಾನ್ ಸೇರಿದಂತೆ ಇತರರು ಇದ್ದರು.

ಮುಷ್ಕರ ವಾಪಸ್ : ಎಂದಿನಂತೆ ಕಾರ್ಯನಿರ್ವಹಿಸಲಿವೆ ಬ್ಯಾಂಕ್‌ಗಳು

ಭಾನುವಾರದಂದು ಸಾರ್ವಜನಿಕ ವಲಯದ ಬ್ಯಾಂಕ್‌ಗಳು ಮತ್ತು ಪ್ರಾದೇಶಿಕ ಗ್ರಾಮೀಣ ಬ್ಯಾಂಕ್‌ಗಳನ್ನು ತೆರೆಯಲಾಗಿತ್ತು.

ಅನಿರ್ದಿಷ್ಟಾವಧಿ ಧರಣಿ ಸತ್ಯಾಗ್ರಹ 7ನೇ ದಿನಕ್ಕೆ: ಅಧಿಕಾರಿಗಳ ಭೇಟಿ ಇಲ್ಲದೆ ಹೋರಾಟ ಮುಂದುವರಿಕೆ

ಆಗ್ರಹಿಸಿದ್ದಾರೆ.

ಧರಣೆಯಲ್ಲಿ ದಲಿತ ಸಂರಕ್ಷ ಸಮಿತಿ ರಾಯಚೂರು ಜಿಲ್ಲಾ ಅಧ್ಯಕ್ಷ ಬಾಲಸ್ವಾಮಿ ಜಿನ್ನಾಪೂರ,ಲಿಂಗಸುಗೂರು ತಾಲ್ಲೂಕು ಅಧ್ಯಕ್ಷ ಕಿರಣಕುಮಾರ, ತಾಲ್ಲೂಕು ಉಪಾಧ್ಯಕ್ಷ ಪ್ರದೀಪ್ ಮುತ್ತು, ತಾಲ್ಲೂಕು ಪ್ರಧಾನ ಕಾರ್ಯದರ್ಶಿ ಚಿನ್ನಪ್ಪ ರಾರಾವಿ ಮುದುಗಲ್,ಪತ್ರಿಕಾ ಮಾಧ್ಯಮ ಸಲಹೆಗಾರ ವಿಘ್ನೇಶ್ ಹಿರೇನಗನೂರು, ಹಟ್ಟಿ ಪಟ್ಟಣ ಅಧ್ಯಕ್ಷ ಮೌನೇಶ್ ಬಿ.ಅನಿಲ್ ಕುಮಾರ ಕಟ್ಟಿಮನಿ ಉಪಅಧ್ಯಕ್ಷರು ಹಟ್ಟಿ,ಜಿಲ್ಲಾ ಕಾರ್ಯಾಧ್ಯಕ್ಷ ಸಿದ್ದಣ್ಣ ಹೂವಿನಬಾವಿ,ಮಸ್ಕಿ ತಾಲ್ಲೂಕು ಅಧ್ಯಕ್ಷ ಮರಿಸ್ವಾಮಿ ಬೇನಕನಾಳ,ತಾಲ್ಲೂಕು ಉಪಾಧ್ಯಕ್ಷ ಲಕ್ಷ್ಮಣ ಕಡಬೂರು,ಕಂಟೇಶ ಬಸಾಪೂರ, ಹುಚ್ಚಪ್ಪ ಬುಳ್ಳಾಪೂರ, ಕವಿತಾಳ ಹೋಬಳಿ ಅಧ್ಯಕ್ಷ ಕವಿತಾಳ, ಪ್ರಧಾನ ಕಾರ್ಯದರ್ಶಿ ಬಸವರಾಜ ಕೆಳಗೇರಿ ಸೇರಿದಂತೆ ಸಂಘಟನೆಯ ಪದಾಧಿಕಾರಿಗಳು ಭಾಗವಹಿಸಿದ್ದರು.

ಅಲ್ಲದೆ ಲಳ್ಳೆಪ್ಪ ಕವಿತಾಳ,ಮೌನೇಶ್,ಅಮರೇಶ್,ಚಿದಾನಂದ, ಶರಣಪ್ಪ ಸೇರಿದಂತೆ ದಲಿತ ಸಂರಕ್ಷ ಸಮಿತಿಯ ಪದಾಧಿಕಾರಿಗಳು ಹಾಗೂ ಚಿಕ್ಕಹೆಸರೂರು ಮತ್ತು ಸುತ್ತಮುತ್ತಲಿನ ಗ್ರಾಮಗಳ ರೈತರು,ಗ್ರಾಮಸ್ಥರು ಧರಣಿಯಲ್ಲಿ ಪಾಲ್ಗೊಂಡಿದ್ದರು.

ಬೇಡಿಕೆಗಳು ಈಡೇರುವವರೆಗೆ ಹೋರಾಟವನ್ನು ಮುಂದುವರಿಸುವುದಾಗಿ ಸಂಘಟನೆಯ ಮುಖಂಡರು ತಿಳಿಸಿದ್ದಾರೆ.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ನಿರ್ದೇಶಕಿ ಭೇಟಿ ಪರಿಶೀಲನೆ

ತಾಯಿ ಮಕ್ಕಳ ಆರೈಕೆ, ಗುಣಮಟ್ಟದ ಸೇವೆಗೆ ಸದಾ ನಿಗಾವಹಿಸಿ: ಡಾ.ರಜನಿ

ಜಿಲ್ಲಾ ಸರ್ವೆಕ್ಷಣಾಧಿಕಾರಿ ಡಾ.ಗಣೇಶ್ ಕೆ., ಡಿಎಫ್‌ಡಬ್ಲ್ಯುಓ ಡಾ.ಶಿವಕುಮಾರ್ ನಾರಾ, ಡಿಟಿಓ ಡಾ.ಯಶೋಧಾ, ಕೆಸೆಪ್ಸ್ನ ಹಿರಿಯ ಫಾರ್ಮಸಿ ಅಧಿಕಾರಿ ವಿಜಯಲಕ್ಷ್ಮೀ, ತಾಲೂಕಾ ಆರೋಗ್ಯಾಧಿಕಾರಿ ಡಾ.ಸತೀಶ್ ಕೆ., ನಿರ್ದೇಶನಾಲಯದ ಕಚೇರಿ ಅಧಿಕ್ಷಕ ಪಿ.ಎಮ್. ರಮೇಶ್ ಸೇರಿದಂತೆ ಆಡಳಿತ ವೈದ್ಯಾಧಿಕಾರಿಗಳು, ತಜ್ಞ ವೈದ್ಯರು, ಸಿಬ್ಬಂದಿಯವರು ಉಪಸ್ಥಿತರಿದ್ದರು.

ದುಶ್ಚಟಮುಕ್ತ ಸಮಾಜ ನಿರ್ಮಾಣಕ್ಕೆ ಮಧ್ಯವರ್ಜನ ಶಿಬಿರಗಳು ಪೂರಕ

ಕುಂಟೆ ವಹಿಸಿದ್ದರು.

ಮುಖ್ಯ ಅತಿಥಿಗಳಾಗಿ ಅಖಿಲ ಕರ್ನಾಟಕ ಜನಜಾಗೃತಿ ವೇದಿಕೆ (ರಿ.), ಬೆಳ್ತಂಗಡಿ ರಾಜ್ಯ ಸಂಘಟನಾ ಅಧ್ಯಕ್ಷ ನಟರಾಜ್ ಬದಾಮಿ ಹಾಗೂ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ನಿರ್ದೇಶಕ ರಾಘವೇಂದ್ರ ಪಟಗಾರ ಪಾಲ್ಗೊಂಡಿದ್ದರು.

ರಾಘವೇಂದ್ರ ಪಟಗಾರ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ಶಿಬಿರಾರ್ಥಿಗಳು ತಮ್ಮ ಕುಟುಂಬದ ಅಭಿವೃದ್ಧಿ, ಆರೋಗ್ಯ ಹಾಗೂ ಮಕ್ಕಳ ಭವಿಷ್ಯದ ಕುರಿತು ಗಂಭೀರವಾಗಿ ಚಿಂತಿಸಬೇಕು. ಇನ್ನು ಮುಂದೆ ಯಾವುದೇ ದುಶ್ಚಟಗಳಿಗೆ ಅವಕಾಶ ನೀಡದೆ, ಕುಟುಂಬದೊಂದಿಗೆ ಉತ್ತಮ ಹಾಗೂ ಆರೋಗ್ಯಕರ ಜೀವನ ನಡೆಸುವ ಸಂಕಲ್ಪ ಮಾಡಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಜನಜಾಗೃತಿ ವಿಭಾಗ, ಕೊಪ್ಪಳದ ಯೋಜನಾಧಿಕಾರಿ ನಾಗೇಶ್, ಶರಣಪ್ಪ, ಸತೀಶ್ ಬಳೆ, ಭಾನುಪ್ರಕಾಶ್ ಕೇಣದ್, ಬಸವರಾಜ್, ಮೌನೇಶ ಪತ್ತಾರ, ಪಂಪಾಪತಿ ಸೇರಿದಂತೆ ರಾಯಚೂರು ಜಿಲ್ಲಾ ಜನಜಾಗೃತಿ ವೇದಿಕೆಯ ಸದಸ್ಯರು ಹಾಗೂ ಶಿಬಿರಾರ್ಥಿಗಳು ಉಪಸ್ಥಿತರಿದ್ದರು.

ಸೆಪ್ಟಂಬರ್ 30ರಂದು ಕಲಬುರಗಿ ವಿಭಾಗ ಮಟ್ಟದ ದಸರಾ ಕ್ರೀಡಾಕೂಟ

ರಾಯಚೂರು ಸೆ.28

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯಿಂದ 2026-27ನೇ ಸಾಲಿನ ಕಲಬುರಗಿ ವಿಭಾಗ ಮಟ್ಟದ ದಸರಾ ಕ್ರೀಡಾಕೂಟವನ್ನು ಸೆಪ್ಟಂಬರ್ 30ರಂದು ವಿವಿಧ ಜಿಲ್ಲೆಯಲ್ಲಿ ಆಯೋಜಿಸಲಾಗುತ್ತಿದ್ದು, ಆಸಕ್ತ ಕ್ರೀಡಾಪಟ್ಟುಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಕೋರಲಾಗಿದೆ.

ಕಲಬುರಗಿ ಜಿಲ್ಲೆಯಲ್ಲಿ ವಿಭಾಗ ಮಟ್ಟದ ಹ್ಯಾಂಡಬಲ್, ಅಥ್ಲೇಟಿಕ್ಸ್, ಈಜು, ಜುಡೋ, ಟೆನ್ನಿಸ್, ಕೊಪ್ಪಳ ಜಿಲ್ಲೆಯಲ್ಲಿ ಟೇಕ್ವಾಂಡೋ, ನೆಟ್ ಬಾಲ್, ಕುಸ್ತಿ, ಕರಾಟೆ, ಬಾಲ್ ಬ್ಯಾಡ್ಮಿಂಟನ್, ಬಾಕ್ಸಿಂಗ್, ರಾಯಚೂರು ಜಿಲ್ಲೆಯಲ್ಲಿ ಬಾಸ್ಕೆಟ್ ಬಾಲ್, ಯೋಗ, ವಾಲಿಬಾಲ್, ಬೀದರ್ ಜಿಲ್ಲೆಯಲ್ಲಿ ಶಟಲ್ ಬ್ಯಾಡ್ಮಿಂಟನ್, ಟೇಬಲ್ ಟೆನ್ನಿಸ್, ಯಾದಗಿರಿ ಜಿಲ್ಲೆಯಲ್ಲಿ ಭಾರ ಎತ್ತುವುದು, ಖೋ-ಖೋ, ಥ್ರೋಬಾಲ್, ಬಳ್ಳಾರಿ ಜಿಲ್ಲೆಯಲ್ಲಿ ಹಾಕಿ ಫುಟ್ ಬಾಲ್ ಹಾಗೂ ವಿಜಯ ನಗರ ಜಿಲ್ಲೆಯಲ್ಲಿ ಕಬಡ್ಡಿ, ವುಶು ಹಮ್ಮಿಕೊಳ್ಳಲಾಗಿದ್ದು, ಜಿಲ್ಲಾ ಮಟ್ಟದಲ್ಲಿ ವಿಜೇತರಾದ ಕ್ರೀಡಾಪಟುಗಳು ಕಲಬುರಗಿ ವಿಭಾಗ ಮಟ್ಟದ ಜಿಲ್ಲೆಗಳ ಸ್ಪರ್ಧೆಗಳಿಗೆ ಸೆಪ್ಟಂಬರ್ 30ರ ಬೆಳಿಗ್ಗೆ 8:30 ಗಂಟೆಯೊಳಗಾಗಿ ಆಯಾ ಜಿಲ್ಲೆಗಳ ಜಿಲ್ಲಾ ಕಚೇರಿ/ ಜಿಲ್ಲಾ ಕ್ರೀಡಾಂಗ ಣದಲ್ಲಿ ವರದಿ ಮಾಡಿಕೊಳ್ಳಬೇಕು. ಪ್ರಯಾಣ ಭತ್ಯೆಯನ್ನು ಕೆ-2 ಮೂಲಕ ಪಾವತಿಸಲಾಗುವುದು ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬಹುಶಿಸ್ತೀಯ ಸಂಶೋಧನೆಗೆ ಇಇಜಿ ತಂತ್ರಜ್ಞಾನ ಬಳಕೆ ಹೆಚ್ಚಳ ಅಗತ್ಯ: ಪ್ರೊ.ಬಟ್ಟು ಸತ್ಯನಾರಾಯಣ



ಕಲಬುರಗಿ,ಸೆ.28-

ಎಲೆಕ್ಟ್ರೋಎನ್ಸೆ ಫಲೋಗ್ರಫಿ (ಇಇಜಿ) ಹಾಗೂ ಸುಧಾರಿತ ತಂತ್ರಜ್ಞಾನಗಳನ್ನು ಬಳಸಿಕೊಂಡು ಬಹುಶಿಸ್ತೀಯ ಸಂಶೋಧನೆಗೆ ಹೆಚ್ಚಿನ ಆದ್ಯತೆ ನೀಡಬೇಕು. ಈ ನಿಟ್ಟಿನಲ್ಲಿ ರಾಷ್ಟ್ರೀಯ ಮತ್ತು ಅಂತರರಾಷ್ಟ್ರೀಯ ಮಟ್ಟದಲ್ಲಿ ಶೈಕ್ಷಣಿಕ ಹಾಗೂ ಸಂಶೋಧನಾ ಸಹಯೋಗವನ್ನು ಬಲಪಡಿಸುವ ಅಗತ್ಯವಿದೆ ಎಂದು ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ (ಸಿಯುಕೆ) ಕುಲಪತಿ ಪ್ರೊ. ಬಟ್ಟು ಸತ್ಯನಾರಾಯಣ ಹೇಳಿದರು.

ಸಿಯುಕೆ ಸಾಮಾಜಿಕ ಮತ್ತು ವರ್ತನೆಯ ವಿಜ್ಞಾನ ಶಾಲೆಯ ಮನೋವಿಜ್ಞಾನ ವಿಭಾಗ ಆಯೋಜಿಸಿದ್ದ ಮೂರು ದಿನಗಳ ಇಇಜಿ ಬಯೋಫೀಡ್‌ಬ್ಯಾಕ್ ಕಾರ್ಯಾಗಾರ ಉದ್ಘಾಟಿಸಿ ಅವರು ಮಾತನಾಡಿದರು.

ಮೆದುಳಿನ ವಿದ್ಯುತ್ ತರಂಗಗಳನ್ನು ದಾಖಲಿಸುವ ಎಲೆಕ್ಟ್ರೋಎನ್ಸೆ ಫಲೋಗ್ರಫಿ (ಇಇಜಿ) ಹಾಗೂ ಸಂಬಂಧಿತ ಮನೋಶಾರೀರಿಕ ವಿಧಾನಗಳ ಕುರಿತು ವಿದ್ಯಾರ್ಥಿಗಳು ಮತ್ತು ಸಂಶೋಧನಾ ವಿದ್ಯಾರ್ಥಿಗಳಿಗೆ ಪ್ರಾಯೋಗಿಕ ತರಬೇತಿ ನೀಡುವುದು ಕಾರ್ಯಾಗಾರದ ಮುಖ್ಯ ಉದ್ದೇಶವಾಗಿತ್ತು ಎಂದು ತಿಳಿಸಿದರು.

ವಿವಿಧ ಶಿಸ್ತುಗಳ ಸಂಶೋಧಕರು ವಿಶ್ವವಿದ್ಯಾಲಯದಲ್ಲಿರುವ ಪ್ರಯೋಗಾಲಯ ಮತ್ತು ಸಂಶೋಧನಾ ಸೌಲಭ್ಯಗಳನ್ನು ಸಮರ್ಪಕವಾಗಿ ಬಳಸಿಕೊಂಡು ಹೊಸ ಸಂಶೋಧನಾ ಸಾಧ್ಯತೆಗಳನ್ನು ಅನ್ವೇಷಿಸಬೇಕು. ಇಂತಹ ಪ್ರಯತ್ನಗಳಿಂದ ದೇಶೀಯ ಹಾಗೂ ಜಾಗತಿಕ ಮಟ್ಟದಲ್ಲಿ ಸಂಶೋಧನಾ ಸಹಯೋಗವನ್ನು ಮತ್ತಷ್ಟು ವಿಸ್ತರಿಸಬಹುದು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಕುಲಪತಿ ಪ್ರೊ. ಬಟ್ಟು ಸತ್ಯನಾರಾಯಣ ಅವರು ಬಯೋಫೀಡ್‌ಬ್ಯಾಕ್ ಮತ್ತು ಅರಿವಿನ ನರಮನೋವಿಜ್ಞಾನ ಪ್ರಯೋಗಾಲಯದ ವೆಬ್‌ಸೈಟ್‌ಗೆ ಚಾಲನೆ ನೀಡಿದರು. ಪ್ರಯೋಗಾಲಯದ ಸೌಲಭ್ಯಗಳು, ಸಂಶೋಧನಾ ಚಟುವಟಿಕೆಗಳು ಹಾಗೂ ಶೈಕ್ಷಣಿಕ ಉಪಕ್ರಮಗಳ ಸಮಗ್ರ ಮಾಹಿತಿಯನ್ನು ಒಳಗೊಂಡಿರುವ ಈ ವೆಬ್‌ಸೈಟ್ ದೇಶ-ವಿದೇಶಗಳ ಸಂಶೋಧಕರು ಮತ್ತು ಸಂಸ್ಥೆಗಳೊಂದಿಗೆ ಸಂಶೋಧನಾ ಸಹಯೋಗ ಬೆಳೆಸಲು ಪ್ರಮುಖ ವೇದಿಕೆಯಾಗಲಿದೆ ಎಂದು ತಿಳಿಸಲಾಯಿತು.

ಏರೋಬ್ ಪ್ರೈವೇಟ್ ಲಿಮಿಟೆಡ್‌ನ ಸಹಾಯಕ ತಾಂತ್ರಿಕ ಬೆಂಬಲ ವ್ಯವಸ್ಥಾಪಕ ರಾಹುಲ್ ಗುಪ್ತಾ ಸಂಪನ್ಮೂಲ ವ್ಯಕ್ತಿಯಾಗಿ ಭಾಗವಹಿಸಿ, ಇಇಜಿ ಪರೀಕ್ಷೆಯಲ್ಲಿ ಎಲೆಕ್ಟ್ರೋಡ್ ಅಳವಡಿಕೆ, ಸಿಗ್ನಲ್ ದಾಖಲಾತಿ, ದತ್ತಾಂಶ ಸಂಗ್ರಹಣೆ ಹಾಗೂ ಆರ್ಟಿಫ್ಯಾಕ್ಟ್ ಗುರುತಿಸುವಿಕೆ ಸೇರಿದಂತೆ ವಿವಿಧ ಪ್ರಾಯೋಗಿಕ ವಿಧಾನಗಳ ಕುರಿತು ತರಬೇತಿ ನೀಡಿದರು.

ಇದರೊಂದಿಗೆ ಗಾಲ್ವನಿಕ್ ಸ್ಕಿನ್ ರೆಸ್ಪಾನ್ಸ್ (ಜಿಎಸ್‌ಆರ್), ಹೃದಯ ಬಡಿತದ ವ್ಯತ್ಯಾಸ (ಎಚ್‌ಆರ್‌ವಿ) ಹಾಗೂ ಎಲೆಕ್ಟ್ರೋಮ್ಯೋಗ್ರಫಿ (ಇಎಂಜಿ) ಸೇರಿದಂತೆ ವಿವಿಧ ಶಾರೀರಿಕ ಮಾಪನ ವಿಧಾನಗಳ ಬಗ್ಗೆಯೂ ಭಾಗವಹಿಸಿದವರಿಗೆ ಪ್ರಾಯೋಗಿಕ ಮಾಹಿತಿ ನೀಡಲಾಯಿತು.

ಮನೋವಿಜ್ಞಾನ ವಿಭಾಗದ ಮುಖ್ಯಸ್ಥ ಪ್ರೊ. ವಿಜಯೇಂದ್ರ ಪಾಂಡೆ ಸ್ವಾಗತಿಸಿ, ಪ್ರಾಯೋಗಿಕ ಮತ್ತು ಸಂಶೋಧನಾ ಆಧಾರಿತ ತರಬೇತಿಯನ್ನು ಬಲಪಡಿಸಲು ವಿಭಾಗ ಕೈಗೊಂಡಿರುವ ಉಪಕ್ರಮಗಳ ಕುರಿತು ವಿವರಿಸಿದರು. ಸಾಮಾಜಿಕ ಮತ್ತು ವರ್ತನೆಯ ವಿಜ್ಞಾನ ಶಾಲೆಯ ಡೀನ್ ಪ್ರೊ. ಪವಿತ್ರಾ ಆರ್. ಆಲೂರ್ ಮಾತನಾಡಿದರು. ಸಹಾಯಕ ಪ್ರಾಧ್ಯಾಪಕಿ ಡಾ. ಆಸ್ತಾ ವಂದಿಸಿದರು.

ಕನಿಷ್ಠ ಕೂಲಿ ಜಾರಿಗೆ ಆಗ್ರಹಿಸಿ ಶಾಸಕರ ನಿವಾಸದ ಎದುರು ಪ್ರತಿಭಟನೆ



ಅಫಜಲಪುರ,ಸೆ.28-

ಅಂಗನವಾಡಿ, ಅಕ್ಷರ ದಾಸೋಹ (ಬಿಸಿಯೂಟ), ಆಶಾ, ಗ್ರಾಮ ಪಂಚಾಯಿತಿ ಹಾಗೂ ಹಾಸ್ಟೆಲ್ ನೌಕರರಿಗೆ ಸೂಕ್ತ ಕನಿಷ್ಠ ಕೂಲಿಯನ್ನು ನಿಗದಿಪಡಿಸಿ ತಕ್ಷಣ ಜಾರಿಗೆ ತರಬೇಕು ಸೇರಿದಂತೆ ವಿವಿಧ ನ್ಯಾಯಯುತ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ, ರವಿವಾರ ಸಿಐಟಿಯು ನೇತೃತ್ವದಲ್ಲಿ ವಿವಿಧ ಸಂಘಟನೆಗಳ ಮುಖಂಡರು ಅಫಜಲಪುರ ಕ್ಷೇತ್ರದ ಶಾಸಕ ಎಂ.ವೈ. ಪಾಟೀಲ ಅವರ ನಿವಾಸದ ಎದುರು ಪ್ರತಿಭಟನೆ ನಡೆಸಿ ಮನವಿ ಸಲ್ಲಿಸಿದರು.

ಸಿಐಟಿಯು ಜಿಲ್ಲಾ ಅಧ್ಯಕ್ಷೆ ಶಾಂತಾ ಘಂಟೆ ಮಾತನಾಡಿ, ಕಳೆದ ಸೆಪ್ಟೆಂಬರ್ 8ರಂದು ರಾಜ್ಯ ಸರ್ಕಾರಕ್ಕೆ ಸಲ್ಲಿಸಿದ್ದ ಮನವಿಯ ಹಿನ್ನೆಲೆಯಲ್ಲಿ ಮುಖ್ಯಮಂತ್ರಿಗಳೊಂದಿಗೆ ಸಭೆ ಏರ್ಪಡಿಸುವುದಾಗಿ ಸರ್ಕಾರ ಭರವಸೆ ನೀಡಿದ್ದರೂ, ಬಳಿಕ ಮಾತು ತಪ್ಪಿರುವುದನ್ನು ಖಂಡಿಸಿ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು.

ಪ್ರತಿಭಟನೆಯಲ್ಲಿ ಮಾತನಾಡಿದ ವಿವಿಧ ಸಂಘಟನೆಗಳ ಮುಖಂಡರು, ರಾಜ್ಯ ಸರ್ಕಾರ ಮೇ 22ರಂದು ಹೊರಡಿಸಿದ್ದ ಕನಿಷ್ಠ ವೇತನ ಅಧಿಸೂಚನೆಯನ್ನು ತಡೆಹಿಡಿದು ಸಂಪುಟ ಉಪಸಮಿತಿ ರಚಿಸಿರುವುದು ಕಾರ್ಮಿಕರಿಗೆ ಎಸಗಿದ ಅನ್ಯಾಯವಾಗಿದೆ ಎಂದು ಆರೋಪಿಸಿದರು.

ತಡೆಹಿಡಿದಿರುವ ಆದೇಶವನ್ನು ಹಿಂಪಡೆದು ಕನಿಷ್ಠ ವೇತನವನ್ನು ತಕ್ಷಣ ಜಾರಿಗೆ ತರಬೇಕು. ಅಂಗನವಾಡಿ, ಅಕ್ಷರ ದಾಸೋಹ ಹಾಗೂ ಆಶಾ ಕಾರ್ಯಕರ್ತೆಯರನ್ನು ಕಾರ್ಮಿಕರೆಂದು ಪರಿಗಣಿಸಿ ಕನಿಷ್ಠ ವೇತನದ ವ್ಯಾಪ್ತಿಗೆ ತರಬೇಕು ಎಂದು ಒತ್ತಾಯಿಸಿದರು.

ಚುನಾವಣಾ ಸಂದರ್ಭದಲ್ಲಿ ನೀಡಿದ ಭರವಸೆಯಂತೆ ಅಕ್ಷರ ದಾಸೋಹ ಸಿಬ್ಬಂದಿಗೆ 7,000 ರೂ., ಆಶಾ ಕಾರ್ಯಕರ್ತೆಯರಿಗೆ 10,000 ರೂ. ಹಾಗೂ ಅಂಗನವಾಡಿ ನೌಕರರಿಗೆ 15,000 ರೂ. ಬಾಕಿ ವೇತನವನ್ನು ತಕ್ಷಣ ಬಿಡುಗಡೆ ಮಾಡಬೇಕು ಎಂದು ಆಗ್ರಹಿಸಿದರು.

ಇದೇ ವೇಳೆ ಕೇಂದ್ರ ಸರ್ಕಾರ ಜಾರಿಗೊಳಿಸಿರುವ ನಾಲ್ಕು ಕಾರ್ಮಿಕ ಸಂಹಿತೆಗಳನ್ನು ಹಿಂಪಡೆಯಬೇಕು. ಇಎಸ್‌ಐ, ಇಪಿಎಫ್ ಹಾಗೂ ಬೋನಸ್ ಸೌಲಭ್ಯ ಪಡೆಯಲು ಇರುವ ವೇತನ ಮಿತಿಯನ್ನು ರದ್ದುಗೊಳಿಸಬೇಕು. ವಸತಿ ರಹಿತ ಕಾರ್ಮಿಕರಿಗೆ ವಸತಿ ಒದಗಿಸಬೇಕು ಹಾಗೂ ಶಿಕ್ಷಣ, ಆರೋಗ್ಯ ಮತ್ತು ಸಾರಿಗೆ ಕ್ಷೇತ್ರಗಳ ಖಾಸಗೀಕರಣವನ್ನು ಕೈಬಿಡಬೇಕು ಎಂದು ಸರ್ಕಾರವನ್ನು ಮನವಿ ಮೂಲಕ ಒತ್ತಾಯಿಸಲಾಯಿತು.

ಪ್ರತಿಭಟನೆಯಲ್ಲಿ ಸಿಐಟಿಯು ಜಿಲ್ಲಾ ಅಧ್ಯಕ್ಷೆ ಶಾಂತಾ ಘಂಟೆ, ಪ್ರಧಾನ ಕಾರ್ಯದರ್ಶಿ ಎಂ.ಬಿ. ಸಜ್ಜನ್, ಮುಖಂಡರಾದ ಶ್ರೀಮಂತ ಬಿರಾದಾರ, ಗುರು ಚಾಂದಕವಟೆ ಬೋಜರಾಜ ಪಾಟೀಲ, ಕಲಾವತಿ ತೆಲ್ಲೂರ, ಶ್ರೀದೇವಿ ಬೂತಿ,ಕಾಂಚನಾ ಕಾಂಬಳೆ, ಶರಣಬಾಯಿ ತಳವಾರ, ಹಾಗೂ ಹಾಸ್ಟೆಲ್ ನೌಕರರು ಸೇರಿದಂತೆ ಅಂಗನವಾಡಿ, ಅಕ್ಷರ ದಾಸೋಹ, ಗ್ರಾಮ ಪಂಚಾಯಿತಿ ಹಾಗೂ ಹಾಸ್ಟೆಲ್ ನೌಕರರ ಸಂಘಗಳ ಪ್ರಮುಖ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.



ಅಭಿನವಶ್ರೀ ಜನ್ಮದಿನೋತ್ಸವ: ರಕ್ತದಾನ, ಕ್ಯಾನ್ಸರ್ ಜಾಗೃತಿ ಪಾದಯಾತ್ರೆ, ಪರಿಸರ ಜಾಗೃತಿ ಕಾರ್ಯಕ್ರಮ

ಬಸವಕಲ್ಯಾಣ,ಸೆ.28-


ಡಾ.ಅಭಿನವ ಘನಲಿಂಗ ರುದ್ರಮುನಿ ಶಿವಾಚಾರ್ಯರ ಜನ್ಮದಿನೋತ್ಸವ ಹಾಗೂ ಪಟ್ಟಾಧಿಕಾರ ವರ್ಧಂತಿ ಮಹೋತ್ಸವದ ಅಂಗವಾಗಿ ಸೆ.27 ಮತ್ತು 28ರಂದು ಬಸವಕಲ್ಯಾಣದಲ್ಲಿ ವಿವಿಧ ಸಮಾಜಮುಖಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಆಯೋಜಕರು ತಿಳಿಸಿದ್ದಾರೆ.

ಜಾಗೃತಿ ನಮ್ಮ ಹೆಜ್ಜೆ-ಆರೋಗ್ಯ ನಮ್ಮ ಗುರಿ ಎಂಬ ಆಶಯದೊಂದಿಗೆ ಸೆ.27ರಂದು ಬೆಳಿಗ್ಗೆ 11 ಗಂಟೆಗೆ ಮಹಾತ್ಮ ಗಾಂಧಿ ವೃತ್ತದಿಂದ ಶಿವಾಜಿ ಪಾರ್ಕ್‌ವರೆಗೆ ಕ್ಯಾನ್ಸರ್ ಜಾಗೃತಿ ಪಾದಯಾತ್ರೆ ನಡೆಯಲಿದೆ. ಪಾದಯಾತ್ರೆಯಲ್ಲಿ ರಾಜಕೀಯ ಮುಖಂಡರು, ಹಿರಿಯ ನಾಗರಿಕರು, ಶಾಲಾ-ಕಾಲೇಜುಗಳ ವಿದ್ಯಾರ್ಥಿಗಳು, ಯುವಕರು ಹಾಗೂ ಸಾರ್ವಜನಿಕರು ಭಾಗವಹಿಸಲಿದ್ದು, ಪಾಲ್ಗೊಳ್ಳುವವರಿಗೆ ಪ್ರಮಾಣಪತ್ರ ವಿತರಿಸಲಾಗುವುದು.

ಇದೇ ಸಂದರ್ಭದಲ್ಲಿ ಪ್ಲಾಸ್ಟಿಕ್ ಮುಕ್ತ ಸಮಾಜದತ್ತ ಅಭಿನವಶ್ರೀಗಳ ಹಸಿರು ಹೆಜ್ಜೆ ಎಂಬ ಲೇಖನ ಸಂಗ್ರಹ ಹಾಗೂ ಪರಿಸರ ಜಾಗೃತಿ ಕುರಿತ ಅಭಿನವಶ್ರೀ ಪ್ಲಾಸ್ಟಿಕ್ ಮುಕ್ತ ಸಮಾಜದ ದೀಪಸ್ತಂಭ ಕೃತಿಯನ್ನು ಲೋಕಾರ್ಪಣೆ ಮಾಡಲಾಗುತ್ತದೆ. ಪರಿಸರ ಸಂರಕ್ಷಣೆ, ಆರೋಗ್ಯ ಜಾಗೃತಿ ಮತ್ತು ಸಾಮಾಜಿಕ ಹೊಣೆಗಾರಿಕೆ ಕುರಿತು ಜನರಲ್ಲಿ ಅರಿವು ಮೂಡಿಸುವ ಉದ್ದೇಶದಿಂದ ಈ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ.

ಸೆ.28ರಂದು ಬೆಳಿಗ್ಗೆ 11 ಗಂಟೆಗೆ ಗವಿಮಠದ ಆವರಣದಲ್ಲಿ ಯುವ ಕ್ರಾಂತಿ ಸಂಘಟನೆ ಹಾಗೂ ಶ್ರೀ ಘನಲಿಂಗ ರುದ್ರಮುನಿ ಶಿವಾಚಾರ್ಯ ಟ್ರಸ್ಟ್ ಸಹಯೋಗದಲ್ಲಿ ರಕ್ತದಾನ ಶಿಬಿರ ನಡೆಯಲಿದೆ. ಸಾರ್ವಜನಿಕರು ಸ್ವಯಂಪ್ರೇರಿತರಾಗಿ ರಕ್ತದಾನ ಮಾಡಿ ಜೀವ ಉಳಿಸುವ ಮಾನವೀಯ ಕಾರ್ಯದಲ್ಲಿ ಭಾಗವಹಿಸುವಂತೆ ಕರೆ ನೀಡಲಾಗಿದೆ.

ಜನ್ಮದಿನೋತ್ಸವ ಹಾಗೂ ಪಟ್ಟಾಧಿಕಾರ ವರ್ಧಂತಿ ಮಹೋತ್ಸವದ ಅಂಗವಾಗಿ ಧಾರ್ಮಿಕ, ಆಧ್ಯಾತ್ಮಿಕ, ಶೈಕ್ಷಣಿಕ ಮತ್ತು ಸಮಾಜಮುಖಿ ಕಾರ್ಯಕ್ರಮಗಳು ನಡೆಯಲಿದ್ದು, ಭಕ್ತರು, ಶರಣ ಬಂಧುಗಳು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವಂತೆ ಆಯೋಜಕರು ಮನವಿ ಮಾಡಿದ್ದಾರೆ.



30 ವರ್ಷಗಳಿಂದ ಬಾಕಿ ಉಳಿದ ನಿವೇಶನ ಹಂಚಿಕೆಗೆ ಗ್ರಾಮಸ್ಥರ ಆಗ್ರಹ

ಬೀದರ್,ಸೆ.28-

ಬಸವಕಲ್ಯಾಣ ತಾಲೂಕಿನ ಮುಕುಳಂಬ ಗ್ರಾಮದಲ್ಲಿ 1996ರಲ್ಲಿ ಬಡ ದಲಿತ ಕುಟುಂಬಗಳಿಗೆ ಮಂಜೂರಾದ ನಿವೇಶನಗಳನ್ನು ಕೂಡಲೇ ಗುರುತಿಸಿ ಹಂಚಿಕೆ ಮಾಡಬೇಕು ಎಂದು ಗ್ರಾಮಸ್ಥರು ತಹಸೀಲ್ದಾರ್ ಅವರಿಗೆ ಮನವಿ ಸಲ್ಲಿಸಿದರು. ಮುಕುಳಂಬ ಗ್ರಾಮದಲ್ಲಿ ನಡೆದ ಪ್ರಜಾಸೇವೆ ಆಂದೋಲನ ಕಾರ್ಯಕ್ರಮದಲ್ಲಿ ಮನವಿ ಸಲ್ಲಿಸಿದ ಗ್ರಾಮಸ್ಥರು, ಸರ್ವೆ ನಂ.405ರಲ್ಲಿ ಸುಮಾರು 40 ಫಲಾನುಭವಿಗಳಿಗೆ ಮೇ 8, 1996ರಂದು ಹಕ್ಕುಪತ್ರ ನೀಡಲಾಗಿದ್ದರೂ, ಇದುವರೆಗೆ ನಿವೇಶನಗಳ ಅಳತೆ, ರಸ್ತೆ ನಿರ್ಮಾಣ ಅಥವಾ ಗಡಿ ಗುರುತು ಮಾಡಿಲ್ಲ ಎಂದು ದೂರಿದರು.

ನಿವೇಶನಗಳ ಸ್ಥಳ ಗುರುತಿಸಲಾಗದ ಕಾರಣ ಫಲಾನುಭವಿಗಳು ತೀವ್ರ ತೊಂದರೆ ಅನುಭವಿಸುತ್ತಿದ್ದು, ಸರ್ವೆ ನಂ.405ರ ಸುತ್ತಮುತ್ತಲಿನ ಜಮೀನನ್ನು ಖಾಸಗಿ ಪಟ್ಟೆದಾರರು ಒತ್ತುವರಿ ಮಾಡಿಕೊಂಡಿದ್ದಾರೆ ಎಂದು ಆರೋಪಿಸಿದರು. ಹೀಗಾಗಿ ಸರ್ವೆ ನಂ.405ನ್ನು ಮರುಸರ್ವೆ ನಡೆಸಿ, ಪ್ರತಿಯೊಬ್ಬ ಫಲಾನುಭವಿಯ ನಿವೇಶನವನ್ನು ಗುರುತಿಸಿ ಹಂಚಿಕೆ ಮಾಡಬೇಕು ಎಂದು ಗ್ರಾಮಸ್ಥರು ಆಗ್ರಹಿಸಿದರು.

ಈ ಸಂದರ್ಭದಲ್ಲಿ ದೇವಾನಂದ್ ತೊಳೆ, ಜೈವಂತ್ ಸಿಂಗಾರೆ, ಸಂದೀಪ್ ಮುಕಿಂದೆ, ರೋಹಿತ್ ಸಿಂಗಾರೆ, ಕರನ್ ಸೋನಫುಲೆ, ಅಜಯ್ ಮದಾಳೆ, ರವಿ ಹುಂಚಗೆರೆ ಸೇರಿದಂತೆ ಗ್ರಾಮಸ್ಥರು ಹಾಗೂ ಮಹಿಳೆಯರು ಉಪಸ್ಥಿತರಿದ್ದರು.

ಬಸವಣ್ಣನವರ ತತ್ವ ಯಾರೊಬ್ಬರ ಸ್ವತ್ತಲ್ಲ; ಧಾರ್ಮಿಕ ಸ್ವಾತಂತ್ರ್ಯ ಪ್ರಶ್ನಿಸುವ ಹಕ್ಕು ಯಾರಿಗೂ ಇಲ್ಲ



ಕಲಬುರಗಿ,ಸೆ.28-

ಬಸವಣ್ಣನವರ ತತ್ವ ಹಾಗೂ ಶರಣರ ಪರಂಪರೆಯನ್ನು ಯಾರೊಬ್ಬರೂ ತಮ್ಮದೇ ಸ್ವತ್ತೆಂಬಂತೆ ಪ್ರತಿಪಾದಿಸಬಾರದು. ಸಂವಿಧಾನ ಪ್ರತಿಯೊಬ್ಬರಿಗೂ ಧಾರ್ಮಿಕ ಆಚರಣೆಯ ಸ್ವಾತಂತ್ರ್ಯ ನೀಡಿದ್ದು, ಮತ್ತೊಬ್ಬರ ಧಾರ್ಮಿಕ ಸ್ವಾತಂತ್ರ್ಯವನ್ನು ಪ್ರಶ್ನಿಸುವ ಹಕ್ಕು ಯಾರಿಗೂ ಇಲ್ಲ ಎಂದು ಕನ್ಹೇರಿ ಮಠದ ಅದೃಶ್ಯ ಕಾಡಸಿದ್ದೇಶ್ವರ ಸ್ವಾಮೀಜಿ ಹೇಳಿದ್ದಾರೆ.

ನಗರದ ಎನ್.ವಿ. ಕಾಲೇಜು ಮೈದಾನದಲ್ಲಿ ರವಿವಾರ ಸಂಜೆ ನಡೆದ ಬಸವಾದಿ ಶಿವಶರಣರ ಹಿಂದೂ ಸಮಾವೇಶದ ನೇತೃತ್ವ ವಹಿಸಿ ಅವರು ಮಾತನಾಡಿದರು.

ಬಸವಾದಿ ಶರಣರ ಹೆಸರನ್ನು ತಮ್ಮದೇ ಪೇಟೆಂಟ್ ಎಂಬಂತೆ ಕೆಲವರು ಬಳಸಿಕೊಳ್ಳುತ್ತಿದ್ದಾರೆ. ಬಸವಣ್ಣನವರ ತತ್ವಗಳನ್ನು ಯಾರು ಎಷ್ಟರ ಮಟ್ಟಿಗೆ ಆಚರಣೆಯಲ್ಲಿ ಅಳವಡಿಸಿಕೊಂಡಿದ್ದಾರೆ ಎಂಬುದನ್ನು ಪ್ರಶ್ನಿಸಬೇಕಾಗಿದೆ ಎಂದು ಅವರು ವಾಗ್ದಾಳಿ ನಡೆಸಿದರು.

ಕಾರ್ಯಕ್ರಮದಲ್ಲಿ ಬೀದರ್‌ನ ಶಿವಕುಮಾರ ಸ್ವಾಮಿ, ಸವಿತಾನಂದ ಸ್ವಾಮಿ, ಮುಚಳಂಬದ ಪ್ರಣವಾನಂದ ಸ್ವಾಮಿ ಮಾತನಾಡಿದರು. ಚಂದು ಪಾಟೀಲ್ ಅಧ್ಯಕ್ಷತೆ ವಹಿಸಿದ್ದರು. ಬೀದರ್‌ನ ಶಿವಕುಮಾರ ಸ್ವಾಮಿ, ಕಡಗಂಚಿಯ ವೀರಭದ್ರ ಶಿವಾಚಾರ್ಯ, ಹವಾ ಮಲ್ಲಿನಾಥ ಸ್ವಾಮಿ, ಪ್ರಣವಾನಂದ ಸ್ವಾಮಿ, ಯಳಸಂಗಿ ಸಿದ್ದಾರೂಢ ಮಠದ ಪರಮಾನಂದ ಸ್ವಾಮಿ, ಅಪ್ಪಾರಾವ ದೇವಿಮುತ್ಯ, ಅಕ್ಕಮಹಾದೇವಿ, ಮಾಜಿ ಸಂಸದ ಉಮೇಶ್ ಜಾಧವ್, ಅವಿನಾಶ್ ಜಾಧವ್, ಬಸವರಾಜ ಮತ್ತಿಮಡು, ಬಿ.ಜಿ. ಪಾಟೀಲ್, ರಾಜಕುಮಾರ್ ಪಾಟೀಲ್ ತೇಲ್ಕೂರ್ ಹರ್ಷಾನಂದ ಗುತ್ತೇದಾರ, ಶಶೀಲ್ ನಮೋಶಿ, ದೊಡ್ಡಪ್ಪಗೌಡ ಪಾಟೀಲ್ ನರಿಬೋಳ, ದತ್ತಾತ್ರೇಯ ಪಾಟೀಲ್ ರೇವೂರ ಮತ್ತಿತರರು ಉಪಸ್ಥಿತರಿದ್ದರು.

ನಿಮ್ಮೂರು ಸುದ್ದಿ

ಸಂಪಾದಕೀಯ



ಮುಂದುವರಿದ ಜ್ಞಾನೇಶ್ ಭಂಡತನ!

ವಿಡಂಬನಾತ್ಮಕ ಲೇಖನ, ವ್ಯಂಗ್ಯ ಚಿತ್ರ, ರಾಜಕೀಯ ನಾಯಕರ ಅಣಕ (ಮಿಮಿಕ್ರಿ)-ಇವುಗಳೆಲ್ಲ ಪ್ರಬುದ್ಧ ಪ್ರಜಾತಂತ್ರದ ಲಕ್ಷಣಗಳು. ಅವುಗಳು, ಚುನಾಯಿತ ಸರಕಾರದ ವೈಫಲ್ಯಗಳನ್ನು ರೇಖಾ ಚಿತ್ರ, ದ್ವಂದ್ವಾರ್ಥ ಹೊಂದಿದ ಬರಹ ಅಥವಾ ಮಾತು, ನಾಯಕರ ಸ್ಥಾನಕ್ಕೆ ಗೌರವ ನೀಡದ ಹಾವಭಾವ ಮತ್ತು ವರ್ತನೆಗಳ ಅಣಕದ ಮೂಲಕ ಮತದಾರರ ಗಮನಕ್ಕೆ ತರುವ ಕೆಲಸ ಮಾಡುತ್ತವೆ. ವೈಯಕ್ತಿಕ ಹಗೆತನ ಅಥವಾ ದುರುದ್ದೇಶರಹಿತವಾದ ಈ ಮಾಧ್ಯಮಗಳು ಮನುಜನ ಅಗಾಧವಾದ ಸೃಜನಶೀಲತೆಗೆ ದಾರಿಗಳು ಕೂಡ.

ಸಮಕಾಲೀನ ಭಾರತದ ರಾಜಕೀಯ ಪರಿಸ್ಥಿತಿಯಲ್ಲಿ ಉಳಿದ ಮಾಧ್ಯಮಗಳಂತೆ, ವಿಡಂಬನೆ, ವ್ಯಂಗ್ಯಚಿತ್ರ ಮತ್ತು ಅಣಕಗಳು ಸರಕಾರ ಮತ್ತು ಅದರ ಅನುಯಾಯಿಗಳ ಕೆಂಗಣ್ಣಿಗೆ ಗುರಿಯಾಗುತ್ತಿವೆ; ಹಾಗೂ ಅವುಗಳ ಕರ್ತೃಗಳು ಆಳುವ ಪಕ್ಷದ ಕೃಪಾಪೋಷಿತ ಸಂಘಟನೆಗಳು ಮತ್ತು ಅವುಗಳ ಕಾಲಾಳುಗಳಿಂದ ಹಿಂಸೆಗೂ ಬಲಿಯಾಗುತ್ತಿದ್ದಾರೆ. ಇತ್ತೀಚೆಗಷ್ಟೆ ಇಂದೋರಿನಲ್ಲಿ ಕಾಂಗ್ರೆಸ್ ಪಕ್ಷದ ನೇತಾರ ರಾಹುಲ ಗಾಂಧಿಯವರ ಛಾತ್ರೋಂ ಕಿ ಗೂಂಜ್ ಕಾರ್ಯಕ್ರಮದಲ್ಲಿ ಪ್ರಧಾನಿ ಮೋದಿಯವರನ್ನು ಅಣಕಿಸಿದ ವಿಡಂಬನಕಾರ ಪುಲಕಿತ ಮಣಿ ಅವರಿಗೆ ತೀವ್ರವಾದ ಬೆದರಿಕೆಗಳು ಬಂದು ತಮ್ಮ ಶೋಗಳನ್ನು ರದ್ದುಪಡಿಸಿದ್ದಾರೆ.

ಇದು ಕೇವಲ ಒಂದು ಘಟನೆಯಲ್ಲ. ವಿಡಂಬನಾತ್ಮಕ ಮಾತುಗಳಿಗೆ ಪ್ರಸಿದ್ಧರಾದ ಕುಣಾಲ್ ಕಮ್ರಾ ಅವರು ಅನೇಕ ಪ್ರದರ್ಶನಗಳನ್ನು ಈ ಹಿಂದೆ ರದ್ದುಪಡಿಸಿದ್ದಲ್ಲದೆ, ಕ್ರಿಮಿನಲ್ ಮೊಕದ್ದಮೆಗಳನ್ನು ಎದುರಿಸುತ್ತಿದ್ದಾರೆ. ವ್ಯಂಗ್ಯ ಚಿತ್ರಕಾರರು, ಯೂಟ್ಯೂಬ್, ಫೇಸ್ ಬುಕ್, ಇನ್‌ಸ್ಟಾಗ್ರಾಮ್, ಟ್ವಿಟರ್ ಮುಂತಾದ ಸಾಮಾಜಿಕ ಮಾಧ್ಯಮಗಳ ಮೂಲಕ ತಮ್ಮ ಅಭಿಪ್ರಾಯಗಳನ್ನು ಪ್ರಸ್ತುತ ಪಡಿಸುವ ಅನೇಕ ಸಾಮಾಜಿಕ ಕಾರ್ಯಕರ್ತರು ಇದೇ ತರದ ಮಾನಸಿಕ ಹಾಗೂ ದೈಹಿಕ ಬೆದರಿಕೆಗಳನ್ನು ಎದುರಿಸಬೇಕಾಗಿ ಬಂದಿದೆ. ಮಹಿಳೆಯರಾದರೆ ಅವರಿಗೆ ಅವರ ಚಾರಿತ್ರ್ಯಹರಣ ಮತ್ತು ಮಾನಭಂಗದ ಬೆದರಿಕೆಗಳನ್ನು ನೀಡಲಾಗುತ್ತಿದೆ. ಉದಾಹರಣೆಗೆ ಭೋಜಪುರಿ ಜಾನಪದ ಹಾಡುಗಾರ್ತಿ ನೇಹಾ ಸಿಂಗ್ ಠಾಕೂರರು ತಮ್ಮ ರಾಜಕೀಯ ಮಿಶ್ರಿತ ಹಾಡುಗಳ ಮೂಲಕ ಸರಕಾರಗಳ ವೈಫಲ್ಯಗಳನ್ನು ಬಿತ್ತರಿಸಿದ್ದಕ್ಕೆ ಕ್ರಿಮಿನಲ್ ಮೊಕದ್ದಮೆಗಳನ್ನು ಮಾತ್ರವಲ್ಲ ಅತ್ಯಾಚಾರದ ಬೆದರಿಕೆಗಳನ್ನು ಎದುರಿಸುತ್ತಿದ್ದಾರೆ.

ಈ ಬೆಳವಣಿಗೆಯ ಹಿಂದೆ ಸರಕಾರದ ವೈಫಲ್ಯಗಳ ಕುರಿತು ಬರುವ ಟೀಕೆಯ ಬಗ್ಗೆ ತೀವ್ರವಾದ ಅಸಹಿಷ್ಣುತೆ ಅಡಕವಾಗಿದೆ. ಇದಕ್ಕೆ ರಾಜಕೀಯ ನಾಯಕರ ಮೇಲಿನ ಅಂಧಭಕ್ತಿ, ನಾಯಕರು ತಮಗೇ ಎಲ್ಲ ತಿಳಿದಿದೆ ಮತ್ತು ತಾವು ಮಾಡಿದ್ದೇ ಸರಿ, ಟೀಕೆಗಳು ದುರುದ್ದೇಶದಿಂದ ಕೂಡಿವೆ ಎಂಬ ಪೂರ್ವಾಗ್ರಹಗಳು ಪ್ರಮುಖ ಕಾರಣಗಳೆಂದರೆ ತಪ್ಪಲ್ಲ. ಟೀಕೆಗಳು ಬಂದಾಗ ಅವುಗಳಿಗೆ ನ್ಯಾಯಯುತವಾಗಿ ತರ್ಕಬದ್ಧವಾಗಿ ಉತ್ತರಿಸಬೇಕಾದ್ದು ಪ್ರಬುದ್ಧ ನಾಯಕರ ಹೊಣೆಗಾರಿಕೆ. ನಿಖರ ಮಾಹಿತಿ ಮತ್ತು ತಾರ್ಕಿಕ ವಿಶ್ಲೇಷಣೆಗೆ ಅವಕಾಶವಿಲ್ಲದ ಈಗಿನ ಕಾಲಘಟ್ಟದಲ್ಲಿ ತಮ್ಮ ವಿಮರ್ಶಕರನ್ನು ದೈಹಿಕ ಮತ್ತು ಮಾನಸಿಕ ಹಿಂಸೆಗೆ ಗುರಿಪಡಿಸುವುದು ಈ ಜವಾಬ್ದಾರಿಯಿಂದ ತಪ್ಪಿಸಿಕೊಳ್ಳುವ ಮುಖ್ಯ ಮಾರ್ಗ.

ವ್ಯಂಗ್ಯ, ಹಾಸ್ಯ, ವಿಡಂಬನೆಗಳ ಉದ್ದೇಶ ಆಡಳಿತವರ್ಗದವರನ್ನು ಎಚ್ಚರಿಸುವುದು. ಅದು ಅಭಿವ್ಯಕ್ತಿ ಸ್ವಾತಂತ್ರ್ಯದ ಲಕ್ಷಣ. ಈ ಪ್ರವೃತ್ತಿ ಭಾರತದಲ್ಲಿ ಅನಾದಿಕಾಲದಲ್ಲಿ ವಾಡಿಕೆಯಲ್ಲಿತ್ತು ಎಂಬುದಕ್ಕೆ ಅಕ್ಬರ್-ಬೀರಬಲ್ ಜೋಡಿ, ಶ್ರೀಕೃಷ್ಣದೇವರಾಯ-ತೆನಾಲಿ ರಾಮಕೃಷ್ಣರ ಸಂವಾದಗಳು ನಿದರ್ಶನಗಳು. ನಾವು ಬ್ರಿಟಿಷರ ವಸಾಹತು ರಾಜ್ಯವಾಗಿದ್ದಾಗಲೂ ಪ್ರಾದೇಶಿಕ ವೃತ್ತಪತ್ರಿಕೆಗಳಲ್ಲಿ ರಾಜಶಾಹಿಯನ್ನು ಟೀಕಿಸುವ ವ್ಯಂಗ್ಯಚಿತ್ರಗಳು ಪ್ರಕಟವಾಗುತ್ತಿದ್ದವು. ಆಂಗ್ಲ ಸರಕಾರವು ತೀವ್ರವಾದ ಕಾನೂನುಕ್ರಮಗಳನ್ನು ಅವರ ಮೇಲೆ ಕೈಗೊಳ್ಳುತ್ತಿರಲಿಲ್ಲ.

ಸ್ವಾತಂತ್ರ್ಯೋತ್ತರ ದಿನಗಳಲ್ಲಿ ಪ್ರಸಿದ್ಧ ವ್ಯಂಗ್ಯಚಿತ್ರ ಕಲಾವಿದ ಶಂಕರ್ಸ್ ವೀಕ್ಲಿಯ ಸ್ಥಾಪಕ ಶಂಕರ ಪಿಳ್ಳೆಯವರು ಪ್ರಧಾನಿ ನೆಹರೂ ಅವರ ಆಪ್ತಮಿತ್ರರಾಗಿದ್ದರೂ ತಮ್ಮ ತೀಕ್ಷ್ಣವಾದ ರೇಖಾಚಿತ್ರಗಳ ಮೂಲಕ ಪ್ರಧಾನಿಯನ್ನು ಹಂಗಿಸುತ್ತಿದ್ದರು. ಆರ್.ಕೆ. ಲಕ್ಷ್ಮಣರೂ ತಮ್ಮ ಕಾಮನ್ ಮ್ಯಾನ್ ಅಥವಾ ಶ್ರೀಸಾಮಾನ್ಯನ ಮೂಲಕ ಆಡಳಿತ ವರ್ಗದವರ ವೈಫಲ್ಯಗಳನ್ನು ಜನರ ಮುಂದಿಡುತ್ತಿದ್ದರು. ಮುಂದೆ ಇಂದಿರಾ ಗಾಂಧಿಯವರು ಹೇರಿದ ಎಮರ್ಜೆನ್ಸಿಯ ಕಾಲದಲ್ಲಿಯೂ ಇನ್ನೊಬ್ಬ ಖ್ಯಾತ ಕಲಾವಿದ ಅಬು ಅಬ್ರಹಾಂ ಸ್ನಾನಗೃಹದಲ್ಲಿ ರಾಷ್ಟ್ರಪತಿ ಫಕ್ರುದ್ದೀನ್ ಅಲಿ ಅಹ್ಮದ್ ಅವರು ಸುಗ್ರೀವಾಜ್ಞೆಗೆ ಹಸ್ತಾಕ್ಷರ ಮಾಡುವ ತಮ್ಮ ವ್ಯಂಗ್ಯಚಿತ್ರದ ಮೂಲಕ ಸಾಂವಿಧಾನಿಕ ಹುದ್ದೆಗಳಲ್ಲಿರುವ ಇಬ್ಬರ ಕಾರ್ಯವೈಖರಿಯನ್ನು ಟೀಕಿಸಿದ್ದರು. ಅಬ್ರಹಾಂ ಅವರನ್ನು ಇಂದಿರಾ ಆಗಲೀ ಅವರ ಕಾಲಾಳುಗಳಾಗಲೀ ಬೆದರಿಸಿರಲಿಲ್ಲ; ಅವರ ಮೇಲೆ ಯಾವುದೇ ಮೊಕದ್ದಮೆಯನ್ನು ಹೂಡಲಿಲ್ಲ.

ಆದರೆ 2012ರಲ್ಲಿ ಮಹಾರಾಷ್ಟ್ರದಲ್ಲಿ ಕಾಂಗ್ರೆಸ್-ಎನ್‌ಸಿಪಿಯ ಸಮ್ಮಿಶ್ರ ಸರಕಾರವು ಭ್ರಷ್ಟಾಚಾರದ ಬಗ್ಗೆ ವ್ಯಂಗ್ಯಚಿತ್ರ ಬರೆದ ಕಲಾವಿದ ಅಸೀಮ ತ್ರಿವೇದಿಯವರನ್ನು ಬಂಧಿಸಿ ಮುಂದೆ ಬರಬಹುದಾದ ತೀವ್ರವಾದ ಅಸಹಿಷ್ಣುತೆಗೆ ನಾಂದಿ ಹಾಡಿತ್ತು ಎಂದರೆ ತಪ್ಪಾಗಲಾರದು. 2014ರ ನಂತರ ಈಗ ವ್ಯವಸ್ಥಿತ ರೂಪದಲ್ಲಿ ಅಧಿಕಾರದ ದುರುಪಯೋಗದ ಮೂಲಕ ಮತ್ತು ಆಳುವ ಪಕ್ಷದ ಸಹಸಂಸ್ಥೆಗಳ ಸಹಾಯದಿಂದ ಅಭಿವ್ಯಕ್ತಿ ಸ್ವಾತಂತ್ರ್ಯದ ಹರಣ ನಿರಂತರ ನಡೆಯುತ್ತಿದೆ. ವಿಪರ್ಯಾಸವೆಂದರೆ ಹಕ್ಕುಗಳನ್ನು ರಕ್ಷಿಸಬೇಕಾದ ನ್ಯಾಯಾಂಗವು ಸರಕಾರದ ಕೈಗೊಂಬೆಯಂತೆ ವರ್ತಿಸುತ್ತಿದೆ.

ಯಾವ ತರದ ವಿಡಂಬನೆ, ಅಣಕ ಅಥವಾ ವ್ಯಂಗ್ಯಚಿತ್ರ ಆಕ್ಷೇಪಕಾರಿ ಎಂಬುದನ್ನು ಸಾರ್ವಜನಿಕರು ನಿರ್ಧರಿಸಬೇಕು. ಅದರಲ್ಲಿ ದುರುದ್ದೇಶ ಮತ್ತು ವ್ಯಕ್ತಿಗತ ಹಗೆತನವಿರಬಾರದು. ಸರಕಾರದ ನಿರ್ಧಾರಗಳನ್ನು, ಅವುಗಳಿಂದ ಜನರ ಮೇಲೆ ಆಗುವ ದುಷ್ಪರಿಣಾಮಗಳನ್ನು, ಸಾಂವಿಧಾನಿಕ ಹುದ್ದೆಯನ್ನು ಅಲಂಕರಿಸಿದ ಚುನಾಯಿತ ಗಣ್ಯರ ವರ್ತನೆ, ಹಾವಭಾವ ಮತ್ತು ವೇಷಭೂಷಣಗಳ ಬಗ್ಗೆ ಕಲಾವಿದರು ತಮ್ಮ ಅಭಿಪ್ರಾಯವನ್ನು ಬರಹಕ್ಕಿಳಿಸುವುದು ಅಥವಾ ಚಿತ್ರಕಾರ ರೇಖೆಗಳ ಮೂಲಕ ಬಿಂಬಿಸುವುದು ಅಭಿವ್ಯಕ್ತಿ ಸ್ವಾತಂತ್ರ್ಯದ ದುರುಪಯೋಗವಾಗುವುದಿಲ್ಲ.


ಅಭಿವ್ಯಕ್ತಿ ಮತ್ತು ವ್ಯಕ್ತಿ ಸ್ವಾತಂತ್ರ್ಯಗಳು ಆರೋಗ್ಯವಂತ ಪ್ರಬುದ್ಧ ಪ್ರಜಾತಂತ್ರದ ಲಕ್ಷಣ. ಪ್ರಜಾತಂತ್ರಕ್ಕೆ ಬದ್ಧವಾಗಿರುವ ದೇಶಗಳ ಸಂಸತ್ತಿನ ಒಳಗೆ ಚುನಾಯಿತ ಸದಸ್ಯರು ಸರಕಾರದ ನಡೆಯನ್ನು ಟೀಕಿಸುವ ಹಕ್ಕನ್ನು ಹೊಂದಿದ್ದಾರೆ. ಸಂಸತ್ತಿನ ಹೊರಗಡೆ, ಸರಕಾರವನ್ನು ವಿವಿಧ ದಾರಿಗಳಲ್ಲಿ ವಿಮರ್ಶೆಗೆ ಗುರಿಮಾಡುವ ಹಕ್ಕನ್ನು ಜನರು ಅಂದರೆ ಮತದಾರರು ಹೊಂದಿದ್ದಾರೆ; ಆ ಮೂಲಕ ಅವರು ಸರಕಾರದ ಉತ್ತರದಾಯಿತ್ವವನ್ನು ಕೇಳಬಹುದು. ಈ ಹಕ್ಕು ಇದ್ದಾಗ ಮಾತ್ರ ಪ್ರಜಾತಂತ್ರ ಭದ್ರವಾಗುತ್ತದೆ.

ಶತಮಾನಗಳ ದಾಸ್ಯದ ಬಿಡುಗಡೆಗೆ ಹೋರಾಡಿ 1947ರಲ್ಲಿ ಅಭಿವ್ಯಕ್ತಿ ಸ್ವಾತಂತ್ರ್ಯವನ್ನು ಪಡೆದು 1950ರ ಸಂವಿಧಾನದ ಮೂಲಕ ಅದನ್ನು ಮೂಲಭೂತ ಹಕ್ಕು ಎಂದು ಸಾರ್ವಜನಿಕವಾಗಿ ದೇಶವು ಸ್ವೀಕರಿಸಿ 75 ವರ್ಷಗಳ ಸುದೀರ್ಘ ಅನುಭವದ ಬಳಿಕವೂ ಮತ್ತೆ ಅದೇ ಸ್ವಾತಂತ್ರ್ಯದ ಅಸ್ತಿತ್ವಕ್ಕೆ ವ್ಯವಸ್ಥಿತ ಹೊಡೆತ ಬೀಳುತ್ತಿರುವುದು ಇಂದಿನ ರಾಜಕೀಯ ಸನ್ನಿವೇಶದ ಆಘಾತಕಾರಿ ವಿಪರ್ಯಾಸ.

ಪತ್ರಿಕೆ ಓದುವ ಹವ್ಯಾಸ ಬೆಳಸಿಕೊಳ್ಳಿ

ವಿರಾಟ್ ಕೊಹ್ಲಿ: ದಂತಕಥೆಯ ಪಯಣದ ಮತ್ತೊಂದು ಸುವರ್ಣ ಅಧ್ಯಾಯ

ಕ್ರಿಕೆಟ್ ಕೇವಲ ಒಂದು ಆಟವಲ್ಲ, ಅದೊಂದು ಜೀವಂತ ಭಾವನೆ ಎಂದು ನಂಬಿರುವ ಕೋಟ್ಯಂತರ ಭಾರತೀಯರಿಗೆ ವಿರಾಟ್ ಕೊಹ್ಲಿ ಕೇವಲ ಒಬ್ಬ ಆಟಗಾರನಲ್ಲ; ಬದಲಾಗಿ ಅದ್ಭುತ ಕಾವ್ಯದಂತಿರುವ ಒಂದು ಸುವರ್ಣ ಶಕೆ. ನವೆಂಬರ್ 5, 1988ರಂದು ನವದೆಹಲಿಯಲ್ಲಿ ಜನಿಸಿದ, ವೆಸ್ಟ್ ದೆಹಲಿ ಕ್ರಿಕೆಟ್ ಅಕಾಡೆಮಿಯಲ್ಲಿ ತಮ್ಮ ಪಯಣ ಆರಂಭಿಸಿದ ಆ ಅಪಾರ ಹುಮ್ಮಸ್ಸಿನ ಯುವಕ, ಈಗ ಪ್ರಬುದ್ಧತೆಯ ಅತ್ಯುನ್ನತ ಶಿಖರವೇರಿದ್ದಾರೆ. ಅವರ ಮುಖದಲ್ಲಿ ಈಗ ಮಾಗಿದ, ಅರ್ಥಪೂರ್ಣ ನಗುವೊಂದು ಶಾಶ್ವತವಾಗಿ ನೆಲೆಸಿದೆ. ಆಟದಲ್ಲಿನ ಆ ಹಳೆಯ ಆವೇಗವು ಈಗ ಸಂಪೂರ್ಣವಾಗಿ ಶಾಂತತೆಯಾಗಿ, ಹರಿಯುವ ನದಿಯಂತೆ ಅತ್ಯಂತ ಮಧುರವಾಗಿ ರೂಪುಗೊಂಡಿದೆ.



ಒತ್ತಡವಿಲ್ಲದ ಮುಕ್ತ ಆಟದ ನಳನಳಿಕೆ

ಹಿಂದೆ ಅವರ ಪ್ರತಿಯೊಂದು ನಡೆಯಲ್ಲೂ, ಕ್ರೀಸ್‌ನಲ್ಲಿ ನಿಂತು ಬಾರಿಸುವ ಪ್ರತಿಯೊಂದು ಶಾಟ್‌ನಲ್ಲೂ ಇಡೀ ದೇಶದ ನಿರೀಕ್ಷೆಗಳ ಭಾರ ಎದ್ದು ಕಾಣುತ್ತಿತ್ತು. ಆದರೆ, ಈಗ ಆ ಭಾರವೆಲ್ಲ ಸಂಪೂರ್ಣವಾಗಿ ಇಳಿದುಹೋದಂತೆ ಭಾಸವಾಗುತ್ತಿದೆ. ಕೇವಲ ಏಕದಿನ () ಮಾದರಿಗೆ ಮಾತ್ರ ಸೀಮಿತವಾದ ಬಳಿಕ, ಕೊಹ್ಲಿ ಯಾವುದೇ ರೀತಿಯ ಅನಗತ್ಯ ಒತ್ತಡವಿಲ್ಲದೆ, ಗಗನದಲ್ಲಿ ಹಾರುವ ಹಕ್ಕಿಯಂತೆ ಅತ್ಯಂತ ಮುಕ್ತವಾಗಿದ್ದಾರೆ. ಮೈದಾನದಲ್ಲಿ ಈಗ ಅವರ ಆಟವನ್ನು ಕಣ್ತುಂಬಿಕೊಳ್ಳುತ್ತಿದ್ದರೆ, ಅವರು ಕೇವಲ ವೈಯಕ್ತಿಕ ದಾಖಲೆಗಾಗಿ ಆಡುತ್ತಿದ್ದಾರೆ ಎನಿಸುವುದಿಲ್ಲ; ಬದಲಾಗಿ, ಕ್ರೀಡೆಯ ಮೇಲಿನ ಅಪ್ಪಟ ಪ್ರೀತಿಯಿಂದ, ಪ್ರತಿ ಎಸೆತವನ್ನೂ ಆನಂದಿಸುತ್ತಾ ಆಡುತ್ತಿದ್ದಾರೆ ಎಂಬುದು ಸ್ಪಷ್ಟವಾಗಿ ಗೋಚರಿಸುತ್ತದೆ.

ಯುವಪಡೆಗೆ ಬೆನ್ನೆಲುಬಾದ ಹಿರಿಯ ಮಾರ್ಗದರ್ಶಕ

ಈ ಬದಲಾದ, ತಣ್ಣಗಾದ ಕೊಹ್ಲಿಗೆ ಈಗ ಯುವಪಡೆಯೇ ಹೆಗಲಿಗೆ ಹೆಗಲು ಕೊಟ್ಟು ಜೊತೆಯಾಗಿದೆ. ವಿಶೇಷವಾಗಿ, ಶುಭಮನ್ ಗಿಲ್ ಅವರಂತಹ ಭರವಸೆಯ ಯುವ ಆಟಗಾರರೊಂದಿಗೆ ಕ್ರೀಸ್ ಹಂಚಿಕೊಳ್ಳುವಾಗ, ಕೊಹ್ಲಿಯೊಳಗಿನ ಒಬ್ಬ ನೈಜ ಹಿರಿಯ ಮಾರ್ಗದರ್ಶಕ ಎಚ್ಚರಗೊಳ್ಳುತ್ತಾನೆ. ಹಿಂದಿನಂತೆ ಪಂದ್ಯವನ್ನು ಗೆಲ್ಲಿಸುವ ಎಲ್ಲ ಜವಾಬ್ದಾರಿಯನ್ನು ತಾವೇ ಹೊರದೆ, ಯುವ ಆಟಗಾರರಿಗೆ ತಮ್ಮ ನೈಜ ಆಟವಾಡಲು ಸಂಪೂರ್ಣ ಸ್ವಾತಂತ್ರ್ಯ ನೀಡಿ, ತಾವು ಅವರಿಗೆ ದೊಡ್ಡ ಬೆಂಬಲವಾಗಿ ನಿಲ್ಲುವ ಅವರ ಹೊಸ ಶೈಲಿ ನಿಜಕ್ಕೂ ಮನಮೋಹಕವಾಗಿದೆ.

ದಾಖಲೆಗಳ ಶಿಖರವೇರಿದ ಅಪ್ರತಿಮ ರನ್ ಯಂತ್ರ

ಅವರ ಆಟದ ಶೈಲಿ ಎಷ್ಟೇ ಬದಲಾಗಿರಬಹುದು, ಆದರೆ ಅವರೊಳಗಿನ ರನ್ ಗಳಿಸುವ ದಾಹ ಇನ್ನೂ ಇಂಗಿಲ್ಲ ಎಂಬುದನ್ನು ಅವರ ಅಸಾಧಾರಣ ಅಂಕಿ-ಅಂಶಗಳು ಸಾರಿ ಹೇಳುತ್ತಿವೆ. ಏಕದಿನ ಕ್ರಿಕೆಟ್‌ನಲ್ಲಿ 315 ಪಂದ್ಯಗಳನ್ನು ಆಡಿರುವ ಅವರು, 59.13ರ ಸರಾಸರಿಯಲ್ಲಿ 55 ಶತಕಗಳ ಸಹಿತ 15,080 ರನ್‌ಗಳ ಬೃಹತ್ ಮೈಲಿಗಲ್ಲನ್ನು ತಲುಪಿದ್ದಾರೆ. ಟೆಸ್ಟ್ ಕ್ರಿಕೆಟ್‌ನಲ್ಲಿ 123 ಪಂದ್ಯಗಳಿಂದ 30 ಶತಕಗಳ ಸಹಿತ 9,230 ರನ್ ಮತ್ತು 20 ಅಂತಾರಾಷ್ಟ್ರೀಯ ಪಂದ್ಯಗಳಲ್ಲಿ 125 ಪಂದ್ಯಗಳಿಂದ 4,188 ರನ್ ಗಳಿಸಿದ ದಾಖಲೆ ಅವರದ್ದಾಗಿದೆ. ಒಂದು ದಶಕದಲ್ಲಿ 20,000 ಅಂತಾರಾಷ್ಟ್ರೀಯ ರನ್ ಗಳಿಸಿದ ಮೊದಲ ಆಟಗಾರ ಎಂಬ ಹೆಗ್ಗಳಿಕೆಯೂ ಅವರಿಗಿದೆ.

ಮೈಮರೆಸುವ ಐತಿಹಾಸಿಕ ವಿಜಯದ ರಭಸ

ತಿರುವನಂತಪುರಂನಲ್ಲಿ ವೆಸ್ಟ್ ಇಂಡೀಸ್ ವಿರುದ್ಧ ನಡೆದ ಮೊದಲ ಏಕದಿನ ಪಂದ್ಯದಲ್ಲಿ ವಿರಾಟ್ ಕೊಹ್ಲಿ ಮತ್ತೊಮ್ಮೆ ತಮ್ಮ ಅಸಾಧಾರಣ ಸಾಮರ್ಥ್ಯ ಮೆರೆದಿದ್ದಾರೆ. ಕೇವಲ 88 ಎಸೆತಗಳಲ್ಲಿ ಅಜೇಯ 139 ರನ್ ಸಿಡಿಸುವ ಮೂಲಕ ಅವರು ಅತಿ ವೇಗವಾಗಿ 15,000 ಏಕದಿನ ರನ್‌ಗಳನ್ನು ಪೂರೈಸಿದ ಬ್ಯಾಟರ್ ಎಂಬ ಕೀರ್ತಿಗೆ ಭಾಜನರಾಗಿದ್ದಾರೆ. ಇದಲ್ಲದೆ, ತವರು ನೆಲದಲ್ಲಿ ಅತಿ ಹೆಚ್ಚು ಏಕದಿನ ರನ್ ಗಳಿಸಿದ ಸಚಿನ್ ತೆಂಡೂಲ್ಕರ್ ಅವರ ಹೆಗ್ಗಳಿಕೆಯನ್ನೂ ಅವರು ತಮ್ಮದಾಗಿಸಿಕೊಂಡಿದ್ದಾರೆ.

ಸೋಲಿಲ್ಲದ ಸರದಾರನಿಗೆ ಐಸಿಸಿ ಕಿರೀಟಗಳು

ವಯಸ್ಸು ಕೇವಲ ಒಂದು ಸಂಖ್ಯೆ ಎಂಬುದನ್ನು ವಿರಾಟ್ ಮೈದಾನದಲ್ಲಿ ನಿರಂತರವಾಗಿ ಸಾಬೀತುಪಡಿಸುತ್ತಲೇ ಇದ್ದಾರೆ. ಅವರ ಅಸಾಧಾರಣ ಸಾಧನೆಗಳಿಗಾಗಿ 10 ಐಸಿಸಿ () ಪ್ರಶಸ್ತಿಗಳು ಒಲಿದು ಬಂದಿದ್ದು, ಅಂತಾರಾಷ್ಟ್ರೀಯ ಕ್ರಿಕೆಟ್ ಇತಿಹಾಸದಲ್ಲಿ ಅತಿಹೆಚ್ಚು ಐಸಿಸಿ ಪ್ರಶಸ್ತಿ ಪಡೆದ ಆಟಗಾರ ಎಂಬ ಅನನ್ಯ ದಾಖಲೆ ಬರೆದಿದ್ದಾರೆ. 2018ರಲ್ಲಿ ಐಸಿಸಿಯ ವರ್ಷದ ಆಟಗಾರ, ಏಕದಿನ ಆಟಗಾರ ಮತ್ತು ಟೆಸ್ಟ್ ಆಟಗಾರ ಎಂಬ ಮೂರು ಮುಖ್ಯ ಪ್ರಶಸ್ತಿಗಳನ್ನು ಒಟ್ಟಿಗೆ ಪಡೆದ ಮೊದಲ ಆಟಗಾರ ಎನಿಸಿದರು. ಜೊತೆಗೆ, 2013ರಲ್ಲಿ ಅರ್ಜುನ ಪ್ರಶಸ್ತಿ, 2017ರಲ್ಲಿ ಪದ್ಮಶ್ರೀ, ಮತ್ತು 2018ರಲ್ಲಿ ಖೇಲ್ ರತ್ನ ಪ್ರಶಸ್ತಿಗಳಿಂದಲೂ ಅವರು ಪುರಸ್ಕೃತರಾಗಿದ್ದಾರೆ.

ಅಪರೂಪದ ವೃತ್ತಿಜೀವನದ ನಿವೃತ್ತಿಯ ಪಯಣ

ಇಷ್ಟೆಲ್ಲದರ ನಡುವೆ, ಜಗತ್ತಿನಾದ್ಯಂತ ಇರುವ ಅವರ ಕೋಟ್ಯಂತರ ಅಭಿಮಾನಿಗಳ ಮನಸ್ಸಿನಲ್ಲಿ ಒಂದು ಸಣ್ಣ ಕಳವಳವೂ ಮೌನವಾಗಿ ಮನೆಮಾಡಿದೆ. ಕೊಹ್ಲಿಯ ಸುದೀರ್ಘ ವೃತ್ತಿಜೀವನ ತನ್ನ ಅಂತಿಮ ಹಂತಗಳನ್ನು ತಲುಪುತ್ತಿದೆ ಎಂಬ ಕಠೋರ ಸತ್ಯ ಎಲ್ಲರಿಗೂ ಅರಿವಾಗುತ್ತಿದೆ. 2024ರ 20 ವಿಶ್ವಕಪ್ ಗೆಲುವಿನ ಐತಿಹಾಸಿಕ ಸಂಭ್ರಮದ ನಡುವೆಯೇ ಅವರು 20 ಅಂತಾರಾಷ್ಟ್ರೀಯ ಕ್ರಿಕೆಟ್‌ಗೆ ಭಾವುಕ ವಿದಾಯ ಹೇಳಿದರು. ಜೂನ್ 29, 2024ರಂದು ಅವರು ತಮ್ಮ ಕೊನೆಯ 20 ಪಂದ್ಯವನ್ನು ಆಡಿದರು. ಆ ಮೂಲಕ ಚುಟುಕು ಮಾದರಿಯಲ್ಲಿ ಅವರ ಆಟವನ್ನು ನೋಡುವ ಅವಕಾಶ ಅಭಿಮಾನಿಗಳಿಗೆ ಶಾಶ್ವತವಾಗಿ ದೂರವಾಯಿತು.

ವಿಶ್ವಕಪ್ ಕನಸಿನೊಂದಿಗೆ ಅಂತಿಮ ಮುಕ್ತಾಯದ ಹಾದಿ

20 ಮಾದರಿಗೆ ಈಗಾಗಲೇ ವಿದಾಯ ಹೇಳಿರುವ ಕೊಹ್ಲಿಯ ಕಣ್ಣಿನಲ್ಲಿ ಈಗ ಮುಂಬರುವ 2027ರ ಏಕದಿನ ವಿಶ್ವಕಪ್ ಗೆದ್ದುಕೊಡುವ ದೊಡ್ಡ ಕನಸು ಪ್ರಖರವಾಗಿ ಹೊಳೆಯುತ್ತಿದೆ. ಇದು ತಮ್ಮ ಪಾಲಿನ ಅಂತಿಮ ಹಾಗೂ ಕೊನೆಯ ವಿಶ್ವಕಪ್ ಎಂದು ಅವರು ಈಗಾಗಲೇ ಸ್ಪಷ್ಟಪಡಿಸಿದ್ದು, ಆ ಟೂರ್ನಿಯ ನಂತರ ಅಂತಾರಾಷ್ಟ್ರೀಯ ಕ್ರಿಕೆಟ್‌ನಿಂದ ಸಂಪೂರ್ಣವಾಗಿ ನಿವೃತ್ತಿಯಾಗಲಿದ್ದಾರೆ.

ವಿಶ್ವಕಪ್ ಫೈನಲ್‌ನಲ್ಲಿ ಎಂದೆಂದೂ ಮರೆಯಲಾಗದಂತಹ ಮ್ಯಾಚ್ ವಿನ್ನಿಂಗ್ ಇನಿಂಗ್ಸ್ ಆಡಿ, ದೇಶಕ್ಕೆ ವಿಶ್ವಕಪ್ ಗೆದ್ದುಕೊಟ್ಟು ಹೆಮ್ಮೆಯ ಚಾಂಪಿಯನ್ ಆಗಿ ನಿರ್ಗಮಿಸಬೇಕು ಎಂಬುದು ಅವರ ಅಂತಿಮ ಆಸೆಯಾಗಿದೆ. ವಿರಾಟ್ ಮತ್ತು ರೋಹಿತ್ ಶರ್ಮಾ ಅವರಂತಹ ದಿಗ್ಗಜರು ನಿರ್ಗಮಿಸಿದಾಗ ಸೃಷ್ಟಿಯಾಗುವ ದೊಡ್ಡ ಶೂನ್ಯವನ್ನು ತುಂಬುವ ಸವಾಲು ಆಯ್ಕೆಗಾರರ ಮುಂದಿದೆ. ಸದ್ಯಕ್ಕಂತೂ ಸಮಸ್ತ ಕ್ರಿಕೆಟ್ ಪ್ರೇಮಿಗಳ ಕಣ್ಣುಗಳು ಕೊಹ್ಲಿಯ ಬ್ಯಾಟ್‌ನಿಂದ ಮೂಡಿಬರುತ್ತಿರುವ ಈ ಕೊನೆಯ ಮಧುರ ನಾದದ ಮೇಲೆ ನೆಟ್ಟಿದ್ದು, ಈ ಮಹಾನ್ ವಿರಾಟ್ ಪರ್ವದ ಪ್ರತಿಯೊಂದು ಕ್ಷಣವನ್ನೂ ಕಣ್ತುಂಬಿಕೊಳ್ಳುವ ಸಂಭ್ರಮದಲ್ಲಿ ಅಭಿಮಾನಿಗಳಿದ್ದಾರೆ.

'ವಿಬಿ-ಜಿ ರಾಮ್ ಜಿ' ಅನುಷ್ಠಾನದಲ್ಲಿ ಎಡವಟ್ಟು! ಕೂಲಿ ಸಿಗದೆ ಕಂಗಾಲಾದ ಬಡ ಕಾರ್ಮಿಕರು

ಗ್ರಾಮೀಣ ಬಡ ಕುಟುಂಬಗಳಿಗೆ ಆಸರೆಯಾಗಬೇಕಿದ್ದ ವಿಬಿ-ಜಿ ರಾಮ್ ಜಿ (-) ಯೋಜನೆ, ಅನುಷ್ಠಾನದ ಎಡವಟ್ಟುಗಳಿಂದಾಗಿ ಗೊಂದಲದ ಗೂಡಾಗಿದೆ. ಕೆಲಸ ಮಾಡಿದರೂ ತಿಂಗಳುಗಟ್ಟಲೆ ಕೂಲಿ ಸಿಗದೆ ಬಡ ಕಾರ್ಮಿಕರು ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದು, ಯೋಜನೆ ಜಾರಿಯಲ್ಲೇ ಅರಾಜಕತೆ ಸೃಷ್ಟಿಯಾಗಿದೆ.



ಬರ, ಮಳೆ ಕೊರತೆ ಹಾಗೂ ಕೃಷಿ ಚಟುವಟಿಕೆ ಕುಂಠಿತಗೊಂಡಿರುವ ಸಂದರ್ಭದಲ್ಲಿ ಗ್ರಾಮೀಣ ಭಾಗದ ಕೂಲಿ ಕಾರ್ಮಿಕರಿಗೆ ಉದ್ಯೋಗದ ಭರವಸೆಯಾಗಬೇಕಿದ್ದ ಯೋಜನೆಯಡಿ ಕೆಲಸ ಮಾಡಿದರೂ ಸಮಯಕ್ಕೆ ಕೂಲಿ ಸಿಗದಿರುವುದು ಕಾರ್ಮಿಕರ ಆಕ್ರೋಶಕ್ಕೆ ಕಾರಣವಾಗಿದೆ.

ಬಾಗಲಕೋಟೆ ಜಿಲ್ಲೆಯ 175 ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಕ್ರಿಯಾಯೋಜನೆ ಸಿದ್ಧಪಡಿಸಿ, ಗ್ರಾಮಗಳಲ್ಲಿ ಪ್ರಚಾರ ನಡೆಸಿ ಕಾರ್ಮಿಕರನ್ನು ಕೆಲಸಕ್ಕೆ ನಿಯೋಜಿಸಲಾಗಿದೆ. ಆದರೆ ಕಾಮಗಾರಿ ಆರಂಭಿಸಿದ ಬಳಿಕ ಅದರ ಮುಂದಿನ ಹಂತದ ಪ್ರಕ್ರಿಯೆಗಳು ತಾಂತ್ರಿಕ ಕಾರಣಗಳಿಂದ ನಿಧಾನಗೊಳ್ಳುತ್ತಿರುವ ಆರೋಪ ಕೇಳಿಬಂದಿದೆ.

ಜೂನ್‌ನಿಂದ ವಿವಿಧ ಗ್ರಾಮಗಳಲ್ಲಿ ಕಾಮಗಾರಿಗಳನ್ನು ಕೈಗೊಳ್ಳಲಾಗಿದ್ದು, ನೂರಾರು ಕಾರ್ಮಿಕರು ಕೆಲಸ ಮಾಡಿದ್ದಾರೆ. ಆದರೆ ಮೂರು ತಿಂಗಳು ಕಳೆದರೂ ದುಡಿದ ಹಣ ಕೈ ಸೇರದಿರುವುದು ಕಾರ್ಮಿಕರನ್ನು ಆರ್ಥಿಕ ಸಂಕಷ್ಟಕ್ಕೆ ತಳ್ಳಿದೆ. ದುಡಿದವರಿಗೆ ಕೂಲಿ ನೀಡುವುದೇ ಯೋಜನೆಯ ಮೂಲ ಉದ್ದೇಶವಾಗಿದ್ದರೆ, ಆ ಕೂಲಿ ಪಾವತಿಗೆ ಇಷ್ಟೊಂದು ವಿಳಂಬ ಏಕೆ? ಎಂಬ ಪ್ರಶ್ನೆ ಇದೀಗ ಗ್ರಾಮೀಣ ಭಾಗದಲ್ಲಿ ಕೇಳಿಬರುತ್ತಿದೆ.

ವೆಬ್‌ಸೈಟ್, ಮೊಬೈಲ್ ಆ್ಯಪ್‌ಗಳಲ್ಲೂ ಗೊಂದಲ

ವಿಬಿ-ಜಿ ರಾಮ್ ಜಿ ಯೋಜನೆಯ ಅನುಷ್ಠಾನದಲ್ಲಿ ತಾಂತ್ರಿಕ ಸಮಸ್ಯೆಗಳು ತಲೆದೋರಿರುವುದು ಅಧಿಕಾರಿಗಳಿಗೂ ಸವಾಲಾಗಿದೆ. ಕೃಷಿ, ತೋಟಗಾರಿಕೆ, ರೇಷ್ಮೆ, ಪಿಆರ್‌ಇಡಿ ಸೇರಿದಂತೆ ವಿವಿಧ ಇಲಾಖೆಗಳ ಕಾಮಗಾರಿಗಳ ಯೋಜನೆ ಹಾಗೂ ಅನುಷ್ಠಾನ ಪ್ರಕ್ರಿಯೆಯಲ್ಲಿ ವೆಬ್‌ಸೈಟ್ ಲಾಗಿನ್ ಸೇರಿದಂತೆ ಹಲವು ಸಮಸ್ಯೆಗಳು ಎದುರಾಗುತ್ತಿವೆ ಎನ್ನಲಾಗಿದೆ.

ಹಾಜರಾತಿ ದಾಖಲಿಸುವುದರಿಂದ ಹಿಡಿದು ಮೇಲಧಿಕಾರಿಗಳ ಅನುಮೋದನೆ ಪಡೆಯಲು ಹಲವು ಹಂತಗಳು ಇರುವುದರಿಂದ ಸಣ್ಣಪುಟ್ಟ ತಾಂತ್ರಿಕ ಅಡಚಣೆಗಳೂ ಪಾವತಿ ಪ್ರಕ್ರಿಯೆಯ ಮೇಲೆ ಪರಿಣಾಮ ಬೀರುತ್ತಿವೆ ಎನ್ನಲಾಗಿದೆ.

ಎನ್‌ಎಂಎಂಎಸ್ ಮೊಬೈಲ್ ಆ್ಯಪ್ ಮೂಲಕ ಕಾರ್ಮಿಕರ ಹಾಜರಾತಿಯನ್ನು ದಾಖಲಿಸುವ ಪ್ರಕ್ರಿಯೆಯೂ ಯೋಜನೆಯಡಿ ಕಡ್ಡಾಯವಾಗಿದೆ. ದಿನದ ಕೆಲಸಕ್ಕೆ ಸಂಬಂಧಿಸಿದಂತೆ ಹಾಜರಾತಿ ದಾಖಲಿಸಿ, ಅದರ ಸಾಕ್ಷ್ಯವನ್ನು ಮೇಲಧಿಕಾರಿಗಳಿಗೆ ಸಲ್ಲಿಸುವ ವ್ಯವಸ್ಥೆ ಜಾರಿಯಲ್ಲಿದೆ. ಇದರ ಜತೆಗೆ ಅನುಮೋದನೆಗೊಂಡ ಕ್ರಿಯಾಯೋಜನೆಯಲ್ಲಿರುವ ಕಾಮಗಾರಿಗಳನ್ನು ಮಾತ್ರ ಕೈಗೆತ್ತಿಕೊಳ್ಳಲು ಅವಕಾಶವಿದೆ. ಹೀಗಾಗಿ ಸ್ಥಳೀಯವಾಗಿ ಕೆಲಸದ ಬೇಡಿಕೆ ಇದ್ದರೂ, ಅಗತ್ಯ ಅನುಮೋದನೆ ಮತ್ತು ತಾಂತ್ರಿಕ ಪ್ರಕ್ರಿಯೆಗಳು ಪೂರ್ಣಗೊಳ್ಳುವವರೆಗೆ ಕಾಮಗಾರಿ ಕೈಗೆತ್ತಿಕೊಳ್ಳಲು ಸಾಧ್ಯವಾಗದ ಸ್ಥಿತಿ ಎದುರಾಗುತ್ತಿದೆ.

ಗ್ರಾಪಂ, ತಾಪಂ ಹಾಗೂ ಜಿಪಂ ಹಂತಗಳಲ್ಲಿ ಯೋಜನೆ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಸ್ಪಷ್ಟತೆ ಮತ್ತು ತರಬೇತಿಯ ಕೊರತೆಯೂ ಸಮಸ್ಯೆಗೆ ಮತ್ತಷ್ಟು ಕಾರಣವಾಗಿದೆ ಎನ್ನುವ ಮಾತು ಕೇಳಿಬರುತ್ತಿದೆ. ಯೋಜನೆಯ ಅನುಷ್ಠಾನದ ಹೊರೆ ಹೊತ್ತಿರುವ ಸಿಬ್ಬಂದಿಗೂ ಸಮಸ್ಯೆ ತಪ್ಪಿಲ್ಲ. ರಾಜ್ಯಾದ್ಯಂತ ಯೋಜನೆಯಲ್ಲಿ ಕಾರ್ಯನಿರ್ವಹಿಸುತ್ತಿರುವ 5,804 ನೌಕರರಿಗೆ ಐದು ತಿಂಗಳಿಂದ ಸಂಬಳ ಪಾವತಿಯಾಗಿಲ್ಲ ಎಂಬ ಆರೋಪ ಕೇಳಿಬಂದಿದೆ.

ಗ್ರಾಪಂ, ತಾಪಂ ಹಾಗೂ ಜಿಪಂ ವ್ಯಾಪ್ತಿಯಲ್ಲಿ ಗುತ್ತಿಗೆ ಆಧಾರದಲ್ಲಿ ಮೇಲ್ವಿಚಾರಕರಾಗಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗೂ ಭತ್ಯೆಗಳು ಪಾವತಿಯಾಗಿಲ್ಲ ಎನ್ನಲಾಗಿದೆ. ಆಡಳಿತಾತ್ಮಕ ವೆಚ್ಚಗಳ ಮಂಜೂರಾತಿ ಹಾಗೂ ಸಾಮಗ್ರಿ ಖರೀದಿಗೂ ಹಣದ ಕೊರತೆ ಎದುರಾಗಿದೆ ಎಂದು ನೌಕರರು ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಹೀಗಾಗಿ ಒಂದು ಕಡೆ ಕೆಲಸ ಮಾಡಿದ ಕಾರ್ಮಿಕರಿಗೆ ಕೂಲಿ ಬಾಕಿ ಉಳಿದಿದ್ದರೆ, ಮತ್ತೊಂದೆಡೆ ಯೋಜನೆ ಜಾರಿಗೆ ದುಡಿಯುತ್ತಿರುವ ಸಿಬ್ಬಂದಿಯೂ ಪಾವತಿಗಾಗಿ ಕಾಯುವ ಪರಿಸ್ಥಿತಿ ನಿರ್ಮಾಣವಾಗಿದೆ.

ಮನರೇಗಾದಲ್ಲಿ ಇಷ್ಟೊಂದು ಗೊಂದಲ ಇರಲಿಲ್ಲ

ಈ ಕುರಿತು ಈದಿನ.ಕಾಮ್ ಜೊತೆ ಮಾತನಾಡಿದ ಬಾದಾಮಿ ಗ್ರಾಮೀಣ ಕೂಲಿ ಕಾರ್ಮಿಕರ ಸಂಘಟನೆಯ ಜಿಲ್ಲಾ ಸಂಚಾಲಕ ಶಂಕರ ಹೂಗಾರ, ''ಮನರೇಗಾ ಯೋಜನೆಯಡಿ ಕೂಲಿ ಕಾರ್ಮಿಕರಿಗೆ ಕೆಲಸ ದೊರೆಯುತ್ತಿತ್ತು. ಆದರೆ ವಿಬಿ-ಜಿ ರಾಮ್ ಜಿ ಯೋಜನೆ ಜಾರಿಗೆ ಬಂದ ನಂತರ ನಿರ್ವಹಣೆಯಲ್ಲಿ ಹಲವು ಗೊಂದಲಗಳು ಕಾಣಿಸಿಕೊಂಡಿವೆ. ಕೆಲಸ ಮಾಡಿಸಿಕೊಂಡು ಸಂಬಳ ನೀಡದೆ ಇರುವುದರಿಂದ ಬಡ ಕಾರ್ಮಿಕರ ಮೇಲೆಯೇ ಮತ್ತೊಂದು ಹೊರೆ ಬಿದ್ದಂತಾಗಿದೆ. ಕೂಡಲೇ ದುಡಿದವರ ಕೂಲಿ ಪಾವತಿಸಬೇಕು'' ಎಂದು ಆಗ್ರಹಿಸಿದರು.

ಪಿಡಿಒ ಕ್ಷೇಮಾಭಿವೃದ್ಧಿ ಸಂಘದ ರಾಜ್ಯ ಗೌರವ ಅಧ್ಯಕ್ಷ ರಾಜು ವಾರದ, ''ವಿಬಿ-ಜಿ ರಾಮ್ ಜಿ ಯೋಜನೆ ಇನ್ನೂ ಅನುಷ್ಠಾನದ ಆರಂಭಿಕ ಹಂತದಲ್ಲಿದೆ. ಹೀಗಾಗಿ ಕೆಲವು ತಾಂತ್ರಿಕ ತೊಂದರೆಗಳು ಎದುರಾಗಿವೆ. ಅವುಗಳನ್ನು ಸರಿಪಡಿಸಲು ಸರ್ಕಾರ ಅಗತ್ಯ ಕ್ರಮ ಕೈಗೊಳ್ಳುತ್ತಿದೆ. ಹಣಕಾಸಿನ ಯಾವುದೇ ಕೊರತೆ ಸರ್ಕಾರದ ಮುಂದಿಲ್ಲ. ಸದ್ಯದ ಸಮಸ್ಯೆಗಳು ಶೀಘ್ರದಲ್ಲೇ ಬಗೆಹರಿಯಲಿದ್ದು, ಯಾರೂ ಆತಂಕಪಡುವ ಅಗತ್ಯವಿಲ್ಲ'' ಎಂದು ಸ್ಪಷ್ಟಪಡಿಸಿದರು.

ಒಟ್ಟಾರೆ, ಗ್ರಾಮೀಣ ಭಾಗದಲ್ಲಿ ಕೃಷಿ ಉದ್ಯೋಗ ಕುಂಠಿತಗೊಂಡಿರುವ ಸಂದರ್ಭದಲ್ಲಿ ಕೂಲಿ ಕಾರ್ಮಿಕರಿಗೆ ಸ್ಥಳೀಯವಾಗಿ ಉದ್ಯೋಗ ಒದಗಿಸುವ ಉದ್ದೇಶ ಹೊಂದಿರುವ ಯೋಜನೆಯೇ ಕೂಲಿ ಪಾವತಿ ವಿಳಂಬದಿಂದ ತನ್ನ ವಿಶ್ವಾಸಾರ್ಹತೆಯ ಪ್ರಶ್ನೆ ಎದುರಿಸುತ್ತಿದೆ.

ಕಾಮಗಾರಿ ರೂಪಿಸುವುದರಿಂದ ಹಿಡಿದು ಹಾಜರಾತಿ ದಾಖಲಿಸುವುದು, ಅನುಮೋದನೆ ಪಡೆಯುವುದು ಮತ್ತು ಕೂಲಿ ಪಾವತಿಸುವವರೆಗೆ ಇರುವ ಪ್ರಕ್ರಿಯೆ ಸರಳವಾಗಬೇಕು. ಇಲ್ಲವಾದರೆ ಬಡವರಿಗಾಗಿ ರೂಪಿಸಿದ ಉದ್ಯೋಗ ಯೋಜನೆಯ ಲಾಭವೇ ತಾಂತ್ರಿಕ ಅಡಚಣೆಗಳ ನಡುವೆ ಸಿಲುಕುವ ಅಪಾಯ ಎದುರಾಗಲಿದೆ.

ವರ್ಷಗಳಿಂದ ನೀರಿಲ್ಲದೆ ಸೊರಗಿದ ಗ್ರಾಮ; ಹತಾಶೆಯಿಂದ ಊರನ್ನೇ ಬಿಕರಿಗಿಟ್ಟ ನಿವಾಸಿಗಳು

ಒಂದೆಡೆ ನೀರಾವರಿ ಯೋಜನೆ, ಇನ್ನೊಂದೆಡೆ ನೀರಿಗಾಗಿ ಪರದಾಡುವ ರೈತರು. ಯೋಜನೆ ಆರಂಭವಾಗಿ ವರ್ಷಗಳೇ ಕಳೆದರೂ ತಮ್ಮ ಹೊಲಗಳಿಗೆ ನೀರು ಸಿಗದ ನೋವು ಮಹಾರಾಷ್ಟ್ರದ ಸೋಲಾಪುರ ಜಿಲ್ಲೆಯ ತುಳಸಿ ಗ್ರಾಮದ ರೈತರನ್ನು ಕಾಡುತ್ತಿದೆ. ಕೊನೆಗೆ ತಮ್ಮ ಅಸಹಾಯಕತೆ, ಆಕ್ರೋಶ ಮತ್ತು ನೋವನ್ನು ವ್ಯಂಗ್ಯದ ಮೂಲಕ ಹೊರಹಾಕಿರುವ ಗ್ರಾಮಸ್ಥರು, ಈ ಗ್ರಾಮ ಮಾರಾಟಕ್ಕಿದೆ ಎಂಬ ಪೋಸ್ಟರ್ ಹಾಕಿದ್ದಾರೆ.

ಸಾಮಾನ್ಯವಾಗಿ ಕಾಣುವ ಈ ಪೋಸ್ಟರ್ ಹಿಂದೆ ತುಳಸಿ ಗ್ರಾಮಸ್ಥರ 25 ವರ್ಷಗಳ ನೋವು ಮತ್ತು ನೀರಿಗಾಗಿ ನಡೆಸಿದ ಹೋರಾಟ ಇದೆ. ''ನಮ್ಮ ಗ್ರಾಮವನ್ನು ಖರೀದಿಸಲು ಯಾರಾದರೂ ಬಯಸಿದರೆ ಮುಂದೆ ಬರಬಹುದು'' ಎಂದು ಗ್ರಾಮದ ಸರಪಂಚ ಶರದ್ ಮೋರೆ ವ್ಯಂಗ್ಯವಾಗಿ ಹೇಳಿದ್ದಾರೆ. ಕಳೆದ 25 ವರ್ಷಗಳಿಂದ ಸರ್ಕಾರ ನಮ್ಮನ್ನು ಮೂರ್ಖರನ್ನಾಗಿ ಮಾಡುತ್ತಿದೆ. ಈ ಪೋಸ್ಟರ್ ಅದರ ವಿರುದ್ಧದ ನಮ್ಮ ಆಕ್ರೋಶ ಎಂದು ಅವರು ಹೇಳಿದ್ದಾರೆ.

ತುಳಸಿ ಗ್ರಾಮವು 2000ರಲ್ಲಿ ಆರಂಭವಾದ ಸೀನಾ-ಮಾಢಾ ಲಿಫ್ಟ್ ನೀರಾವರಿ ಯೋಜನೆಯಿಂದ ಕೇವಲ 9 ಕಿ.ಮೀ. ದೂರದಲ್ಲಿದೆ. ಆದರೂ ಯೋಜನೆಯ ನೀರು ಮಾತ್ರ ಗ್ರಾಮಕ್ಕೆ ತಲುಪಿಲ್ಲ. ಸುತ್ತಮುತ್ತಲಿನ ಗ್ರಾಮಗಳಲ್ಲಿ ನೀರಿನ ಅಗತ್ಯ ಹೆಚ್ಚಿರುವ ನಗದು ಬೆಳೆಗಳನ್ನು ಬೆಳೆಯಲಾಗುತ್ತಿದ್ದರೆ, ತುಳಸಿ ರೈತರು ಮಾತ್ರ ಮಳೆಯನ್ನೇ ನಂಬಿ ಕೃಷಿ ಮಾಡಬೇಕಾದ ಪರಿಸ್ಥಿತಿ ಇದೆ.

ಈ ವರ್ಷವೂ ಪರಿಸ್ಥಿತಿ ಭಿನ್ನವಾಗಿಲ್ಲ. ಮಾಢಾ ತಾಲೂಕಿನ ಹಲವು ಗ್ರಾಮಗಳಲ್ಲಿ ಕಳೆದ 45 ದಿನಗಳಿಂದ ಮಳೆಯೇ ಆಗಿಲ್ಲ. ತುಳಸಿಯ ಜಲಾಶಯಗಳಲ್ಲಿ ನೀರು ಬಹುತೇಕ ಇಲ್ಲ. ಬಾವಿಗಳು, ನೀರು ಇಂಗಿಸುವ ಪರ್ಕೋಲೇಷನ್ ಕೆರೆಗಳೂ ಒಣಗಿ ಹೋಗಿವೆ.

''ಜುಲೈನಿಂದಲೇ ನಮಗೆ ಟ್ಯಾಂಕರ್‌ಗಳ ಮೂಲಕ ನೀರು ಪೂರೈಸಲಾಗುತ್ತಿದೆ. ಮುಂಗಾರು ಮುಗಿದ ಬಳಿಕ ಸುಮಾರು 2,700 ಹೆಕ್ಟೇರ್ ಕೃಷಿ ಭೂಮಿ ಬಂಜರಾಗುವ ಸಾಧ್ಯತೆಯಿದೆ'' ಎಂದು ಶರದ್ ಮೋರೆ ಆತಂಕ ವ್ಯಕ್ತಪಡಿಸಿದ್ದಾರೆ.

ನೀರಿನ ಸಮಸ್ಯೆ ತೀವ್ರಗೊಂಡ ಹಿನ್ನೆಲೆಯಲ್ಲಿ ಗ್ರಾಮಸ್ಥರು ಗಣೇಶ ಚತುರ್ಥಿಯಂದು ಅನಿರ್ದಿಷ್ಟಾವಧಿ ಉಪವಾಸ ಸತ್ಯಾಗ್ರಹ ಆರಂಭಿಸಿದ್ದರು. ತಹಶೀಲ್ದಾರ್‌ಗೆ ಮನವಿ ಸಲ್ಲಿಸಿ, ಸಮಸ್ಯೆ ಬಗೆಹರಿಸದಿದ್ದರೆ ಆತ್ಮಹತ್ಯೆ ಮಾಡಿಕೊಳ್ಳುವ ಎಚ್ಚರಿಕೆಯನ್ನೂ ನೀಡಿದ್ದರು. ಜೊತೆಗೆ ಚುನಾವಣೆಯನ್ನು ಬಹಿಷ್ಕರಿಸುವುದಾಗಿಯೂ ಎಚ್ಚರಿಸಿದ್ದರು. ನಂತರ ಮಹಾರಾಷ್ಟ್ರದ ಜಲಸಂಪನ್ಮೂಲ ಸಚಿವ ರಾಧಾಕೃಷ್ಣ ವಿಖೆ ಪಾಟೀಲ್ ಗ್ರಾಮಸ್ಥರೊಂದಿಗೆ ಮಾತುಕತೆ ನಡೆಸಿದರು. ಮಾತುಕತೆಯ ಬಳಿಕ ಶುಕ್ರವಾರ ಪ್ರತಿಭಟನೆಯನ್ನು ಹಿಂಪಡೆಯಲಾಯಿತು.

ಈ ನಡುವೆ ಸೋಲಾಪುರ ಜಿಲ್ಲಾಧಿಕಾರಿ ಎಸ್. ಕಾರ್ತಿಕೇಯನ್, ನೀರಾವರಿ ಇಲಾಖೆ ತುಳಸಿ ಗ್ರಾಮದ ಜಲವಿಜ್ಞಾನ ಸಮೀಕ್ಷೆ ನಡೆಸಿದೆ ಎಂದು ತಿಳಿಸಿದ್ದಾರೆ. ಸಮೀಕ್ಷೆಯ ಫಲಿತಾಂಶದ ಆಧಾರದ ಮೇಲೆ ಗ್ರಾಮಕ್ಕೆ ಕಾಲುವೆ ಜಾಲ ನಿರ್ಮಿಸುವ ಕುರಿತು ರಾಜ್ಯ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗುವುದು ಎಂದು ಹೇಳಿದ್ದಾರೆ.

ಆದರೆ, ವರ್ಷಗಳಿಂದ ನೀರಿಗಾಗಿ ಕಾಯುತ್ತಿರುವ ತುಳಸಿ ಗ್ರಾಮಸ್ಥರಿಗೆ ಈ ಭರವಸೆ ಎಷ್ಟು ಬೇಗ ನೀರಾಗಿ ತಲುಪಲಿದೆ ಎಂಬುದೇ ಈಗಿನ ಪ್ರಶ್ನೆ. ನೀರಾವರಿ ಯೋಜನೆಯ ನೆರಳಲ್ಲೇ ನೀರಿಲ್ಲದೆ ನರಳುತ್ತಿರುವ ರೈತರ ವ್ಯಥೆ, ಗ್ರಾಮ ಮಾರಾಟಕ್ಕಿದೆ ಎಂಬ ಒಂದೇ ಪೋಸ್ಟರ್‌ನಲ್ಲಿ ವ್ಯಂಗ್ಯವಾಗಿ ಹೊರಬಿದ್ದಿದೆ.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR